ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 55 ಸಂಚಿಕೆ- 55 | PAGE-8 ಪುಟ-8 | ಶುಕ್ರವಾರ 04.04.2025 | RS.2/- ಬೆಲೆ 2/-

# ಆರೋಪ ಸಾಬೀತಾದರೇ ರಾಜೀನಾಮೆ:ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.3: ವಕ್ಫ್ ಬಿಲ್ ಮಂಡನೆಗೆ ಮುನ್ನವೇ ವಿಪಕ್ಷನಾಯಕ ಮಲ್ಲಿಕಾರ್ಜುನ ಖರ್ಗೆ ಗರಂ ಆದ ಪ್ರಸಂಗ ನಡೆಯಿತು. ವಕ್ಫ್ ಭೂಮಿ ಕಬ್ಜಾ ಮಾಡಿದ್ದಾರೆ ಎಂದು ಸುಳ್ಳು ಆರೋಪ ಮಾಡಿದ ಅನುರಾಗ್ ಠಾಕೂರ್ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿ ಇಂತಹ ರಾಜಕೀಯ ದಾಳಿಗಳಿಗೆ ನಾನು ಬೆದರುವ ಮಾತೇ ಇಲ್ಲ ಎಂದು ಪುಷ್ಪಾ ಸಿನಿಮಾ ಶೈಲಿಯಲ್ಲಿ ಅಬ್ಬರಿಸಿದರು.

ಅನುರಾಗ್ ಠಾಕೂರ್ ಅರೋಪಕ್ಕೆ ರಾಜ್ಯಸಭೆಯಲ್ಲಿ ಪ್ರತಿಕ್ರಿಯೆ ನೀಡಿದ ಅವರು, ವಕ್ಫ್ ಆಸ್ತಿ ಕಬಳಿಕೆ ಆರೋಪಕ್ಕೆ ತಿರುಗೇಟು ನೀಡಿದರು. ನನ್ನ ಜೀವನ ತೆರೆದ ಪುಸ್ತಕ, ಜೀವನದಲ್ಲಿ ಕಷ್ಟ ಮತ್ತು ಹೋರಾಟವಿದೆ. ಸಾರ್ವಜನಿಕ ಜೀವನದಲ್ಲಿ ಉನ್ನತ ಮೌಲ್ಯಗಳನ್ನು ಕಾಪಾಡಿಕೊಂಡು ಬಂದಿದ್ದೇನೆ. 60 ವರ್ಷ ರಾಜಕೀಯದಲ್ಲಿ ಇದನ್ನು ಬಯಸಿರಲಿಲ್ಲ. ಇಂತಹ ಆಧಾರ ರಹಿತ ಆರೋಪ ನಿರೀಕ್ಷಿಸಿರಲಿಲ್ಲ. ಅನುರಾಗ್ ಠಾಕೂರ್ ನನ್ನ ವಿರುದ್ಧ ಆಧಾರ ರಹಿತ ಆರೋಪ ಮಾಡಿದ್ದಾರೆ. ಅದನ್ನು ನಮ್ಮ ಸಂಸದರು ವಿರೋಧಿಸಿದ ಬಳಿಕ ಈ ಹೇಳಿಕೆ ವಾಪಸ್ ಪಡೆದು-ಕೊಂಡಿದ್ದಾರೆ. ಆದರೆ ಡ್ಯಾಮೇಜ್ ಆಗಿ ಹೋಗಿದೆ, ಮಾಧ್ಯಮಗಳಲ್ಲಿ ವರದಿಯಾಗಿದೆ. ಇದರಿಂದ ನನ್ನ ಚಾರಿತ್ರ್ಯ ಮತ್ತು ಗೌರವಕ್ಕೆ ಧ-ಕ್ಕೆಯಾಗಿದೆ ಎಂದು ಅಸಮಾಧಾನ ಹೊರಹಾಕಿದರು. ದೇವೇಗೌಡರು ಇದನ್ನು ಕೇಳಿಸಿಕೊಳ್ಳಬೇಕು. ಅವರು 50 ವರ್ಷದಿಂದ ನೋಡಿದ್ದಾರೆ. ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮತ್ತು ಎಐಸಿಸಿ ಅಧ್ಯಕ್ಷನಾಗಿ ನಾನು ಒತ್ತಾಯ ಪೂರ್ವಕವಾಗಿ ಎದ್ದು ನಿಲ್ಲಬೇಕಿದೆ. ಅನುರಾಗ್ ಠಾಕೂರ್ ಹೇಳಿಕೆಯನ್ನು ವಿರೋಧಿಸಬೇಕಿದೆ, ಠಾಕೂರ್ ಈ ಆರೋಪಗಳನ್ನು ಸಾಬೀತುಪಡಿಸಲು ಸಾಧ್ಯವಾಗದಿದ್ದರೇ ಅವರು ರಾಜೀನಾಮೆ ನೀಡಬೇಕು. ಅವರು ಸಾಬೀತು ಮಾಡಿದರೆ ನಾನು ರಾಜೀನಾಮೆ ನೀಡುತ್ತೇನೆ. ನಾನು ಇಂತಹ ಬೆದರಿಕೆಗೆ ಹೆದರುವುದಿಲ್ಲ ಎಂದು ಎಚ್ಚರಿಸಿದರು.

ನಾನು ಕಾರ್ಮಿಕನ ಮಗ, ಕಾರ್ಮಿಕ ನಾಯಕ, ಅಲ್ಲಿಂದ ಕಾಂಗ್ರೆಸ್ ಅಧ್ಯಕ್ಷನಾಗಿದ್ದೇನೆ. ದೇವೇಗೌಡರಿಗೆ ಎಲ್ಲವೂ ಗೊತ್ತಿದೆ. ವಿಧಾನಸಭೆಯಲ್ಲಿ ಯಾರು ನನಗೆ ಬೆರಳು ಎತ್ತಿ ಮಾಡನಾಡಿಲ್ಲ. ಈ ಬಿಜೆಪಿ ನಾಯಕರು ಬೆದರಿಸಿ ಬಗ್ಗಿಸುವ ಪ್ರಯತ್ನ ಮಾಡುತ್ತಿದ್ದಾರೆ. ನಾನು ಒಡೆದು ಹೊಗ್ತಿನಿ, ಬಗ್ಗುವುದಿಲ್ಲ,

(2ನೇ ಪುಟ ನೋಡಿ)

## ವಕ್ಫ್ ಮಸೂದೆ : ದಾನದ ಆಸ್ತಿ ದುರ್ಬಳಕೆಯಾಗಬಾರದು: ಹೆಚ್‌ಡಿಡಿ



ಮಲ್ಲಮ್ಮನುಡಿವಾರ್ತೆ ನವದೆಹಲಿ:ಏ.3: ವಕ್ಫ್ ಬೋರ್ಡ್‌ನ ಆಸ್ತಿ 1.2 ಲಕ್ಷ ಕೋಟಿ ರೂ. ಬೆಲೆ ಬಾಳುತ್ತದೆ. ಈ ಆಸ್ತಿಯನ್ನು ದಾನಿಗಳು ನೀಡಿದ್ದು, ಇದು ದುರ್ಬಳಕೆ ಆಗದಂತೆ ಪ್ರಧಾನಿ ಮೋದಿಯವರು ತಡೆಯಲು ಮುಂದಾಗಿದ್ದಾರೆ ಎಂದು ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರು ಹೇಳಿದ್ದಾರೆ.

ರಾಜ್ಯಸಭೆಯಲ್ಲಿ ವಕ್ಫ್ ಮಸೂದೆಗೆ ಬೆಂಬಲಿಸಿ ಅವರು ಮಾತನಾಡಿದರು. ಈ ವೇಳೆ, ದಾನದ ಆಸ್ತಿ ಉಳ್ಳವರ ಪಾಲಾಗದಂತೆ ಕಾಪಾಡಲು ಪ್ರಧಾನಿ ಮುಂದಾಗಿದ್ದಾರೆ. ಈ ಆಸ್ತಿಯನ್ನು ಸರ್ಕಾರ ನೀಡಿಲ್ಲ. ದಾನಿಗಳು ನೀಡಿದ ದಾನ ದುರ್ಬಳಕೆಯಾಗಬಾರದು ಎಂದಿದ್ದಾರೆ.

ದೇವರನ್ನು ನನ್ನ ಸ್ನೇಹಿತ ಅಲ್ಲಾ ಅಂತಾರೆ, ನಾನು ರಾಮ ಎನ್ನುತ್ತೇನೆ. ನಾನು ದೇವರಲ್ಲಿ ನಂಬಿಕೆ ಇಟ್ಟವನು. ತಿರುಪತಿ, ಅಜ್ಮೀರ್ ದರ್ಗಾ, ಗೊಲ್ಡನ್ ಟೆಂಪಲ್‌ಗೆ ಹೋಗುತ್ತೇನೆ. ಜೀವನದಲ್ಲಿ ಕೆಲವು ಸಿದ್ಧಾಂತ ಇಟ್ಟುಕೊಂಡಿದ್ದೇನೆ. ವಕ್ಫ್ ಮಸೂದೆ ಮತ್ತು ಸರ್ಕಾರವನ್ನು ಬೆಂಬಲಿಸುತ್ತೇನೆ ಎಂದಿದ್ದಾರೆ.

ಕರ್ನಾಟಕದಲ್ಲಿ ಉಪಲೋಕಾಯುಕ್ತ ಜಸ್ಟಿಸ್ ಆನಂದ್ ಅವರು ವರದಿ ನೀಡಿದ್ದಾರೆ. ನಾನು ಸಿಎಂ ಅಥವಾ ಯಾವುದೇ ನಾಯಕರ ಹೆಸರು ಉಲ್ಲೇಖಿಸಲ್ಲ. ವರದಿ ಮಾರಾಟ ಮಾಡಲಾಯಿತು, ಇದು ಬೆಳಕಿಗೆ ಬರಲಿಲ್ಲ. ಇಂದು ಅವರು ಆಡಳಿತ ನಡೆಸುತ್ತಿದ್ದಾರೆ. ಇಂದು ಅವರು ಸಹ ಇಲ್ಲಿ ಮಾತನಾಡಿದರು ಎಂದು ಪರೋಕ್ಷವಾಗಿ ಖರ್ಗೆಯವರಿಗೆ ಕುಟುಕಿದರು.

ನಾನು ಸಿಎಂ ಆಗಿ ಅಲ್ಪ

(2ನೇ ಪುಟ ನೋಡಿ)

## ನ್ಯಾಯಾಧೀಶರ ಮನೆಯಲ್ಲಿ ಚಿನ್ನಾಭರಣ ಕಳ್ಳತನ ; ಸಿಸಿಟಿವಿಯಲ್ಲಿ ದೃಶ್ಯ ಸೆರೆ




ಬೀದರ.ಏ.03:ನ್ಯಾಯಾಧೀಶರ ಮನೆಯಲ್ಲಿ ಕಳ್ಳತನ ನಡೆದಿದೆ. ಬೀದರ್ ನಗರದ ಜನವಾಡ ರಸ್ತೆಯಲ್ಲಿರುವ ನ್ಯಾಯಾಧೀಶರ ವಸತಿ ಗೃಹದಲ್ಲಿ ಘಟನೆ ನಡೆದಿದೆ. ಮನೆಗೆ ನುಗ್ಗಿದ ಖದೀಮರು ಸುಮಾರು 7 ಲಕ್ಷ ರೂ.ಗಿಂತಲೂ ಅಧಿಕ ಮೌಲ್ಯದ ಚಿನ್ನಾಭರಣ ಕಳ್ಳತನ ಮಾಡಿ ಪರಾರಿಯಾಗಿದ್ದಾರೆ.

ಬೀದರ್‌ನ 2ನೇ ಹೆಚ್ಚುವರಿ ಸಿವಿಲ್ ಮತ್ತು 2ನೇ ಜೆಎಂಎಫ್‌ಸಿ ಜಡ್ಜ್ ಎಂ.ಡಿ.ಶೇಜ್ ಚೌಟಾಯಿ ವಸತಿ ಗೃಹದಲ್ಲಿ ಕಳ್ಳತನವಾಗಿದೆ.

ಕುಟುಂಬದ ಸದಸ್ಯರೆಲ್ಲರು ಸೇರಿ ಕೊಪ್ಪಳಕ್ಕೆ ಹೋಗಿದ್ದರು. ಈ ವೇಳೆ ಮನೆ ನುಗ್ಗಿದ ಕಳ್ಳರು ಬರೋಬ್ಬರಿ ಏಳೂವರೆ ಲಕ್ಷ ಮೌಲ್ಯದ ಚಿನ್ನಾಭರಣವನ್ನು ಕದ್ದು, ಪರಾ-ರಿಯಾಗಿದ್ದಾರೆ. ಇನ್ನೂ ಕಳ್ಳತನ ಮಾಡುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಈ ಕುರಿತು ನ್ಯೂ ಟೌನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಮುಖ್ಯ ಶಿಕ್ಷಕರ ಸಂಬಳ ತಡೆಹಿಡಿಯಲು ಡಿಡಿಪಿಐ ನಿರ್ದೇಶನ



ಬೀದರ.ಏ.03:ರಾಜ್ಯ ಸರ್ಕಾರ ನಿಗದಿಪಡಿಸಿದ ಆನ್‌ಲೈನ್ ಕಾರ್ಯ ನೆರವೇರಿಸದ ಸರ್ಕಾರಿ ಶಾಲೆಯ ಮುಖ್ಯಶಿಕ್ಷಕರ ಏಪ್ರಿಲ್ ತಿಂಗಳ ಸಂಬಳ ತಡೆ ಹಿಡಿಯಬೇಕೆಂದು ಶಾಲಾಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಸಲೀಂ ಪಾಷಾ ಅವರು ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. 'ಅಪಾರ್' ಪ್ರಗತಿ, ಆಧಾರ್ ಪರಿಶೀಲನೆ, 'ಡ್ರಾಪ್‌ಬಾಕ್ಸ್' ವಿದ್ಯಾರ್ಥಿಗಳು, ವಿದ್ಯಾರ್ಥಿಗಳ ವಿವರ ಅಪ್‌ಡೇಟ್ ಮಾಡುವುದು, ಶಿಕ್ಷಕರ ಡೇಟಾಬೇಸ್ ವರದಿಯನ್ನು ಆನ್‌ಲೈನ್‌ನಲ್ಲಿ ನಮೂದಿಸಬೇಕು. ಇದರ ಲಾಗ್ ಇನ್ ಆಯಾ ಶಾಲೆಯ ಮುಖ್ಯಶಿಕ್ಷಕರಿಗೆ ನೀಡಲಾಗಿದೆ.

ಈ ಸಂಬಂಧ ಹಲವು ಸಲ ಝೂಮ್ ಸಭೆಗಳು, ಮುಖ್ಯಶಿಕ್ಷಕರ ಸಭೆಗಳು, ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳ ಸಭೆಗಳು, ಸಿಆರ್‌ಪಿ ಸಭೆಗಳು, ಈ ಸಂಬಂಧ ಹಲವು ಸಲ ಕಾರಣ ಕೇಳಿ ನೋಟಿಸ್ ನೀಡಿದ್ದರೂ ಸೂಕ್ತ ರೀತಿಯಲ್ಲಿ ಕೆಲಸ ನಿರ್ವಹಿಸದೆ ನಿರ್ಲಕ್ಷ್ಯ ತೋರುತ್ತಿರುವ ಹಿನ್ನೆಲೆಯಲ್ಲಿ ಸಮಗ್ರ ಶಿಕ್ಷಣ ಕರ್ನಾಟಕದ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು ಆದ ಡಿಡಿಪಿಐ ಅವರು ಕ್ರಮಕ್ಕೆ ಮುಂದಾಗಿದ್ದಾರೆ. ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ವಿವರ ದಾಖಲಿಸುವುದರಲ್ಲಿ 2024ನೇ ವರ್ಷಾಂತ್ಯಕ್ಕೆ ಬೀದರ್ ಜಿಲ್ಲೆ

(2ನೇ ಪುಟ ನೋಡಿ)

## ಬಿಸಿಲಿನಿಂದ ಕಂಗೆಟ್ಟಿದ್ದ ಜನತೆಗೆ ತಂಪೆರೆದ ಮಳೆರಾಯ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 03 : ಜಿಲ್ಲೆಯ ವಿವಿಧೆಡೆ ಗುರುವಾರ ಮಧ್ಯಾಹ್ನ ಗುಡುಗು, ಗಾಳಿ ಸಹಿತವಾಗಿ ಅರ್ಧ ಗಂಟೆಗೂ ಹೆಚ್ಚು ಕಾಲ ಮಳೆಯಾಗಿದ್ದು, ಬಿಸಿಲು-ಸೆಕೆಯಿಂದ ಕಂಗೆಟ್ಟಿದ್ದ ಜನತೆಗೆ ಸ್ವಲ್ಪ ನಿಟ್ಟುಸಿರು ಬಿಡುವಂತಾಗಿದೆ.

ಔರಾದ್, ಬೀದರ್ ತಾಲೂಕಿನ ಕೆಲ ಭಾಗಗಳಲ್ಲಿ ಮಳೆಯಾಗಿದೆ.

ಉಳಿದ ತಾಲೂಕುಗಳಲ್ಲಿ ಗಾಳಿ, ಗುಡುಗಿನ ಆರ್ಭಟದಲ್ಲೇ ಮುಗಿದಿದೆ. ಔರಾದನಲ್ಲಿ ಅರ್ಧ ಗಂಟೆಗೂ ಅಧಿಕ ಕಾಲ ಧಾರಾಕಾರ ಮಳೆ ಬಿದ್ದಿದೆ.

ಬೆಳಿಗ್ಗೆಯಿಂದ ಮೋಡ ಕವಿದ ವಾತಾವರಣ ಜತೆಗೆ ಸೆಕೆಯಿದ್ದು, ಮಳೆಯ ಮುನ್ಸೂಚನೆ ನೀಡಿತ್ತು. ಮಧ್ಯಾಹ್ನ 3 ರ ಸುಮಾರಿಗೆ ಮಳೆಯಾಗಿದೆ. ಬೀದರ್‌ನ ಕೆಲವೆಡೆ ಜಿಟಜಿಟಿ ಮಳೆ ಸುರಿದಿದೆ.





ಕಳೆದ ಕೆಲವು ದಿನಗಳಿಂದ ಬಿಸಿಲಿನ ತೀವ್ರತೆಯಿಂದ ಕಂಗೆಟ್ಟಿದ್ದ ಜನತೆಗೆ ಮಳೆಯಿಂದ ಸ್ವಲ್ಪ ತಂಪಾಗಿದೆ. ಮೋಡ ಕವಿದ ವಾತಾವರವಿದ್ದು, ಸಂಜೆ ಉತ್ತಮ ಮಳೆ ಆಗುವ ನಿರೀಕ್ಷೆಯಿದೆ.

## ಪತ್ನಿ, ಇಬ್ಬರು ಮಕ್ಕಳನ್ನು ಕೊಲೆಗೈದು ಪತಿ ಆತ್ಮಹತ್ಯೆ




ಮಲ್ಲಮ್ಮನುಡಿವಾರ್ತೆ ಕಲಬುರಗಿ:ಏ.3: ಪತ್ನಿ ಜೊತೆಗಿನ ಸಂಘರ್ಷದಿಂದ ಬೇಸತ್ತಿದ್ದ ವ್ಯಕ್ತಿಯೋರ್ವ ಪತ್ನಿ ಮತ್ತು ಇಬ್ಬರು ಮಕ್ಕಳನ್ನು ಕೊಂದು ತಾನೂ ನೇಣಿಗೆ ಶರಣಾಗಿರುವ ಘನಘೋರ ಘಟನೆ ಕಲಬುರಗಿಯಲ್ಲಿ ವರದಿಯಾಗಿದೆ.

ಕಲಬುರಗಿ ಜಿಲ್ಲೆಯ ಗಾಬರೆ

(2ನೇ ಪುಟ ನೋಡಿ)

## ಅತ್ಯಾಚಾರ ಪ್ರಕರಣ: ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಶಾಕ್



ಮಲ್ಲಮ್ಮನುಡಿ ವಾರ್ತೆ

ಬೆಂಗಳೂರು:ಏ.3: ಅತ್ಯಾಚಾರ ಪ್ರಕರಣದಲ್ಲಿ ಜೈಲುಪಾಲಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಕೋರ್ಟ್ ಶಾಕ್ ನೀಡಿದೆ.

ಅತ್ಯಾಚಾರ ಪ್ರಕರಣದಿಂದ ಕೈಬಿಡುವಂತೆ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿಯನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ವಜಾಗೊಳಿಸಿದೆ.

ಅಲ್ಲದೆ ಅತ್ಯಾಚಾರ ಪ್ರಕರಣದ ವಿಚಾರಣೆಯನ್ನು ಏ.9ಕ್ಕೆ ಮುಂದೂಡಿದೆ. ಕೆ.ಆರ್ ನಗರ ಸಂತ್ರಸ್ತ ಮಹಿಳೆ ಅತ್ಯಾಚಾರ ಪ್ರಕರಣದಲ್ಲಿ ತನ್ನ ಪಾತ್ರ ಇಲ್ಲ. ಆದ್ದರಿಂದ ಪ್ರಕರಣದಿಂದ ತನ್ನನ್ನು ಕೈಬಿಡುವಂತೆ ಪ್ರಜ್ವಲ್ ರೇವಣ್ಣ ಪರ ವಕೀಲರು ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ. ಇದೇ ವೇಳೆ ಆರೋಪಿ ಮೇಲಿರುವ ಆರೋಪಗಳನ್ನು ನ್ಯಾಯಾಧೀಶರು ಒತ್ತಿ ಹೇಳಿದರು. ಆರೋಪ ಓದಿ ಹೇಳುವಾಗ ನ್ಯಾಯಾಧೀಶರ ಮುಂದೆಯೇ ಕೈ ಮುಗಿದು ಪ್ರಜ್ವಲ್ ರೇವಣ್ಣ ಕಣ್ಣೀರು ಹಾಕಿದ ಘಟನೆ ನಡೆಯಿತು.


## ಆರು ಕ್ವಿಂಟಾಲ್ ಪಡಿತರ ಅಕ್ಕಿ ಜಪ್ತಿ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಏ.3: ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ ಬಡವರಿಗೆ ನೀಡುವ ಪಡಿತರ ಅಕ್ಕಿಯನ್ನು ಕಡಿಮೆ ಬೆಲೆಗೆ ಖರೀದಿಸಿ ಹೆಚ್ಚಿನ ಬೆಲೆಗೆ ಕಾಳಸಂತೆಯಲ್ಲಿ ಮಾರಲು ಸಂಗ್ರಹಿಸುತ್ತಿರುವ ಪಡಿತರ ಅಕ್ಕಿ ಸುಮಾರು 20,400( ಇಪ್ಪತ್ತು ಸಾವಿರದ ನಾಲ್ಕು ನೂರು) ರೂ ಮೌಲ್ಯದ 6ಕ್ವಿಂಟಾಲ್ ಪಡಿತರ ಅಕ್ಕಿಯನ್ನು ಖಚಿತ ಮಾಹಿತಿ ಮೇರೆಗೆ ತಾಲೂಕಿನ ಮನ್ನಾಎಖೇಳ್ಳಿ ಗ್ರಾಮದ ಹೊರವಲಯದ ಬುದ್ಧ ವಿಹಾರ ಗುರುವಾರ ಆಹಾರ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ದಾಳಿ ನಡೆಸಿ ಪಡಿತರ ಅಕ್ಕಿಯನ್ನು ಜಪ್ತಿ ಮಾಡಲಾಗಿದೆ. ಮನ್ನಾಎಖೇಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಳೆ ಮತ್ತು ತಾಪಮಾನ ಏರಿಕೆ: ದೇಶಾದ್ಯಂತ ಹವಾಮಾನ ಬದಲಾವಣೆ ಐಎಂಡಿ ಎಚ್ಚರಿಕೆ



ಮಲ್ಲಮ್ಮನುಡಿವಾರ್ತೆ ನವದೆಹಲಿ:ಏ.3: ದೇಶಾದ್ಯಂತ ಹವಾಮಾನದಲ್ಲಿನ ಬದಲಾವಣೆಗಳ ಕುರಿತು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದ್ದು, ಚಂಡಮಾರುತದ ಪರಿಚಲನೆಯು ಅನೇಕ ರಾಜ್ಯಗಳಲ್ಲಿ ಅತ್ಯಂತ ಹೆಚ್ಚಿನ ತಾಪಮಾನದ ಜೊತೆಗೆ ಮಳೆ ಸಹ ಬರಬಹುದು

(2ನೇ ಪುಟ ನೋಡಿ)

## ಅಮೆರಿಕ ಸುಂಕ ಹೇರಿಕೆಯಿಂದ ದೇಶದ ಆರ್ಥಿಕತೆ ನಾಶ: ರಾಹುಲ್



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.3:ಕೇಂದ್ರಸರ್ಕಾರದ ವಿದೇಶಾಂಗನೀತಿಯನ್ನು ತೀವ್ರವಾಗಿ ಟೀಕಿಸಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಭಾರತದ ರಫ್ತುಗಳ ಮೇಲಿನ ಅಮೆರಿಕದ ಸುಂಕ ಹೇರಿಕೆಯಿಂದ ದೇಶದ ಆರ್ಥಿಕತೆ ನಾಶವಾಗುತ್ತದೆ ಎಂದು ಗುರುವಾರ ಎಚ್ಚರಿಸಿದ್ದಾರೆ.

(2ನೇ ಪುಟ ನೋಡಿ)

## ಭಾರತದಲ್ಲಿ 22 ಲಕ್ಷ ನುರಿತ ಚಾಲಕರ ಕೊರತೆ: ಗಡ್ಕರಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಏ.3:ಭಾರತ 22 ಲಕ್ಷ ನುರಿತ ಚಾಲಕರ ಕೊರತೆಯನ್ನು ಎದುರಿಸುತ್ತಿದೆ ಎಂದು ಕೇಂದ್ರ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಗುರುವಾರ ಲೋಕಸಭೆಗೆ ತಿಳಿಸಿದ್ದಾರೆ. ಅಲ್ಲದೆ ಚಾಲಕರಿಗೆ ಸೂಕ್ತ ತರಬೇತಿ ಸೌಲಭ್ಯಗಳ ಕೊರತೆಯು ಅನೇಕ ಅಪಘಾತಗಳಿಗೆ ಕಾರಣವಾಗುತ್ತಿದೆ ಎಂದು ಒತ್ತಿ ಹೇಳಿದ್ದಾರೆ.

ಲೋಕಸಭೆಯಲ್ಲಿ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ತಡೆಹಿಡಿಯಲು ಡಿಡಿಪಿಐ ನಿರ್ದೇಶನ

ಕೊನೆಯ ಸ್ಥಾನದಲ್ಲಿತ್ತು. ಇದಕ್ಕೆ ಸಮಗ್ರ ಶಿಕ್ಷಣ ಕರ್ನಾಟಕದ ರಾಜ್ಯ ಯೋಜನಾ ನಿರ್ದೇಶಕರು ಅಸಮಾಧಾನ ವ್ಯಕ್ತಪಡಿಸಿದ್ದರು. ಮಾರ್ಚ್ ಎರಡನೇ ವಾರ ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಅವರು ಸಂಬಂಧಿಸಿದವರನ್ನು ತರಾಟೆಗೆ ತೆಗೆದುಕೊಂಡಿದ್ದರು. ಮಕ್ಕಳ ವಿಷಯದಲ್ಲಿ ನಿರ್ಲಕ್ಷ್ಯ ತೋರದಂತೆಯೂ ಎಚ್ಚರಿಕೆ ನೀಡಿದ್ದರು.

ಈ ಹಿನ್ನೆಲೆಯಲ್ಲಿ ಡಿಡಿಪಿಐ ಅವರು ಜಿಲ್ಲೆಯ ಬಸವಕಲ್ಯಾಣ, ಔರಾದ್, ಭಾಲ್ಕಿ, ಬೀದರ್ ಹಾಗೂ ಹುಮನಾಬಾದ್ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ 2025ರ ಮಾರ್ಚ್ 28ರಂದು ಜ್ಞಾಪನ ಪತ್ರ ಕಳಿಸಿ, ಶೇ 100ರಷ್ಟು ಪ್ರಗತಿ ಸಾಧಿಸದ ಮುಖ್ಯಶಿಕ್ಷಕರ ಏಪ್ರಿಲ್ ತಿಂಗಳ ವೇತನ ಬಿಡುಗಡೆಗೊಳಿಸದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಸಲೀಂ ಪಾಷಾ, ಡಿಡಿಪಿಐಹೋದ ವರ್ಷಾಂತ್ಯದ ಹೊತ್ತಿಗೆ ಆನ್‌ಲೈನ್ ವಿವರ ದಾಖಲಿಸುವುದರಲ್ಲಿ ಬೀದರ್ ಕೊನೆಯ ಸ್ಥಾನದಲ್ಲಿತ್ತು. ಈಗ ಕೆಲಸ ವೇಗವಾಗಿ ನಡೆಯುತ್ತಿದೆ. ಕೆಲಸ ಮಾಡದವರ ಸಂಬಳ ತಡೆ ಹಿಡಿಯಲು ನಿರ್ಧರಿಸಲಾಗಿದೆ.

### ಕೊಲೆಗೈದು ಪತಿ ಆತ್ಮಹತ್ಯೆ

ಲೇಔಟ್‌ನ ಅಪಾರ್ಟ್ಮೆಂಟ್ ನಲ್ಲಿ ಈ ಘಟನೆ ನಡೆದಿದ್ದು, ವೃತ್ತಿಯಲ್ಲಿ ಸರ್ಕಾರಿ ನೌಕರನಾಗಿರುವ ಸಂತೋಷ್ ತನ್ನ ಪತ್ನಿ ಹಾಗೂ ಇಬ್ಬರು ಮಕ್ಕಳನ್ನ ಕೊಂದು ತಾನೂ ನೇಣಿಗೆ ಶರಣಾಗಿದ್ದಾನೆ. ಮೂಲಗಳ ಪ್ರಕಾರ ಸಂತೋಷ್ ಕಲಬುರಗಿಯ ಟೆಸ್ಕಾಂನಲ್ಲಿ ಸೀನಿಯರ್ ಅಕೌಂಟೆಂಟ್ ಆಗಿ ಕೆಲಸ ಮಾಡುತ್ತಿದ್ದ. 10 ವರ್ಷಗಳ ಹಿಂದೆ ಶೃತಿ (35) ಎಂಬಾಕೆಯನ್ನು ಮದುವೆಯಾಗಿದ್ದ. ಈ ಜೋಡಿಗೆ ಇಬ್ಬರು (9ವರ್ಷದ ಮುನಿಶ್ ಹಾಗೂ ನಾಲ್ಕು ತಿಂಗಳ ಮಗು ಅನಿಶ್) ಗಂಡು ಮಕ್ಕಳಿದ್ದರು.

ಕೌಟುಂಬಿಕ ಕಲಹ ಹಿನ್ನಲೆ ಪತ್ನಿ ಇಬ್ಬರು ಮಕ್ಕಳ್ಳನ್ನ ಕೊಲೆ ಮಾಡಿರುವ ಸಂತೋಷ್ ಕೊನೆಗೆ ತಾನೂ ಕೂಡ ಮನೆಯ ಫ್ಯಾನ್‌ಗೆ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೇಲ್ನೋಟಕ್ಕೆ ಕೌಟುಂಬಿಕ ಕಲಹದಿಂದಲೇ ಸಂತೋಷ್ ತನ್ನ ಪತ್ನಿ, ಮಕ್ಕಳನ್ನ ಕೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎನ್ನೋದು ಗೊತ್ತಾಗಿದೆ. ನಾಲ್ವರ ಮೃತದೇಹವನ್ನ ಮರಣೋತ್ತರ ಪರೀಕ್ಷೆಗಾಗಿ ಜಿಮ್ಸ್ ಆಸ್ಪತ್ರೆಯ ಶವಗಾರಕ್ಕೆ ಕಳುಹಿಸಲಾಗಿದೆ.

ಕೌಟುಂಬಿಕ ಕಲಹ

ಮದುವೆಯಾದ ಹೊಸದರಲ್ಲಿ ಗಂಡ ಹೆಂಡತಿ ಚೆನ್ನಾಗಿಯೇ ಇದ್ದರಂತೆ. ಆದರೆ ಇತ್ತೀಚೆಗೆ ಅದೇನಾಯ್ತೋ ಗೊತ್ತಿಲ್ಲ ಹೆಂಡತಿಯನ್ನ ತವರು ಮನೆಗೂ ಕಳುಹಿಸದೇ ಸಂತೋಷ್ ಕಿರುಕುಳ ನೀಡುತ್ತಿದ್ದ ಎಂದು ಶೃತಿ ಮನೆಯವರು ಆರೋಪಿಸಿದ್ದಾರೆ. ಪ್ರತಿಯೊಂದು ವಿಚಾರಕ್ಕೂ ಪತ್ನಿಯೊಂದಿಗೆ ಕಿರಿಕ್ ಮಾಡ್ತಿದ್ದ ಸಂತೋಷ್, ನಿನ್ನೆ ಸಂಜೆ ಆಫೀಸ್‌ನಿಂದ ಬರುತ್ತಿದ್ದಂತಯೇ ಮತ್ತೆ ಗಲಾಟೆ ಶುರು ಮಾಡಿದ್ದಾರೆ. ಅಲ್ಲದೇ ತನ್ನ ಪತ್ನಿಯ ತಂದೆಗೆ ಫೋನ್ ಮಾಡಿ ಗಲಾಟೆ ವಿಚಾರ ತಿಳಿಸಿದ್ದಾನೆ. ಗಲಾಟೆ ತಾರಕಕ್ಕೇರಿದಾಗ ಸಂತೋಷ್, ತನ್ನ ಹಸುಗೂಸನ್ನು ಕೂಡ ಲೆಕ್ಕಿಸದೇ ಮೂವರನ್ನು ಕೊಂದು ತಾನೂ ನೇಣಿಗೆ ಶರಣಾಗಿದ್ದಾನೆ.

ಡೆತ್ ನೋಟ್ ಪತ್ತೆ

ಪ್ರಕರಣ ದಾಖಲಿಸಿಕೊಂಡಿರುವ ಸ್ಟೇಷನ್ ಬಜಾರ್ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಸಂತೋಷ್ ಡೆತ್ ನೋಟ್ ಬರೆದಿಟ್ಟಿದ್ದಾರೆ ಎಂದು ಹೇಳಲಾಗಿದ್ದು, ಈ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಈ ಬಗ್ಗೆ ಮಾತನಾಡಿರುವ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್ ಡಿ ಅವರು, 'ಡೆತ್ ನೋಟ್‌ನಲ್ಲಿ ಅವರ ನಡುವೆ ಆಗಾಗ್ಗೆ ತಪ್ಪು ತಿಳುವಳಿಕೆ ಮತ್ತು ಜಗಳಗಳು ನಡೆಯುತ್ತಿದ್ದವು ಎಂದು ಉಲ್ಲೇಖಿಸಲಾಗಿದೆ. ನಾವು ಕೊಲೆ ಪ್ರಕರಣ ದಾಖಲಿಸಿದ್ದೇವೆ ಎಂದಿದ್ದಾರೆ.

ಅಂತೆಯೇ ಅಪರಾಧ ವಿಭಾಗದ ಅಧಿಕಾರಿ ತಂಡ, ವಿಧಿವಿಜ್ಞಾನ ಪ್ರಯೋಗಾಲಯ ಮತ್ತು ಬೆರಳಚ್ಚು ತಜ್ಞರು ಸ್ಥಳವನ್ನು ಪರಿಶೀಲಿಸಿದ್ದಾರೆ. ಘಟನೆಯ ನಿಖರವಾದ ಸಮಯವನ್ನು ಇನ್ನೂ ನಿರ್ಧರಿಸಲಾಗಿಲ್ಲ, ಆದರೆ ಅದು ಸಂಜೆ 6–8 ಗಂಟೆಯ ನಡುವೆ ಸಂಭವಿಸಿರಬಹುದು. ಕುಟುಂಬದ ಸದಸ್ಯರು ಸಂತೋಷ್ ಆತ್ಮಹತ್ಯೆ ಮಾಡಿಕೊಳ್ಳದಂತೆ ತಡೆಯಲು ಪ್ರಯತ್ನಿಸಿದರು, ಆದರೆ ವ್ಯರ್ಥವಾಯಿತು. ಅವರು ಬಂದಾಗ, ಬಾಗಿಲು ಒಳಗಿನಿಂದ ಲಾಕ್ ಆಗಿತ್ತು. ಅದನ್ನು ಒಡೆದಾಗ, ಅವರು ಶವಗಳು ಇತ್ತು ಎಂದು ತಿಳಿಸಿದ್ದಾರೆ.

### ಹವಾಮಾನ ಬದಲಾವಣೆ ಐಎಂಡಿ ಎಚ್ಚರಿಕೆ

ಎಂದು ಎಚ್ಚರಿಕೆ ನೀಡಿದೆ.ಐಎಂಡಿ ಮುನ್ಸೂಚನೆಯ ಪ್ರಕಾರ, ಏಪ್ರಿಲ್ ನಿಂದ ಜೂನ್ ವರೆಗೆ ಭಾರತದಲ್ಲಿ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ. ಮಧ್ಯ, ಪೂರ್ವ ಭಾರತ ಮತ್ತು ವಾಯುವ್ಯ ಬಯಲು ಪ್ರದೇಶಗಳಲ್ಲಿ ಹೆಚ್ಚಿನ ಸಮಯ ಶಾಖದ ಅಲೆಗಳು ಮೇಲುಗೈ ಸಾಧಿಸುವ ಸಾಧ್ಯತೆಯಿದೆ ಎನ್ನಲಾಗಿದೆ.

ರಾಷ್ಟ್ರ ರಾಜಧಾನಿಯಲ್ಲಿ ತಾಪಮಾನ ಏರಿಕೆ

ದೆಹಲಿಯಲ್ಲಿ ತಾಪಮಾನ ಹೆಚ್ಚಾದಂತೆ, ಮುಂದಿನ ದಿನಗಳಲ್ಲಿ ಬಿಸಿ ಗಾಳಿ ಬೀಸುವ ಸಾಧ್ಯತೆ ಇದೆ. ಏಪ್ರಿಲ್ 3 ರಿಂದ 5 ರವರೆಗೆ ಗರಿಷ್ಠ ತಾಪಮಾನವು 40 ಡಿಗ್ರಿ ಸೆಲ್ಸಿಯಸ್ ದಾಟಬಹುದು ಎಂದು ಐಎಂಡಿ ಮುನ್ಸೂಚನೆ ನೀಡಿದೆ. ರಾಷ್ಟ್ರ ರಾಜಧಾನಿಯಲ್ಲಿ ಗರಿಷ್ಠ ತಾಪಮಾನ ಈಗಾಗಲೇ 34.5 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಇದು ಇನ್ನೂ ಹೆಚ್ಚಾಗುವ ನಿರೀಕ್ಷೆಯಿದೆ.

ಮಧ್ಯಪ್ರದೇಶ, ಮಹಾರಾಷ್ಟ್ರ, ಗುಜರಾತ್, ಆಂಧ್ರಪ್ರದೇಶ, ಛತ್ತೀಸ್‌ಗಢ ಮತ್ತು ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಹೆಚ್ಚಿನ ತಾಪಮಾನ ಮತ್ತು ಶಾಖದ ಅಲೆಗಳು ಬೀಸುವ ಸಾಧ್ಯತೆಯಿದೆ. ದಕ್ಷಿಣ ಮತ್ತು ಮಧ್ಯ ಕರ್ನಾಟಕದ ಜಿಲ್ಲೆಗಳಾದ ಮೈಸೂರು, ಹಾಸನ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಚಾಮರಾಜನಗರದಲ್ಲಿ ಸಾಧಾರಣ ಮಳೆಯಾಗಲಿದೆ. ಗಂಟೆಗೆ 40 ರಿಂದ 50 ಕಿ.ಮೀ. ವೇಗದಲ್ಲಿ ಗಾಳಿ ಬೀಸಲಿದೆ ಎಂದು ತಿಳಿಸಿದೆ.

ಏಪ್ರಿಲ್ 4ರಂದು ಮಳೆ

ಮಧ್ಯ, ದಕ್ಷಿಣ ಮತ್ತು ಈಶಾನ್ಯ ರಾಜ್ಯಗಳಲ್ಲಿ ಭಾರೀ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದ್ದು, ಉತ್ತರ ಮತ್ತು ಪಶ್ಚಿಮ ರಾಜ್ಯಗಳಲ್ಲಿ ಹೆಚ್ಚಿನ ತಾಪಮಾನ ಉಂಟಾಗಬಹುದು ಎಂದು ಮುನ್ಸೂಚನೆ ನೀಡಲಾಗಿದೆ. ಏಪ್ರಿಲ್ 4 ರವರೆಗೆ ದೇಶದ ಹಲವು ಭಾಗಗಳಲ್ಲಿ ಭಾರೀ ಮಳೆಯಾಗಲಿದೆ. ಏಪ್ರಿಲ್ 4 ರವರೆಗೆ ಮಧ್ಯಪ್ರದೇಶ, ಕರ್ನಾಟಕ, ಕೇರಳ, ಗೋವಾ ಮತ್ತು ಮಹಾರಾಷ್ಟ್ರದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯಿದೆ. ಗಾಳಿಯ ವೇಗ ಗಂಟೆಗೆ 30 ರಿಂದ 60 ಕಿ.ಮೀ. ತಲುಪುವ ಸಾಧ್ಯತೆಯಿದೆ ಎಂದು ಐಎಂಡಿ ಎಚ್ಚರಿಸಿದೆ.

### ನುರಿತ ಚಾಲಕರ ಕೊರತೆ: ಗಡ್ಕರಿ

ಪ್ರಶ್ನೋತ್ತರ ಅವಧಿಯಲ್ಲಿ, ಚಾಲಕರಿಗೆ ತರಬೇತಿ ಸಂಸ್ಥೆಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರ 4,500 ಕೋಟಿ ರೂ. ಯೋಜನೆ ಪ್ರಾರಂಭಿಸಿದೆ ಎಂದು ಗಡ್ಕರಿ ತಿಳಿಸಿದರು.

ವಿಶ್ವಬ್ಯಾಂಕ್ ವರದಿಯ ಪ್ರಕಾರ, ಭಾರತದಲ್ಲಿ 22 ಲಕ್ಷ ಚಾಲಕರ ಕೊರತೆಯಿದೆ ಎಂದು ಅವರು ಹೇಳಿದರು.

ದೇಶದಲ್ಲಿ ಸೂಕ್ತ ಚಾಲನಾ ತರಬೇತಿ ಸೌಲಭ್ಯಗಳ ಕೊರತೆಯೂ ಇದೆ. ಇದು ಅನೇಕ ಅಪಘಾತಗಳು ಮತ್ತು ಸಾವುಗಳಿಗೆ ಕಾರಣವಾಗಿದೆ ಎಂದು ಸಾರಿಗೆ ಸಚಿವರು ತಿಳಿಸಿದರು.

ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ದೇಶಾದ್ಯಂತ ಚಾಲನಾ ತರಬೇತಿ ಸಂಸ್ಥೆಗಳನ್ನು ಹಂತ ಹಂತವಾಗಿ ಸ್ಥಾಪಿಸಲು 4,500 ಕೋಟಿ ರೂ.ಗಳ ಯೋಜನೆ ಆರಂಭಿಸಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಂತಹ 1,600 ಸಂಸ್ಥೆಗಳನ್ನು ಸ್ಥಾಪಿಸಲಾಗುವುದು. ಇದರಿಂದ 60 ಲಕ್ಷಕ್ಕೂ ಹೆಚ್ಚು ಉದ್ಯೋಗ ಸೃಷ್ಟಿಯಾಗುತ್ತದೆ ಎಂದು ಗಡ್ಕರಿ ಹೇಳಿದರು.

ಕ್ಲಸ್ಟರ್ ವಿಧಾನವನ್ನು ಒಳಗೊಂಡಂತೆ ಚಾಲನಾ ತರಬೇತಿ ಮತ್ತು ಸಂಶೋಧನಾ ಸಂಸ್ಥೆ, ಪ್ರಾದೇಶಿಕ ಚಾಲನಾ ತರಬೇತಿ ಕೇಂದ್ರಗಳು ಮತ್ತು ಚಾಲನಾ ತರಬೇತಿ ಕೇಂದ್ರಗಳು ಸ್ಥಾಪನೆಗೆ ಸೂಕ್ತ ಪ್ರಸ್ತಾವನೆಗಳನ್ನು ಕಳುಹಿಸಲು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಕೋರಲಾಗಿದೆ ಎಂದು ಅವರು ತಿಳಿಸಿದರು.

ಪ್ರತಿ ವರ್ಷ ಸುಮಾರು 1.8 ಲಕ್ಷ ಜನ ರಸ್ತೆ ಅಪಘಾತಗಳಲ್ಲಿ ಸಾಯುತ್ತಿದ್ದಾರೆ ಮತ್ತು ಅವರಲ್ಲಿ ಹಲವರು ತರಬೇತಿ ಪಡೆಯದ ಚಾಲಕರಿಂದಾಗಿ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ ಎಂದು ಸಚಿವರು ಹೇಳಿದರು.

### ದೇಶದ ಆರ್ಥಿಕತೆ ನಾಶ: ರಾಹುಲ್

ಇಂದು ಲೋಕಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಮಾತನಾಡಿದ ರಾಹುಲ್ ಗಾಂಧಿ, ಚೀನಾ ಭಾರತದ 4,000 ಚದರ ಕಿಲೋಮೀಟರ್ ಪ್ರದೇಶವನ್ನು ವಶಪಡಿಸಿಕೊಂಡಿದೆ ಮತ್ತು ಅಮೆರಿಕ ವಿಧಿಸುವ ಆಮದು ಸುಂಕಗಳು ಭಾರತದ ಆರ್ಥಿಕತೆಯನ್ನು "ಸಂಪೂರ್ಣವಾಗಿ ನಾಶಪಡಿಸುತ್ತದೆ". ಈ ವಿಷಯಗಳ ಬಗ್ಗೆ ಸರ್ಕಾರ ಉತ್ತರ ನೀಡಬೇಕು ಎಂದು ಒತ್ತಾಯಿಸಿದರು.

ಅಮೆರಿಕ ತನ್ನ ಹೊಸ ಪರಸ್ಪರ ವ್ಯಾಪಾರ ಕ್ರಮಗಳ ಅಡಿಯಲ್ಲಿ ಭಾರತೀಯ ರಫ್ತಿನ ಮೇಲೆ ಶೇ. 27 ಸುಂಕ ವಿಧಿಸಲು ನಿರ್ಧರಿಸಿದ ನಂತರ ರಾಹುಲ್ ಗಾಂಧಿ ಈ ಹೇಳಿಕೆ ನೀಡಿದ್ದಾರೆ.

ಗಡಿ ಪರಿಸ್ಥಿತಿಯನ್ನು ಗಮನಿಸಿದರೆ ಚೀನಾದೊಂದಿಗಿನ ರಾಜತಾಂತ್ರಿಕ ಬಾಂಧ್ಯವದ 75ನೇ ವರ್ಷಾಚರಣೆ ಸೂಕ್ತವಲ್ಲ ಎಂದು ರಾಹುಲ್ ಗಾಂಧಿ ಹೇಳಿದರು.

"ನಮ್ಮ ಭೂಪ್ರದೇಶದ 4,000 ಚದರ ಕಿಲೋಮೀಟರ್‌ನಲ್ಲಿ ಚೀನಾ ಕುಳಿತಿದೆ. ಸ್ವಲ್ಪ ಸಮಯದ ಹಿಂದೆ ನಮ್ಮ ವಿದೇಶಾಂಗ ಕಾರ್ಯದರ್ಶಿ (ವಿಕ್ರಮ್ ಮಿಶ್ರಿ) ಚೀನಾ ರಾಯಭಾರಿಯೊಂದಿಗೆ ಕೇಕ್ ಕತ್ತರಿಸುತ್ತಿರುವುದನ್ನು ನೋಡಿ ನನಗೆ ಆಘಾತವಾಯಿತು. ಪ್ರಶ್ನೆ ಏನೆಂದರೆ, ಚೀನಾ ವಶಪಡಿಸಿಕೊಂಡಿರುವ 4,000 ಚದರ ಕಿಲೋಮೀಟರ್ ವಿಸ್ತೀರ್ಣದ ಈ ಪ್ರದೇಶಕ್ಕೆ ನಿಖರವಾಗಿ ಏನಾಗುತ್ತಿದೆ?" ಎಂದು ರಾಹುಲ್ ಗಾಂಧಿ ಪ್ರಶ್ನಿಸಿದರು.

2020 ರ ಗಾಲ್ವಾನ್ ಕಣಿವೆಯ ಘರ್ಷಣೆಯನ್ನು ಉಲ್ಲೇಖಿಸಿದ ರಾಹುಲ್ ಗಾಂಧಿ, ಈ ಸಂಘರ್ಷದಲ್ಲಿ 20 ಭಾರತೀಯ ಸೈನಿಕರು ಸಾವನ್ನಪ್ಪಿದ್ದರು. ಆದರೆ ಹುತಾತ್ಮರ ನೆನಪಿಗಾಗಿ "ಕೇಕ್ ಕತ್ತರಿಸುವ ಮೂಲಕ ಸಂಭ್ರಮ ನಡೆಯುತ್ತಿದೆ" ಎಂದು ವಾಗ್ದಾಳಿ ನಡೆಸಿದರು.

ಸಹಜ ಸ್ಥಿತಿಗೆ ಬರುವುದನ್ನು ನಾವು ವಿರೋಧಿಸುವುದಿಲ್ಲ. ಆದರೆ ಗಡಿಯಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳಬೇಕು. ನಾವು ನಮ್ಮ ಭೂಭಾಗವನ್ನು ಮರಳಿ ಪಡೆಯಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದರು.

### ರಾಜೀನಾಮೆ:ಖರ್ಗೆ

ನಾನು ಒಂದಿಂಚು ಭೂಮಿ ಕಬಳಿಸಿಲ್ಲ, ಅನುರಾಗ್ ಠಾಕೂರ್ ಕ್ಷಮೆ ಕೇಳಲೇಬೇಕು ಎಂದು ಒತ್ತಾಯಿಸಿದರು. ಬಳಿಕ ಈ ಚರ್ಚೆಯನ್ನು ರಾಜ್ಯಸಭೆ ಅಧ್ಯಕ್ಷ ಜಗದೀಪ್ ಧನಕರ್ ಶಿಸ್ತು ಸಮಿತಿಯ ಪರಿಶೀಲನೆಗೆ ನೀಡಿದರು.

### ದುರ್ಬಳಕೆಯಾಗಬಾರದು: ಹೆಚ್‌ಡಿಡಿ

ಸಂಖ್ಯಾತರ ರಕ್ಷಣೆಗೆ ಸಾಕಷ್ಟು ನಿರ್ಧಾರ ಮಾಡಿದ್ದೇನೆ. ನಾನು ಯಾವುದೇ ಸಿದ್ಧಾಂತದವನಲ್ಲ, ನಾನು ರೈತ. ಮುಸ್ಲಿಂ ಮಾತ್ರವಲ್ಲ ಬಹಳಷ್ಟು ಸಮುದಾಯಕ್ಕೆ ಮೀಸಲಾತಿ ನೀಡಿದ್ದೇನೆ. ನಾನು ಸ್ಪೀಕರ್ ಆಸನಕ್ಕೆ ಎಂದೂ ಅವಮಾನ ನೋಡಿಲ್ಲ. ಇಂದು ನೋಡಿ ಬೇಸರವಾಗುತ್ತಿದೆ. ಕರ್ನಾಟಕದಲ್ಲಿ ಏನಾಗಿದೆ ಎಂದು ಬೇಸರ ಹೊರ ಹಾಕಿದ್ದಾರೆ.

### ಬೇಸಿಗೆ ಹಿನ್ನೆಲೆ ಕಲಬುರಗಿ-ಬೆಂಗಳೂರು ನಡುವೆ ವಿಶೇಷ ರೈಲು ಸಂಚಾರ: ಪರಿಷ್ಕೃತ ವೇಳಾ ಪಟ್ಟಿ ಪ್ರಕಟ

ಕಲಬುರಗಿ.ಏ.03:ಬೇಸಿಗೆ ರಜೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು ಹಾಗೂ ಪ್ರಯಾಣಿಕರ ಬೇಡಿಕೆಯ ಮೇರೆಗೆ ಭಾರತೀಯ ರೈಲ್ವೆ ಕಲಬುರಗಿ–ಬೆಂಗಳೂರು ನಡುವೆ 60 ಬೇಸಿಗೆ ವಿಶೇಷ ರೈಲು ಸೇವೆಗಳನ್ನು ಓಡಿಸಲಿರುವ ಕುರಿತು ಕೇಂದ್ರ ರೈಲ್ವೆ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯು ಈ ಕೆಳಕಂಡಂತೆ ಪರಿಷ್ಕೃತ ವೇಳಾಪಟ್ಟಿ ಪ್ರಕಟಿಸಿದೆ.

ರೈಲು ಸಂಖ್ಯೆ 06519 ವಿಶೇಷ ರೈಲು ಪ್ರತಿ ಶುಕ್ರವಾರ, ಶನಿವಾರ ಮತ್ತು ಭಾನುವಾರದಂದು 04–04–2025 ರಿಂದ 15–06–2025 ರವರೆಗೆ (ದಿನಾಂಕ: 30–05–2025, 31–05–2025 ಮತ್ತು 01–06–2025 ಹೊರತುಪಡಿಸಿ) ಖಎಗಿಖ ಬೆಂಗಳೂರಿನಿಂದ ರಾತ್ರಿ 21.15ಕ್ಕೆ ಹೊರಟು ಮರುದಿನ ಬೆಳಿಗ್ಗೆ 07.40 ಕ್ಕೆ ಕಲಬುರಗಿಗೆ ಆಗಮಿಸಲಿದೆ.

ರೈಲು ಸಂಖ್ಯೆ 06520 ವಿಶೇಷ ರೈಲು ಪ್ರತಿ ಶನಿವಾರ, ಭಾನುವಾರ ಮತ್ತು ಸೋಮವಾರದಂದು 05–04–2025 ರಿಂದ 16–06–2025 ರವರೆಗೆ (ದಿನಾಂಕ: 31–05–2025, 01–06–2025 ಮತ್ತು 02–06–2025 ಹೊರತುಪಡಿಸಿ) ಕಲಬುರಗಿಯಿಂದ ಬೆಳಿಗ್ಗೆ 09.35ಕ್ಕೆ ಹೊರಟು ಅದೇ ದಿನ ರಾತ್ರಿ 20.00 ಕ್ಕೆ ಖಎಗಿಖ ಬೆಂಗಳೂರಿಗೆ ತಲುಪಲಿದೆ.

ಶಹಾಬಾದ, ಯಾದಗಿರ, ಕೃಷ್ಣಾ, ರಾಯಚೂರು, ಮಂತ್ರಾಲಯ ರಸ್ತೆ, ಅದೋನಿ, ಗುಂತಕಲ್, ಅನಂತಪುರ, ಧರ್ಮಾವರಂ ಹಾಗೂ ಯಲಹಂಕ ಮೂಲಕ ಸಂಚರಿಸಲಿದೆ.

ಈ ವಿಶೇಷ (06519/06520) ರೈಲು ಸಂಖ್ಯೆ ಟಿಕೇಟ್‌ಗಳಿಗಾಗಿ ಕುರಿತು www.irctc.co.in ವೆಬ್‌ಸೈಟ್‌ನ್ನು ಸಂಪರ್ಕಿಸಲು ಅಥವಾ ವಿಶೇಷ ರೈಲುಗಳ ಸಮಯ ಮತ್ತು ನಿಲುಗಡೆ ವಿವರ ಕುರಿತು ಹೆಚ್ಚಿನ ಮಾಹಿತಿಗಾಗಿ www.enquiry.indianrail.gov.in ಗೆ ಭೇಟಿ ನೀಡಿ ಅಥವಾ ಎನ್.ಟಿ.ಇ.ಎಸ್.(ಓಖಿಇಖ) ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

### ಜಿ.ಪಂ. ಸಿ.ಇ.ಓ. ಅವರು ಕಲಬುರಗಿ ಪಶುಪಾಲನಾ ಇಲಾಖೆಯ ಜಿಲ್ಲಾ ಕಚೇರಿಗೆ ದಿಢೀರ ಭೇಟಿ ನೀಡಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.03:ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಗುರುವಾರ (ಏಪ್ರಿಲ್ 3ರಂದು) ಕಲಬುರಗಿ ನಗರದ ಪಶುಪಾಲನಾ ಇಲಾಖೆಯ ಜಿಲ್ಲಾ ಕಚೇರಿಗೆ ಬೆಳಿಗ್ಗೆ ದಿಢೀರ್ ಭೇಟಿ ನೀಡಿ ಎಲ್ಲಾ ವಿಭಾಗಗಳಲ್ಲಿನ ಎಕ್ಸ್‌ರೆ ಕೋಣೆ, ಶಸ್ತ್ರಚಿಕಿತ್ಸೆ ಕೋಣೆ, ಚಿಕಿತ್ಸಾ ಕೋಣೆ, ಪ್ರಯೋಗಾಲಯಾ ಹಾಗೂ ಇತರೆ ವಿಭಾಗಗಳನ್ನು ಪರಿವೀಕ್ಷಣೆ ಮಾಡಿ ಸೂಪರ್ ಸ್ಪೇಷಾಲಿಟಿ ಪಾಲಿಕ್ಲಿನಿಕ್ನಲ್ಲಿ ಜಾನುವಾರುಗಳಿಗೆ ನೀಡುವ ಚಿಕಿತ್ಸೆ ಹಾಗೂ ಇತರ ಸೌಲಭ್ಯ ಕುರಿತು ಸ್ಥಳದಲ್ಲಿದ್ದ ಅಧಿಕಾರಿಗಳಿಂದ ಮಾಹಿತಿ ಪಡೆದರು.

ನಂತರ ಅವರು ಕ್ಲಿನಿಕ್‌ಗೆ ಚಿಕಿತ್ಸೆಗಾಗಿ ತಮ್ಮ ಜಾನುವಾರುಗಳೊಂದಿಗೆ ಬಂದ ರೈತರೊಂದಿಗೆ ಮಾತನಾಡಿದರು. ನಂತರ ಅವರು ರೈತರು ತಂದಿರುವ ಜಾನುವಾರುಗಳನ್ನು ಕೂಡಲೇ ಪರೀಕ್ಷಿಸಿ ಸೂಕ್ತ ಚಿಕಿತ್ಸೆ ನೀಡಬೇಕೆಂದು ಸ್ಥಳದಲ್ಲಿದ್ದ ಪಶು ಪಾಲನಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಈ ಭೇಟಿ ಸಂದರ್ಭದಲ್ಲಿ ಪಶುಪಾಲನಾ ಇಲಾಖೆಯ ಉಪನಿರ್ದೇಶಕರು ಹಾಗೂ ಇಲಾಖೆಯ ಇತರೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಹಿರಿಯ ಜೀವಿ ನೀಲಕಂಠ ಹಂಗರಗೆ ನಿಧನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.3:ತಾಲೂಕಿನ ಹೊಳಸಮುದ್ರ ಗ್ರಾಮದ ಹಿರಿಯ ಜೀವಿ ನೀಲಕಂಠ ತಂದೆ ಮಾಡೋಳಪ್ಪ ಹಂಗರಗೆ (90) ಗುರುವಾರ ನಿಧನರಾಗಿದ್ದಾರೆ.

ಇವರು ಮೂವರ ಹೆಣ್ಣು ಮಕ್ಕಳು ಲಕ್ಷ್ಮಿಬಾಯಿ, ಪಾರ್ವತಿ, ರೇಖಾ,

ಓರ್ವ ಮಗ ಭೀಮ ಹಂಗರಗೆ,

ಸೊಸೆ ಅನಿತಾ ಹಾಗೂ ಮೊಮ್ಮಕ್ಕಳು ಪ್ರೀಥ್ವಿ, ನಿಸರ್ಗ ಸೇರಿದಂತೆ ಹಂಗರಗೆ ಪರಿವಾರದವರು ಶೋಕ ವ್ಯಕ್ತಪಡಿಸಿದ್ದಾರೆ.

ಅಂತಿಮಕ್ರಿಯೆ ದಿನಾಂಕ:04/04/25 ಶುಕ್ರವಾರ ಬೆಳಗ್ಗೆ 10 ಗಂಟೆಗೆ ನಡೆಯಲಿದೆ ಎಂದು ಕುಟುಂಬ ಮೂಲದವರು ಪ್ರಕಟಣೆ ಗೆ ತಿಳಿಸಿದ್ದಾರೆ.

### ಏ. 5 ರಂದು ಡಾ. ಬಾಬು ಜಗಜೀವನರಾಂ ರವರ ಜಯಂತಿ ಆಚರಣೆ

ಕಲಬುರಗಿ.ಏ.03:ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಭಾರತದ ಮಾಜಿ ಉಪಪ್ರಧಾನಿ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂರವರ 118ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಏಪ್ರಿಲ್ 5 ರಂದು ಶನಿವಾರ ಬೆಳಿಗ್ಗೆ 9.30 ಗಂಟೆಗೆ ಕಲಬುರಗಿ ನಗರದ (ಟೌನ್‌ಹಾಲ್) ಡಾ. ಬಾಬು ಜಗಜೀವನರಾಂ ಪುತ್ಥಳಿ ಹತ್ತಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿ ವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕಲಬುರಗಿ ಡಾ. ಬಾಬು ಜಗಜೀವನರಾಂ ಜಯಂತ್ಯೋತ್ಸವ ಆಚರಣೆ ಸಮಿತಿ ಅಧ್ಯಕ್ಷ ರಂಜೀತ ಆರ್. ಮೂಲಿಮನಿ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು. ಚಿಂಚೋಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ. ಮಲ್ಲಿಕಾರ್ಜುನ ಎಂ. ಸಾವರಕರ್ ಅವರು ಉಪನ್ಯಾಸ ನೀಡುವರು.

### ನಿರ್ದೇಶಕರಾಗಿ ನಾಮ ನಿರ್ದೇಶನ

ಕಲಬುರ್ಗಿ, ಏ.3–

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಕಲ್ಬುರ್ಗಿ ಜಿಲ್ಲಾ ಶಾಖೆಗೆ ಕಲಬುರ್ಗಿ ಕಾಲೇಜು ಶಿಕ್ಷಣ ಇಲಾಖೆಯ

ಪ್ರಾದೇಶಿಕ ಜಂಟಿ ನಿರ್ದೇಶಕರ ಕಚೇರಿ ಪ್ರಥಮ ದರ್ಜೆ ಸಹಾಯಕಿ ಅಂಬಿಕಾ ಅವರನ್ನು ನಿರ್ದೇಶಕರ ಸ್ಥಾನಕ್ಕೆ ನಾಮನಿರ್ದೇಶನ ಮಾಡಿ ಆದೇಶಿಸಲಾಗಿದೆ.



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳೂಂಡಗಿ ಅವರು, ಸಂಘದ ಬೈಲಾದಲ್ಲಿರುವ ಪ್ರದತ್ತ ಅಧಿಕಾರದನ್ವಯ ಅಂಬೀಕಾ ಅವರನ್ನ ನಿರ್ದೇಶಕರನ್ನಾಗಿ ನಾಮನಿರ್ದೇಶನ ಮಾಡಿ ಆದೇಶಿಸಿದ್ದಾರೆ. ಈ ಮೂಲಕ ಸಂಘದ ಚಟುವಟಿಕೆಗಳಲ್ಲಿ ಭಾಗವಹಿಸಿ ಮಹತ್ವದ ಜವಾಬ್ದಾರಿಯನ್ನು ನಿರ್ವಹಿಸುವಂತೆ ಸೂಚಿಸಿದ್ದಾರೆ.

### ಸಿದ್ಧಾರೂಢ ಸ್ವಾಮಿಗಳು ಆಧ್ಯಾತ್ಮಿಕ ಪ್ರವೀಣರು:ಹಾವಗಿಲಿಂಗೇಶ್ವರ ಶಿವಾಚಾರ್ಯ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.3:ಸಿದ್ಧಾರೂಢ ಸ್ವಾಮಿಗಳು ಆಧ್ಯಾತ್ಮಿಕ ಪ್ರವೀಣರು, ಅವರ ಭಾರತದಾದ್ಯಂತ, ಉತ್ತರದ ಕಾಶ್ಮೀರದಿಂದ ದಕ್ಷಿಣದ ಕನ್ಯಾಕುಮಾರಿಯವರೆಗೆ ಪ್ರಯಾಣಿಸಿ, ತಮ್ಮ ಬುದ್ಧಿವಂತಿಕೆಯನ್ನು ಹಂಚಿಕೊಂಡರು ಮತ್ತು ಆಧ್ಯಾತ್ಮಿಕ ಜಾಗೃತಿಯನ್ನು ಬಯಸುವವರಿಗೆ ಮಾರ್ಗದರ್ಶನ ನೀಡಿದರು ಎಂದು ಶಿವಣಿ ಹಲಬರ್ಗಾ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ನುಡಿದರು.

ತಾಲೂಕಿನ ಕೋಟಗ್ಯಾಳ ಗ್ರಾಮದಲ್ಲಿ ಮಹಾದೇವರ 4ನೇ ಜಾತ್ರಾ ಮಹೋತ್ಸವ ನಿಮಿತ್ಯ ಹಮ್ಮಿಕೊಂಡ ಶ್ರೀ ಸಿದ್ಧಾರೂಢ ಮಹಾ ಸ್ವಾಮಿಗಳ ಜೀವನ ಚರಿತ್ರೆ ಕುರಿತು ಪ್ರವಚನ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಾವು ಬಾವಿಗೆ ನೀರು ತರಲು ಹೋಗುವಾಗ, ಹೇಗೆ ಖಾಲಿ ಕೊಡ ತೆಗೆದುಕೊಂಡು ಹೋಗಿ ತುಂಬಿದ ಕೊಡ ಹೇಗೆ ತೆಗೆದು ಕೊಂಡು ಬರುತ್ತೇವೆ ಹಾಗೆ ಪ್ರವಚನ ದಲ್ಲಿ ನೀವು ಒಳ್ಳೆಯ ವಿಚಾರ ತೆಗೆದುಕೊಂಡು ಹೋಗಬೇಕೆ, ಸಿದ್ಧಾರೂಢ ಸ್ವಾಮಿಗಳು ಪ್ರವಚನ ಮಾಡುವಾಗ ನೆರೆಯ ರಾಜ್ಯಗಳಿಂದ ಭಕ್ತರು ಮಾರ್ಗದರ್ಶನ, ಸಾಂತ್ವನ ಮತ್ತು ತಮ್ಮ ಆಸೆಗಳನ್ನು ಈಡೇರಿಸಲು ಅವರ ಬಳಿಗೆ ಬರುತ್ತಿದ್ದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹದೇವ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷರಾದ ಕೈಲಾಶ್ ಪಾಟೀಲ, ಉಪಾಧ್ಯಕ್ಷರಾದ ಸಂಗಮೇಶ್ ಹಾಜ್ನಾಳೆ, ಕಿರಣ್ ಪಾಟೀಲ್, ಅನಿಲ್ ಮೇನ್ಕಿರೆ, ಕಾಶಿನಾಥ್ ಪಾಟೀಲ್, ಶಂಕರ್ ಸ್ವಾಮಿ, ಚನ್ನಬಸವ ಸ್ವಾಮಿ, ಮಹದೇವ ಮಹಾಜನ್, ಮನ್ಮಥ ಮಹಜನ, ಧನರಾಜ ಕೋಟೆ ಸೂರ್ಯಕಾಂತ್ ಬೀರಾದರ್, ಶಿವಕುಮಾರ್ ಕೋಟೆ, ಶಿವಕುಮಾರ ಸ್ವಾಮಿ, ನಾಗರಾಜ ಸ್ವಾಮಿ ಸೇರಿದಂತೆ ಅಕ್ಕನ ಬಳಗ ಹಾಗೂ ಅಣ್ಣ ಬಳಗದವರು ಇದ್ದರು.

### ಹೆಚ್ಚುವರಿ 50 ಸಾವಿರ ಮನೆ ಮಂಜೂರು ಮಾಡಿ-ಸಂಸತ್‌ನಲ್ಲಿ ಸಾಗರ ಖಂಡ್ರೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.3: ಬೀದರ್ ಲೋಕಸಭಾಕ್ಷೇತ್ರವನ್ನು ಗುಡಿಸಲು ಮುಕ್ತವನ್ನಾಗಿಸುವ ಆಶಯ ಹೊಂದಿದ್ದು ಹೆಚ್ಚುವರಿಯಾಗಿ 50 ಸಾವಿರ ಮನೆಗಳನ್ನು ಮಂಜೂರು ಮಾಡುವಂತೆ ಕೇಂದ್ರ ಸರಕಾರವನ್ನು ಸಂಸದ ಸಾಗರ ಖಂಡ್ರೆ ಒತ್ತಾಯಿಸಿದ್ದಾರೆ. ಸಂಸತ್ ಕಲಾಪದಲ್ಲಿ ಗುರುವಾರ ಮಾತನಾಡಿದ ಅವರು, ಕಳೆದ 5 ವರ್ಷದ ಅವಧಿಯಲ್ಲಿ 5 ಸಾವಿರಕ್ಕಿಂತ ಕಡಿಮೆ ಮನೆ ಮಂಜೂರು ಆಗಿದ್ದವು. ಆದರೆ ನಾನು ಸಂಸದನಾಗಿ ಆಯ್ಕೆಯಾದ ಮೇಲೆ ಕೇವಲ 1 ವರ್ಷದ ಅವಧಿಯಲ್ಲಿ ಪಿಎಂಎವೈ (ಗ್ರಾಮೀಣ) ಯೋಜನೆಯಡಿ ಸುಮಾರು 50 ಸಾವಿರ ಮನೆಗಳನ್ನು ಮಂಜೂರಾತಿ ಮಾಡಿಸಿದ್ದೇನೆ.

ಆದರೆ, ಅನಮೋದಿತ ಮನೆಗಳಿಗೆ ಇದು ವರೆಗೂ ಕೇವಲ ಶೇ.35ರಷ್ಟು ಮಂಜೂರಾತಿ ದೊರೆತಿದೆ. ಜತೆಗೆ ಮನೆಗಳ ಸರ್ವೇ ಅವಧಿಯನ್ನು ಮಾ.31ಕ್ಕೆ ಪೂರ್ಣಗೊಂಡಿದೆ. ಹಾಗಾಗಿ ಈ ಅವಧಿಯನ್ನು ವಿಸ್ತರಿಸುವುದರ ಜತೆಗೆ ನನ್ನ ಕ್ಷೇತ್ರಕ್ಕೆ ಹೆಚ್ಚುವರಿ ಇನ್ನೂ 50 ಸಾವಿರ ಮನೆಗಳನ್ನು ಮಂಜೂರು ಮಾಡುವಂತೆ ಕೇಂದ್ರಕ್ಕೆ ಒತ್ತಾಯಿಸಿದರು.

# ಬೌದ್ಧಗಯಾ ಮಹಾಬೋಧಿ ಮಹಾವಿಹಾರ ಮುಕ್ತಿ ಆಂದೋಲನದ ಕರಪತ್ರ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಏ 3 ಬೌದ್ಧಗಯಾ ಟೆಂಪಲ್ ಎಕ್ಟ್ 1949 ಅನ್ನು ರದ್ದುಪಡಿಸಿ ಮಹಾಬೋಧಿ ಮಹಾವಿಹಾರದ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ನೀಡಬೇಕೆಂದು ಒತ್ತಾಯಿಸಿ, ಬೌದ್ಧಗಯಾದಲ್ಲಿ ನಡೆಯುತ್ತಿರುವ ಮಹಾಬೋಧಿ ಮಹಾವಿಹಾರ ಮುಕ್ತಿ ಆಂದೋಲನವನ್ನು ಬೆಂಬಲಿಸಿ ಬರುವ ಏಪ್ರಿಲ್ 5 ರಂದು ಬೀದರ ನಗರದ ಅಂಬೇಡ್ಕರ್ ವೃತ್ತದಲ್ಲಿ ಬೀದರ ಜಿಲ್ಲಾ ಬೌದ್ಧ ಭಿಕ್ಖು ಮತ್ತು ಭಿಕ್ಖುನಿಯರ ಸಂಘದ ವತಿಯಿಂದ ಹಮ್ಮಿಕೊಂಡಿರುವ ಜಿಲ್ಲಾ ಮಟ್ಟದ ಬೃಹತ್ ಪ್ರತಿಭಟನೆಯ ಕರಪತ್ರಗಳನ್ನು. ನಗರದ ಅಂಬೇಡ್ಕರ್ ವೃತ್ತದಲ್ಲಿ ಬಿಡುಗಡೆ ಮಾಡಲಾಯಿತು.

ಈ ವೇಳೆ ಬೌದ್ಧಗಯಾ ಮಹಾಬೋಧಿ ಮಹಾವಿಹಾರ ಮುಕ್ತಿ ಆಂದೋಲನ ಬೆಂಬಲ ತಾಲೂಕಾ ಸಮಿತಿಯ ಅಧ್ಯಕ್ಷರಾದ ಪಿಂಟು ಕಾಂಬಳೆ ಮಾತನಾಡಿ ಬೌದ್ಧಗಯಾ ಟೆಂಪಲ್ ಎಕ್ಟ್ 1949 ವನ್ನು ರದ್ದುಪಡಿಸಿ ಮಹಾಬೋಧಿ ವಿಹಾರದ ಸಂಪೂರ್ಣ ಆಡಳಿತವನ್ನು ಬೌದ್ಧರಿಗೆ ನೀಡಬೇಕೆಂದು ಒತ್ತಾಯಿಸಿ ಬಿಹಾರದ ಬೌದ್ಧಗಯಾದಲ್ಲಿ ಬೌದ್ಧ ಗುರುಗಳು ಉಪವಾಸ ಸತ್ಯಾಗ್ರಹವನ್ನು ಮಾಡುತ್ತಿದ್ದಾರೆ, ಈ ಸತ್ಯಾಗ್ರಹವನ್ನು ಬೆಂಬಲಿಸಿ ಬೀದರ ಜಿಲ್ಲೆಯ ಬೌದ್ಧ ಭಿಕ್ಖು ಮತ್ತು ಭಿಕ್ಖುನಿಯರ ಸಂಘದ ವತಿಯಿಂದ ನಗರದ ಅಂಬೇಡ್ಕರ್ ವೃತ್ತದಲ್ಲಿ ಇದೇ ಏಪ್ರಿಲ್ 5 ರಂದು ಹಮ್ಮಿಕೊಂಡಿರುವ ಈ ಬೃಹತ್ ಪ್ರತಿಭಟನೆಗೆ ತಾಲೂಕಿನ ಬೌದ್ಧ ಧಮ್ಮ ಉಪಾಸಕರು, ಉಪಾಸಕಿಯರು, ಬಾಬಾಸಾಹೇಬ್ ಅಂಬೇಡ್ಕರ್ ಹಾಗೂ ಬುದ್ಧಾನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು. ಗೌರವ ಸಲಹೆಗಾರ ಗೌತಮ ಜಾಂತೆ, ಖಜಾಂಚಿ ಸಿಕಂದರ್ ಸಿಂಧೆ ರವರು ಮಾತನಾಡಿದರು, ಉಪಾಧ್ಯಕ್ಷರಾದ ರಾಜು ಸೂರ್ಯವಂಶಿ, ಶಂಕರ ಫುಲೆ, ಕಾರ್ಯದರ್ಶಿ ಚೈತನ ಕಾಡೆ, ಪ್ರಧಾನ ಕಾರ್ಯದರ್ಶಿ ಸಂದೀಪ್ ಮುಕಿಂದೆ, ಪ್ರಚಾರ ಸಮಿತಿ ಅಧ್ಯಕ್ಷ ಸಾಗರ ರಾಯಗೋಳ, ಸದಸ್ಯರುಗಳಾದ

ವಿಜಯಕುಮಾರ ಡಾಂಗೆ, ಅಶೋಕ ಮಧಾಳೆ, ಮೀಲಿಂದ್ ಕೊಳ್ಳದ, ಸುರೇಶ ರಾಮಬಾಣ, ಸೋಮನಾಥ್ ಮುಡಬೆಕರ್, ಸುಭಾಷ ನಾಟಕರ್, ಮೀಲಂದ ಸಾಗರ, ಕಾಶಿನಾಥ ಹೋಳ್ಕರ್, ದತ್ತು ಲಾಡವಂತಿ, ಜಯಪ್ಪಾ, ಸುಧಾಮ ಮೋರೆ, ಜಿ.ಹೋಳ್ಕರ್, ರಾಜು ಕಾಂಬಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಳೆದು ಹೋದ ಹಣ ಹಿಂದಿರುಗಿಸಿದ ಗ್ರಾ ಪಂ ಅಧ್ಯಕ್ಷ ಸಂಜೀವ ಕಿರಣ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ನಿರ್ಣಾ ಗ್ರಾಮ ಪಂಚಾಯತ್ ಕಾರ್ಯಾಲಯಕ್ಕೆ ಏಪ್ರಿಲ್ 1ರಂದು ಮಂಗಳವಾರ ಲಲಿತಾಬಾಯಿ ಗಂಡ ಈರಣ್ಣ ಧರ್ಜಿ ಅವರು ಗ್ರಾಮ ಪಂಚಾಯತ್ ಕಾರ್ಯಾಯಕ್ಕೆ ತಮ್ಮ ಮನೆಯ ಮೋಟೇಶನ್ ಮಾಡಿಸಿಕೊಳ್ಳಲು ಬಂದಾಗ ಸುಮಾರು 14,000 ರೂ. ಕಳೆದುಕೊಂಡಿದರು. ಗ್ರಾಮ ಪಂಚಾಯತ್ ಆವರಣದಲ್ಲಿ ಅಳವಡಿಸಿದ ಸಿಸಿ ಟಿವಿಯಲ್ಲಿ ಪತ್ತೆ ಹಚ್ಚಿ ಏಪ್ರಿಲ್ 3ರಂದು ಗುರುವಾರ ಗ್ರಾಮ ಪಂಚಾಯತ್ ಅಧ್ಯಕ್ಷ ಸಂಜೀವಕುಮಾರ್ ಕಿರಣ ಅವರು ಹಣ ಕಳೆದುಕೊಂಡ ಮಹಿಳೆಗೆ ಹಣ ಹಿಂದಿರುಗಿಸಿದರು. ಇವರ ಕಾರ್ಯಕ್ಕೆ ಹಲವಾರು ಹರ್ಷ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬಸವರಾಜ ಗುಗ್ಗರಿ, ಸದಸ್ಯರಾದ ತಿರುಪತಿ ಪಿಟಗೊಂಡ, ಮಹೇಶ್ ಜೋಗಣಿ, ಕಾರ್ಯದರ್ಶಿಗಳಾದ ತುಕರಾಮ, ಆಕಾಶ, ಅಕ್ರಮ ಮಚಕುರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಕ್ರಮ ಮರಳು ದಂಧೆ ಕಡಿವಾಣ ಯಾವಾಗ?

# ಸದ್ದಿಲದೇ ನಡೆಯುತ್ತಿರುವ ಅಕ್ರಮ ದಂಧೆಗಳು : ಆರೋಪ



ತಾಲ್ಲೂಕಿನಾದ್ಯಂತ ನಡೆಯುತ್ತಿರುವ ಅಕ್ರಮ ಮರಳುಗಾರಿಕೆ ದಂಧೆ ಕುರಿತು ಅಧಿಕಾರಿಗಳು ಸೂಕ್ತ ಕ್ರಮ ಜರುಗಿಸಬೇಕು. ಮರಳು ದಂಧೆಕೋರರು ಕಳ್ಳದಾರಿ ಸೇರಿದಂತೆ ರಾಜಮಾರ್ಗದಲ್ಲಿಯೇ ಸಾಗಾಟ ನಡೆಸುತ್ತಿದ್ದಾರೆ. ಇಲ್ಲಿ ಅಧಿಕಾರಿಗಳ ಭಯವಿಲ್ಲದಂತ್ತಾಗಿದೆ. ಈ ಬಗ್ಗೆ ಕ್ರಮ ಕೈಗೊಳ್ಳದೆ ಇದ್ದಲ್ಲಿ ಉಗ್ರ ಹೋರಾಟ. ಅಕ್ರಮ ಮರಳು ದಂಧೆ ನಿಲ್ಲದ್ದಿದರೇ ಬೀದಿಗಿಳಿದು ಹೋರಾಟ ಮಾಡಲಾಗುವುದು.

– ಡಾ. ರವಿ ಸ್ವಾಮಿ ನಿರ್ಣಾ
ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷರು.




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲ್ಲೂಕಿನಾದ್ಯಂತ ಅನಧಿಕೃತ ಮರಳು ಸಾಗಾಟ, ಅಕ್ರಮ ಗಣಿಗಾರಿಕೆ, ಮಣ್ಣು, ಪಡಿತರ ಅಕ್ಕಿ ಸೇರಿದಂತೆ ಇತರೆ ಅಕ್ರಮ ಚಟುವಟಿಕೆಗಳು ರಾಜಾರೋಷವಾಗಿ ನಡೆಯುತ್ತಿವೆ ಇವುಗಳಿಗೆ ಕಡಿವಾಣ ಯಾವಾಗ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ. ಈ ಬಗ್ಗೆ ಸಾಕಷ್ಟು ಬಾರಿ ತಾಲೂಕ ಆಡಳಿತ ಸೇರಿದಂತೆ ಇತರೆ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದರು ಕೂಡ ಯಾವುದೇ ಪ್ರಯೋಜನವಾಗುತ್ತಿಲ್ಲಾ ಇದ್ದ–ರಿಂದ ಜನರು ಬೇಸೆತ್ತುತ್ತಿದ್ದಾರೆ ಈಗಲಾದರೂ ಸಂಬಂಧ ಪಟ್ಟ ಹಿರಿಯ ಅಧಿಕಾರಿಗಳು ತಪಿಸ್ತರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸುತ್ತಿದ್ದಾರೆ.

# ಏಪ್ರೀಲ್, ಮೇ ತಿಂಗಳಿನ ಕಚೇರಿ ಕೆಲಸದ ವೇಳೆ ಬದಲಾವಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್ 03–ಸರ್ಕಾರದ ಆದೇಶದನ್ವಯ 2025ನೇ ಸಾಲಿನ ಏಪ್ರೀಲ್ ಮತ್ತು ಮೇ ತಿಂಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನದ ಹಿನ್ನೆಲೆಯಲ್ಲಿ ಕಲಬುರಗಿ ವಿಭಾಗ ವ್ಯಾಪ್ತಿಯ ರಾಯಚೂರ ಜಿಲ್ಲೆಯಲ್ಲಿ ಸಹ 2025ರ ಏಪ್ರೀಲ್ ಮತ್ತು ಮೇ ತಿಂಗಳಿನಲ್ಲಿ ಕಚೇರಿ ಕೆಲಸದ ವೇಳೆ ಬದಲಾವಣೆಯಾಗಿದ್ದು, ರಾಯಚೂರು ಜಿಲ್ಲೆಯಲ್ಲಿನ ಎಲ್ಲಾ ಸರ್ಕಾರಿ ನೌಕರರು ಬದಲಾದ ಸಮಯದಲ್ಲಿ ತಮ್ಮ ಕರ್ತವ್ಯವನ್ನು ಎಂದಿನಂತೆ ಯಾವುದೇ ಲೋಪ ಅಡೆತಡೆಯಿಲ್ಲದೆ, ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ಆದೇಶ ಹೊರಡಿಸಿದ್ದಾರೆ.

# ಇಂದು ಶ್ರೀ ಭಗವಾನ್ ಮಹಾವೀರ ಜಯಂತಿಯ ಆಚರಣೆ ಪೂರ್ವಸಿದ್ಧತಾ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ '

ಯಾದಗಿರಿ : ಏಪ್ರಿಲ್ 03, ಇದೇ 2025ರ ಏಪ್ರಿಲ್ 10ರ ರಂದು ಶ್ರೀ ಭಗವಾನ್ ಮಹಾವೀರ ಜಯಂತ್ಯೋತ್ಸವ ಆಚರಣೆ–ಯ ಹಿನ್ನೆಲೆ ಪೂರ್ವಸಿದ್ಧತಾ ಸಭೆಯನ್ನು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ 2025ರ ಏಪ್ರಿಲ್ 4 ರಂದು ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ಶ್ರೀ ಭಗವಾನ್ ಮಹಾವೀರ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಿಲ್ಲಾವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಜಯಂತಿಯನ್ನು ಆಚರಿಸುವ ಸಲುವಾಗಿ ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಈ ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಮತ್ತು ಸಾರ್ವಜನಿಕರು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮ ಒನ್ ಕೇಂದ್ರಕ್ಕೆ ಅರ್ಜಿ ಸಲ್ಲಿಕೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.03.–ಸಾರ್ವಜನಿಕರಿಗೆ ಸರ್ಕಾರದ ಎಲ್ಲಾ ಸೇವೆಗಳನ್ನು ಒಂದೇ ಸೂರಿನಡಿ ಒದಗಿಸುವ ಹಿತದೃಷ್ಟಿಯಿಂದ ಗ್ರಾಮ ಒನ್ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಆದ್ದರಿಂದ ಆಸಕ್ತಿಯುಳ್ಳ ಅಭ್ಯರ್ಥಿಗಳು ಪ್ರತಿ ತಿಂಗಳು 1ನೇ ತಾರೀಖಿನಿಂದ 15ನೇ ತಾರೀಖಿನವರೆಗೆ https://kal-mys.grama-one.karnataka.gov.in/index.php/applicant-registration-initial-step ಈ ವೆಬ್‌ಸೈಟ್‌ನಲ್ಲಿ ನೋಡಿಕೊಂಡು ಖಾಲಿ ಇರುವ ಗ್ರಾಮ ಒನ್ ಕೇಂದ್ರಗಳಿಗೆ ಆನ್‌ಲೈನ ಮೂಲಕ ಅವಶ್ಯಕ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು. ಆದ್ದ–ರಿಂದ ಕಲಬುರಗಿ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಒನ್ ಕೇಂದ್ರಗಳ ಕುರಿತು ಪ್ರತಿ ತಿಂಗಳು ಅಧಿಕೃತವಾಗಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗುವುದಿಲ್ಲ ಎಂದು ಕಲಬುರಗಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ರಿಮ್ಸ್ ಆಸ್ಪತ್ರೆಗೆ ಜಿಲ್ಲಾಧಿಕಾರಿ ನಿತೀಶ್ ಕೆ. ದಿಢೀರ್ ಭೇಟಿ; ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್.03–ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಶೋಧನಾ ಸಂಸ್ಥೆ ರಿಮ್ಸ್ ಆಸ್ಪತ್ರೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಏಪ್ರೀಲ್ 2ರ ಸಂಜೆ ದಿಢೀರ್ ಭೇಟಿ ನೀಡಿ ಆಸ್ಪತ್ರೆಯ ಮೂಲಸೌಕರ್ಯಗಳನ್ನು ಪರಿಶೀಲಿಸಿದರು.

ಹೆರಿಗೆ ಮತ್ತು ಮಕ್ಕಳ ಆಪರೇಷನ್ ವಿಭಾಗವನ್ನು ಇನ್ನಷ್ಟು ಅಭಿವೃದ್ಧಿ ಮಾಡಲು ಹೆಚ್ಚಿನ ವೈದ್ಯರು ಹಾಗೂ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಬೇಕು. ಸಣ್ಣ ಮಕ್ಕಳ ಐಸಿಯು ಘಟಕವನ್ನು ವಿಸ್ತರಣೆ ಮಾಡಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

14 ವರ್ಷದ ಮಕ್ಕಳಿಗೆ ಉತ್ತಮ ಚಿಕಿತ್ಸೆ ದೊರೆಕಿಸಲು ಪ್ರಸ್ತುತ ಆಸ್ಪತ್ರೆಯಲ್ಲಿರುವ ಪಿಐಸಿಯು 12 ಹಾಸಿಗೆಯಿಂದ 20 ಹಾಸಿಗೆಗೆ ಹೆಚ್ಚಳ ಮಾಡಬೇಕು. ಇದಕ್ಕಾಗಿ ಬೇಕಾಗಿರುವ ಕೊಠಡಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಳ್ಳಬೇಕು. ಅಲ್ಲದೆ ಮಾಡ್ಯೂಲರ್ ಆಪರೇಷನ್ ಥಿಯೇಟರ್ ಸಂಖ್ಯೆ 4ಕ್ಕೆ ಹೆಚ್ಚಳ ಮಾಡಲು ಸೂಕ್ತ ಕ್ರಮವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಹೆಚ್ಚು ಒತ್ತು ನೀಡಬೇಕು. ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡುವುದರ ಜೊತೆಗೆ ಅವರೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ನಿರ್ದೇಶನ ನೀಡಿದರು.

ರೋಗಿಗಳಿಗೆ ಉತ್ತಮವಾದ ವೈದ್ಯಕೀಯ ಸೇವೆ ನೀಡಿ: ನಂತರ ವಿವಿಧ ವಾರ್ಡ್ಗಳಿಗೆ ತೆರಳಿ ಅಲ್ಲಿನ ಮೂಲ ಸೌಕರ್ಯಗಳನ್ನು ಪರಿಶೀಲನೆ ನಡೆಸಿದರು. ಪರಿಶೀಲನೆ ಸಮಯದಲ್ಲಿ ಹಾಜರಿದ್ದ ರೋಗಿಗಳು ಮತ್ತು ಅವರ ಕುಟುಂಬದವರ ಜೊತೆ ಜಿಲ್ಲಾಧಿಕಾರಿಗಳು ಮಾತನಾಡಿದರು. ಸರ್ಕಾರಿ ಸವಲತ್ತುಗಳನ್ನು ಸಾರ್ವಜನಿಕರಿಗೆ ಸಮರ್ಪಕವಾಗಿ ತಲುಪಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು. ರೋಗಿಗಳಿಗೆ ಉತ್ತಮವಾದ ವೈದ್ಯಕೀಯ ಸೇವೆ ಮತ್ತು ಔಷಧೋಪಚಾರ ಒದಗಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ರಮೇಶಬಾಬು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಸುರೇಂದ್ರ ಬಾಬು, ಓಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಾಗರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ.ನಂದಿತಾ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಡಾ.ಬಾಸ್ಕರ್ ಸೇರಿದಂತೆ ವಿವಿಧ ವಿಭಾಗದ ಮುಖ್ಯಸ್ಥರು ಹಾಗೂ ವೈದ್ಯರು ಇದ್ದರು.

# ಬಿಳಿಜೋಳ ಖರೀದಿಗೆ ಜೂನ್ 30ರವರೆಗೆ ಅವಧಿ ವಿಸ್ತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್ 03–ಇಲ್ಲಿನ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2024–25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿ ಜೋಳ ಖರೀದಿಸುವ ಅವಧಿಯನ್ನು ಜೂನ್ 30ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಅಧ್ಯಕ್ಷರಾದ ಹಾಗೂ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಬಿಳಿಜೋಳವನ್ನು ಮಾರಾಟ ಮಾಡಲು ದಿನಾಂಕ:31.03.2025ರವರೆಗೆ ನೋಂದಣಿ ಮಾಡಿಕೊಂಡಿರುವ ಜಿಲ್ಲೆಯ ರೈತರಿಂದ ಖರೀದಿಸುವ ಅವಧಿಯನ್ನು ಜೂನ್ 30ರವರೆಗೆ ವಿಸ್ತರಿಸಲಾಗಿದ್ದು, ರೈತರು ತಮ್ಮ ಹತ್ತಿರದಲ್ಲಿರುವ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್‌ಎಕ್ಯೂ ಗುಣಮಟ್ಟದ ಮುಂಗಾರು ಬಿಳಿಜೋಳವನ್ನು ಈಗಾಗಲೇ ನೋಂದಣಿ ಮಾಡಿಸಿಕೊಂಡಿರುವ ರೈತರು ಖರೀದಿ ಕೇಂದ್ರಗಳಿಗೆ ನೀಡುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿರಿ:9632899236

# ಕಲ್ಯಾಣ ಮಹಾಮನೆಯಲ್ಲಿ 5 ಮತ್ತು 6 ರಂದು ಶರಣೆ ದಾನಮ್ಮ ಉತ್ಸವ ಹಾಗೂ ತೃತೀಯ ಶರಣ ಸಮಾಗಮ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಏ 3 ಸಮೀಪವಿರುವ ಗುಣತೀರ್ಥವು 12ನೇ ಶತಮಾನದ ಶರಣೆ ದಾನಮ್ಮನ ತಪೋಕ್ಷೇತ್ರವಾಗಿದ್ದು ಏಪ್ರಿಲ್ 5 ಮತ್ತು 6ರಂದು ಎರಡು ದಿನ ಪೂಜ್ಯಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಗುಣ–ತೀರ್ಥ ವಾಡಿಯ ಕಲ್ಯಾಣ ಮಹಾಮನೆಯಲ್ಲಿ ದಾನಮ್ಮ ಉತ್ಸವ ಹಾಗೂ ತೃತೀಯ ಶರಣ ಸಮಾಗಮ ಜ್ಞಾನ ಶಿಬಿರ ಹಮ್ಮಿಕೊಳ್ಳಲಾಗಿದೆ. ಎರಡು ದಿನದ ಉತ್ಸವದಲ್ಲಿ ಐದು ಶರಣ ಜ್ಞಾನ ಗೋಷ್ಠಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಗುರುವಂದನಾ ಹಾಗೂ ಜ್ಯೋತಿ ಯಾತ್ರೆಯ ಸಮಾರೋಪ ಸಮಾರಂಭ ನೆರವೇರಲಿದೆ ಎಂದು ಕಲ್ಯಾಣ ಮಹಾಮನೆಯ ಅಧ್ಯಕ್ಷರಾದ ಪೂಜ್ಯಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ತಿಳಿಸಿದರು.

ಉದ್ಘಾಟನೆ ಗುಡ್ಡಾಪೂರದಿಂದ ದಾನಮ್ಮನ ಜ್ಞಾನ ಜ್ಯೋತಿ ಯಾತ್ರೆಯನ್ನು ಹೊರಡಿಸಿ ಈಗಾಗಲೇ ಸೋಲಾಪುರ, ಬಿಜಾಪೂರ, ಸಾಂಗ್ಲಿ, ಕೋಲಾಪೂರ, ಕಲಬುರಗಿ, ಬೀದರ ಸೇರಿದಂತೆ ಆರು ಜಿಲ್ಲೆಯಲ್ಲಿ ಎರಡು ತಂಡ ರಚಿಸಿ ಪ್ರಚಾರ ಮಾಡಲಾಗಿದೆ ಎಂದು ಹೇಳಿದರು.

ದಿನಾಂಕ 5ರಂದು ಬೆಳಿಗ್ಗೆ 5 ರಿಂದ 6ಗಂಟೆಗೆ ಪತಂಜಲಿ ಯೋಗ ಗುರು ಮಾತೆಯರಾದ ಶರಣೆ ತುಳಜಾ, ಶರಣೆ ಮೇಘಾ ಯೋಗಾಸನ ಹೇಳಿಕೊಡಲಿದ್ದಾರೆ. ಬೆಳಿಗ್ಗೆ 7 ರಿಂದ 9ರವರೆಗೆ ಸಾಮೂಹಿಕ ಇಷ್ಟಲಿಂಗ ಪೂಜೆ ಮತ್ತು ಇಷ್ಟಲಿಂಗ ದೀಕ್ಷೆ ಕಾರ್ಯಕ್ರಮ ಹಾಗೂ ವಚನ ಪಠಣ ನೆರವೇರಲಿದೆ. ಬೆಳಿಗ್ಗೆ 10 ಗಂಟೆಗೆ ಪೂಜ್ಯರ ಮತ್ತು ಸರ್ವ ಶರಣರ ಸಮ್ಮುಖದಲ್ಲಿ ಷಟಸ್ಥಲ ಧ್ವಜಾರೋಹಣ ನೆರವೇರಲಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ನಿವೃತ್ತ ನ್ಯಾಯಾಧೀಶರಾದ ಸುಭಾಶ್ಚಂದ್ರ ನಾಗರಾಳೆ ನೆರವೇರಿಸಲಿರುವರು, ಅಧ್ಯಕ್ಷತೆ ನಿರಂಕಾರಿ ಸಂತ ದಂಪತಿಗಳಾದ ಸುನಿತಾ ವಿಜಯಕುಮಾರ ವಹಿಸಿಕೊಂಡು ಜಗದಗಲ ಪರಮಾತ್ಮನ ದರ್ಶನ ಕುರಿತು ವಿಶೇಷ ಅನುಭಾವ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ದಿಲೀಪ ಶಿಂದೆ, ರೇವಣಪ್ಪ ಹೆಗ್ಗಣೆ ಆಗಮಿಸಲಿರುವರು. ಇದೇ ವೇಳೆ ಪೂಜ್ಯ ಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ಬರೆದ "ಅಕ್ಕನ ಚರಿತಾಮೃತ" ಕೃತಿ ಬಿಡುಗಡೆಗೊಳ್ಳಲಿದ್ದು, ಅಮರಜ್ಯೋತಿ ಅಕ್ಕಮಹಾದೇವಿ ನಾಟಕ ಖ್ಯಾತಿಯ ರಂಗಭೂಮಿ ಕಲಾವಿದೆ ಸೋಲಾಪುರದ ರಾಜಶ್ರೀ ಥಳಂಗೆಯವರು ಕೃತಿಯನ್ನು ಬಿಡುಗಡೆ ಮಾಡಲಿದ್ದಾರೆ. ಕಲಬುರ್ಗಿಯ ಆಕಾಶವಾಣಿ ಕಲಾವಿದರಾದ ವಿಜಯಲಕ್ಷ್ಮಿ ಕೆಂಗನಾಳ ಅವರು ವಚನ ಸಂಗೀತವನ್ನು ನಡೆಸಿಕೊಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹಾವೇರಿ ಮೊರಾರ್ಜಿ ದೇಸಾಯಿ ಕಾಲೇಜಿನ ಪ್ರಾಂಶುಪಾಲರಾದ ಸೋಮನಾಥ



ಡಿ, ಲಕ್ಷ್ಮಣ ಮೇತ್ರೆ, ನಾಗಶೆಟ್ಟಿ ಗೋರ್ಟಾ ಆಗಮಿಸಲಿದ್ದಾರೆ.

ಮದ್ಯಾಹ್ನ 3 ರಿಂದ 5ರವರೆಗೆ ನಡೆಯುವ ಎರಡನೇ ಶರಣ ಜ್ಞಾನ ಗೋಷ್ಠಿಯ ದಿವ್ಯ ನೇತೃತ್ವವನ್ನು ಸಸ್ತಾಪೂರದ ಪೂಜ್ಯ ಸದಾನಂದ ಸ್ವಾಮೀಜಿಯವರು, ದಿವ್ಯ ಸಮ್ಮುಖವನ್ನು ಬೀದರ–ಗೋರ್ಟಾ ಲಿಂಗಾಯತ ಮಹಾಮಠದ ಪೂಜ್ಯ ಪ್ರಭುದೇವ ಮಹಾಸ್ವಾಮಿಗಳು ವಹಿಸಲಿದ್ದಾರೆ. ಲಿಂಗವ ನೋಡುವ ಅಣ್ಣಗಳೀರಾ ಜಂಗಮದ ಮುಖವ ನೋಡಿ ಎಂಬ ವಿಷಯದ ಕುರಿತು ಪ್ರೊ. ಶಿವಶರಣಪ್ಪ ಹುಗ್ಗಿ ಪಾಟೀಲ ಮತ್ತು ಪ್ರೊ. ಶ್ರೀಶೈಲ ಮಸೂತೆ ವಿಶೇಷ ಅನುಭಾವ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಜೆ 6 ರಿಂದ 9ರವರೆಗೆ ನಡೆಯುವ ಮೂರನೇ ಶರಣ ಜ್ಞಾನ ಗೋಷ್ಠಿಯಲ್ಲಿ ಅನುಭವ ಮಂಟಪದ ಅಧ್ಯಕ್ಷರಾದ ಪೂಜ್ಯ ಶ್ರೀ ಡಾ ಬಸವಲಿಂಗ ಪಟ್ಟದ್ದೇವರು ವಹಿಸಲಿದ್ದು, ಲಿಂಗಾಂಗ ಯೋಗದ ಅರಿವು ಮತ್ತು ಆಚಾರ ವಿಷಯದ ಕುರಿತು ಬೆಂಗಳೂರಿನ ಭಾರತಿ ಕೆಂಪಯ್ಯ ಅವರು ವಿಶೇಷ ಅನುಭಾವ ನೀಡಲಿದ್ದಾರೆ. ಮುಖ್ಯ ಅತಿಥಿ–ಯಾಗಿ ಶರಣೆ ಲೀಲಾವತಿ ಕರಡಿ, ಮಹಾದೇವಿ ಅಂಕಲಗಿ, ಜಗದೇವಿ ಚೆಟ್ಟಿ, ಸವಿತಾ ಭಂಡಾರ ಕವಟೆ, ಶ್ರೀದೇವಿ ಉಜಳಂಬೆ, ಗಿರಿಜಾ ಸಿದ್ಧಣ್ಣ ಆಗಮಿಸಲಿದ್ದಾರೆ.

ದಿನಾಂಕ 6ರಂದು ನಾಲ್ಕನೇ ಶರಣ ಜ್ಞಾನ ಗೋಷ್ಠಿಯ ಅಧ್ಯಕ್ಷತೆಯನ್ನು ಪೂಜ್ಯ ಶ್ರೀ ಸಿದ್ಧರಾಮ ಬೆಲ್ದಾಳ ಶರಣರು ವಹಿಸಲಿದ್ದು, ಪ್ರೋ. ಸಿದ್ದು ಯಾಪಲಪರವಿ, ಶರಣ ಸಾಹಿತಿಗಳಾದ ಮಹಾಂತೇಶ ಕುಂಬಾರ, ಬಸವ ತತ್ವ ಚಿಂತಕರಾದ ಶಿವಸ್ವಾಮಿ ವಿಶೇಷ ಅನುಭಾವ ನೀಡಲಿದ್ದಾರೆ. ಮದ್ಯಾಹ್ನ ಐದನೇ ಗೋಷ್ಠಿಯಲ್ಲಿ ಬಸವತತ್ವಪ್ರಚಾರಕ್ಕಾಗಿ ಶರಣ ಸೇವಾದಳದ ಉದ್ಘಾಟನೆ ನೆರವೇರಿಸಲಿದ್ದು, ದಿವ್ಯ ಸಾನಿಧ್ಯ ಬೇಲೂರಿನ ಉರಿಲಿಂಗ ಪೆದ್ದಿ ಮಠದ ಪೂಜ್ಯ ಶ್ರೀ ಪಂಚಾ–ಕ್ಷರಿ ಸ್ವಾಮೀಜಿ ವಹಿಸಲಿದ್ದಾರೆ. ಭಾಲ್ಕಿ ತಾಲೂಕಾ ವಚನ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಗುಂಡಪ್ಪ ಸಂಗಮಕರ್, ನಾಗೇಂದ್ರಪ್ಪ ನಿಂಬರ್ಗಿ, ಬಿಎಸ್‌ಎಫ್ ಯೋಧರಾದ ಸಿದ್ಧಪ್ಪ ಮುಗನೂರು ಸಂಘಟನೆ ಕುರಿತು ಮಾತನಾಡಲಿದ್ದಾರೆ. ಸಂಜೆ 6 ರಿಂದ 9ರವರೆಗೆ 14ನೇ ಶರಣೆ ದಾನಮ್ಮ ದೇವಿಯ ಜ್ಯೋತಿಯಾತ್ರೆಯ ಸಮಾರೋಪ ಸಮಾರಂಭ ಹಾಗೂ ಗುರು ವಂದನೆ ಕಾರ್ಯಕ್ರಮ ನಡೆಯಲಿದ್ದು, ದಿವ್ಯ ಸಾನಿಧ್ಯವನ್ನು ಹುಲಸೂರಿನ ಪೂಜ್ಯ ಶ್ರೀ ಡಾ. ಶಿವಾನಂದ ಮಹಾಸ್ವಾಮಿಗಳು, ಮಾದಾರ ಚೆನ್ನಯ್ಯ ಪೀಠದ ಕಾಂತ ಸ್ವಾಮಿಗಳು, ನುಲಿಯ ಚಂದಯ್ಯ ಗವಿಯ ಮಾತೆ ಚಿತ್ರಮ್ಮ ವಹಿಸಲಿದ್ದು, ಪೂಜ್ಯ ಶ್ರೀ ನಿಜಲಿಂಗ ಸ್ವಾಮೀಜಿ ಪ್ರಾಸ್ತಾವಿಕವಾಗಿ ಮಾತನಾಡಲಿದ್ದಾರೆ. ಉದ್ಘಾಟನೆ ಸಚಿವರಾದ ಈಶ್ವರ ಖಂಡ್ರೆ ನೆರವೇರಿಸಲಿದ್ದು, ಗುರು ಬಸವ ಪೂಜೆಯನ್ನು ಸಂಸದರಾದ ಸಾಗರ ಖಂಡ್ರೆ ಮಾಡಲಿದ್ದಾರೆ. ಶಾಸಕರಾದ ಶರಣು ಸಲಗರ ಧ್ವಜಾರೋಹಣ ನೆರವೇರಿಸಲಿದ್ದು, ವಿಶೇಷ ಆಹ್ವಾನಿತರಾಗಿ ಹುಮನಾಬಾದ್ ಶಾಸಕರಾದ ಸಿದ್ದು ಪಾಟೀಲ, ಕಾಂಗ್ರೆಸ್ ಧುರೀಣರಾದ ಮಾಲಾ ಬಿ. ನಾರಾಯಣರಾವ , ಧನರಾಜ ತಾಡಂಪಳ್ಳಿ, ವಿಜಯ ಸಿಂಗ್, ಅರ್ಜುನ್ ಕನಕ, ಶಿವರಾಜ ನರಶೆಟ್ಟಿ. ಮುಖ್ಯ ಅತಿಥಿಗಳಾಗಿ ಉದ್ಧಿಮೆದಾರರಾದ ಅಲ್ಲಮಪ್ರಭು ನಾವದಗೆರೆ, ಬಸವರಾಜ ಸ್ವಾಮಿ, ಆಗಮಿಸಲಿದ್ದಾರೆ. ವಿಶೇಷ ಅನುಭಾವವನ್ನು ಕೆ ಎ ಎಸ್ ನಿವೃತ್ತ ಅಧಿಕಾರಿಯಾದ ಎಸ್ ದಿವಾಕಾರ ನೀಡಲಿದ್ದಾರೆ. ಡಾ. ಗವಿಸಿದ್ದಪ್ಪ ಪಾಟೀಲ, ತಹಶೀಲ್ದಾರ್ ಶಿವಾನಂದ ಮೇತ್ರೆ, ಸುಧಾ–ಕರ್ ರೆಡ್ಡಿ, ಬಂಡೆಪ್ಪ ಕುಂಬಾರೆ, ಎಮ್ ಡಿ ಅಸ್ಲಾಂ, ಜಯಪ್ರಕಾಶ ಸದಾನಂದೆ ಸೇರಿದಂತೆ ಅನೇಕರು ಉಪಸ್ಥಿತರಿರುವರು.

ಪ್ರಶಸ್ತಿ ಪ್ರದಾನ:

ಈ ವರ್ಷದ ದಾನಮ್ಮದೇವಿ ಪ್ರಶಸ್ತಿಯನ್ನು ಹಿರಿಯ ಸಾಹಿತಿಗಳು, ಕನ್ನಡ–ಮರಾಠಿ ಸಾಹಿತ್ಯದ ಶ್ರೇಷ್ಠ ಅನುವಾದಕರಾದ ಪ್ರೊ. ಶಾಲಿನಿ ದೊಡ್ಡಮನಿಯವರಿಗೆ ನೀಡಲಾಗುತ್ತಿದೆ. ಕಲ್ಯಾಣ ರತ್ನ ಪ್ರಶಸ್ತಿಯನ್ನು ಕೇಂದ್ರ ಸಾಹಿತ್ಯ ಅಕಾಡೆಮಿಯ ಸದಸ್ಯರು, ವೈಚಾರಿಕ ಚಿಂತಕರು ಮತ್ತು ಗಜಲ್ ಸಾಹಿತಿಗಳಾದ ಡಾ.ಜಯದೇವಿ ಗಾಯಕವಾಡ ಅವರಿಗೆ ನೀಡಲಾಗುತ್ತಿದೆ.

ಭರದ ಸಿದ್ಧತೆ:

ಈಗಾಗಲೇ ಕರ್ನಾಟಕ–ಮಹಾರಾಷ್ಟ್ರ ಗಡಿಭಾಗದ ಐದು ಜಿಲ್ಲೆಯಲ್ಲಿ ಪ್ರಚಾರ ಮಾಡಲಾಗಿದ್ದು ಸಾವಿರಾರು ಬಸವ ಭಕ್ತರು ಹಾಗೂ ದಾನಮ್ಮನ ಭಕ್ತರು ಆಗಮಿಸಲಿದ್ದು ಅವರಿಗೆ ಉಳಿದುಕೊಳ್ಳಲು ತಾತ್ಕಾಲಿಕ ಶಾಮಿಯಾನ್ ಟೆಂಟ ಹಾಕಿಸಲಾಗುತ್ತಿದೆ ಮತ್ತು ಅನುಭವ ಮಂಟಪ ಹಾಗೂ ಯಾತ್ರೆ ನಿವಾಸದಲ್ಲಿ ರೂಂ ವ್ಯವಸ್ಥೆ ಮಾಡಲಾಗಿದೆ.

ತಾಲೂಕಿನ ಶಾಲಾ ಮಕ್ಕಳಿಂದ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ತಾಲೂಕಿನ ಉತ್ತಮ ಶಿಕ್ಷಕರೆಂದು ಆಯ್ಕೆಯಾದ ಶಿಕ್ಷಕರಿಗೆ ಸತ್ಕರಿಸಲಾಗುತ್ತಿದೆ, ವಚನ ಕಂಠಪಾಠ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯವಾಗಿ ಆಯ್ಕೆಯಾದ ಮಕ್ಕಳಿಗೆ ಬಹುಮಾನದೊಂದಿಗೆ ಪ್ರಶಸ್ತಿಯನ್ನು ನೀಡಲಾಗುವುದು. ಕಾರ್ಯಕ್ರಮದಲ್ಲಿ ಸ್ಥಳಿಯ ಪೂಜ್ಯರು, ಬಸವಪರ ಸಂಘಟನೆಗಳ ಅಧ್ಯಕ್ಷರು ಮತ್ತು ಸದಸ್ಯರು ಭಾಗವಹಿಸುವರು.

ಅಚ್ಚುಕಟ್ಟಾಗಿ ಕಾರ್ಯಕ್ರಮ ನೆರವೇರಲಿದ್ದು ಸರ್ವರೂ ಭಾಗಿಯಾಗಬೇಕೆಂದು ಪೂಜ್ಯಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :– ಹುಲಸೂರ ಪಟ್ಟಣದ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ನಿಮಿತ್ಯ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯ ಅಗ್ನಿ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಗಳು, ಸಾಯಗಾಂವದ ಪೂಜ್ಯಶ್ರೀ ಶಿವಾನಂದ ದೇವರು. , ಲತಾ ಹಾರಕೂಡೆ. ಅಪ್ಪಣ್ಣ ಜನವಾಡ. ಸೇರಿದಂತೆ ಅನೇಕರು ಉಪಸ್ಥಿರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ಬಹುದಿನದ ಬೇಡಿಕೆ ಈಡೇರಿಸಿದ ಡಾಕ್ಟರ್ ರಾಜ ವೆಂಕಟಪ್ಪ ನಾಯಕ್ ಟಿಎಚ್‌ಓ ಸುರಪುರ




ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ ಪಟ್ಟಣ ಸಮೀಪದ ಏವೂರ ಗ್ರಾಮಕ್ಕೆ ಬಹುದಿನದ ಬೇಡಿಕೆಯಾದ ಸರಕಾರಿ ಆಸ್ಪತ್ರೆ ಸಲುವಾಗಿ ಇಂದು ಡಾ॥ರಾಜಾ ವೆಂಕಟಪ್ಪನಾಯಕ ಸರ್ ಹಾಗು ಊರಿನ ಹಿರಿಯರು ಸೇರಿ ಸರಕಾರಿ ಆಸ್ಪತ್ರೆ ಸಲುವಾಗಿ ಸ್ಥಳ ವನ್ನು ವೀಕ್ಷಿಸಿದರು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ಏವೂರ ಗ್ರಾಮ ಘಟಕದ ಅಧ್ಯಕ್ಷರಾದ ದೇವೇಂದ್ರಪ್ಪ ದೊರೆಯವರು ಬಹುದಿನದ ಕನಸನ್ನು ಈಡೇರಿಸಿದ್ದಾರೆ .

ಊರಿನವರು ಹರುಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಊರಿನ ಹಿರಿಯರು ಮುಖಂಡರಾದ ಮಲ್ಲನಗೌಡ ಎಸ್ ಪಾಟೀಲ್,ರಾಜಾ ವೀರರಾಯಪ್ಪ ರಾಜು ಧಣಿ ,ಶಾಂತಗೌಡ ಪಾಟೀಲ್,ದೇವಿಂದ್ರಪ್ಪ ದೊರೆ ರೈತ ಸಂಘ ಅಧ್ಯಕ್ಷರು ಏವೂರ ಗ್ರಾಮ ಪಂಚಾಯತ್ ಅಧ್ಯಕ್ಷ ವಿಠಲ ಚವ್ಹಾಣ ಬಾಬು ರಾಠೋಡ ಮತ್ತು ಹಿರಿಯರು ಉಪಸ್ಥಿತರಿದ್ದರು.

## ದೇವಸ್ಥಾನ, ದೇವರು, ಭಾರತೀಯ ಸಂಸ್ಕೃತಿಯ ಪ್ರತೀಕ : ಶಾಸಕ ತುನ್ನೂರು ಅಭಿಪ್ರಾಯ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ದೇವಸ್ಥಾನ, ದೇವರು ಭಾರತೀಯ ಸಂಸ್ಕೃತಿಯ ಪ್ರತಿಕವಾಗಿವೆ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದರು.

ನಗರದ ವಾರ್ಡ ನಂ. 9 ರ ಕೋಲಿವಾಡ ಬಡಾವಣೆಯಲ್ಲಿ ಗುರುವಾರ ಮಶೆಮ್ಮ ದೇವಿ ದೇವಸ್ಥಾನದ ಉದ್ಘಾಟನೆ ಹಾಗೂ ಪ್ರಾಣಪ್ರತಿಷ್ಠಾಪನೆ ನೆರವೇರಿಸಿ ಶಾಸಕರು ಮಾತನಾಡಿದರು.

ಜಗತ್ತಿನ ಯಾವ ದೇಶದಲ್ಲಿ ಇರದ ಧಾರ್ಮಿಕ ಆಚರಣೆಗಳು ನಮ್ಮಲಿವೆ. ಇದಕ್ಕೆ ಜನರ ನಂಬಿಕೆ ಮತ್ತು ಹಿರಿಯರು ಅನಾಧಿ ಕಾಲದಿಂದಲೂ ಆಚರಿಸುತ್ತಾ ಬಂದಿರುವ ವಿಧಾನಗಳೇ ಪ್ರಮುಖ ಕಾರಣವಾಗಿವೆ ಎಂದು ಶಾಸಕರು ವಿವರಿಸಿದರು.

ಮಶೇಮ್ಮ ತಾಯಿ ಬಹಳ ಶಕ್ತಿಯುಳ್ಳ ದೇವತೆಯಾಗಿದ್ದಾಳೆ. ಹೊಸ ದೇವಸ್ಥಾನಕ್ಕೆ ಆಗಮಿಸುವ ಭಕ್ತರ ಕಷ್ಟಗಳು ಆ ತಾಯಿ

## ಪೆಟ್ರೋಲ್ ಹಾಕಿದ ಬಳಿಕ ಹಣ ಕೇಳಿದ್ದಕ್ಕೆ ಸಿಬ್ಬಂದಿಗಳನ್ನು ಥಳಿಸಿದ ಪುಂಡರ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಂಗಾವತಿ ಪೆಟ್ರೋಲ್ ಹಾಕಿ ಹಣ ಕೇಳಿದ್ದಕ್ಕೆ ನಮ್ಮನ್ನು ದುಡ್ಡು ಕೇಳ್ತಿರಾ ಎಂದು ಪೆಟ್ರೋಲ್ ಬಂಕ್ ಸಿಬ್ಬಂದಿಯನ್ನು ಥಳಿಸಿ ದೌರ್ಜನ್ಯವೆಸಗಿದ್ದ ಮೂರು ಜನ ಪುಂಡರ ಪೈಕಿ ಇಬ್ಬರನ್ನು ಗ್ರಾಮೀಣ ಪೊಲೀಸರು ಬಂಧಿಸಿದ್ದಾರೆ.

ಆನೆಗೊಂದಿ ರಸ್ತೆಯಲ್ಲಿ ಇರುವ ಪೆಟ್ರೋಲ್ ಬಂಕ್ ನಲ್ಲಿ ಗುಂಡಾಗಿರಿ ಮಾಡಿ ಪೆಟ್ರೋಲ್ ಹಾಕಿಸಿಕೊಂಡು ಹಣ ಕೊಡದೇ ಸಿಬ್ಬಂದಿಯನ್ನು ಮನಸೋಇಚ್ಛೆ ಥಳಿಸಿ ಹಲ್ಲೆ ಮಾಡಿದ ಪ್ರಕರಣ ನಗರದಲ್ಲಿ ವ್ಯಾಪಕ ಸುದ್ದಿಯಾಗಿತ್ತು. ಕೂಡಲೇ ದುಷ್ಕರ್ಮಿಗಳನ್ನು ಬಂಧಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ ಇವರ ಮಾರ್ಗದಲ್ಲಿ ಗಂಗಾವತಿ ಉಪಾ ವಿಭಾಗ ಅಧಿಕಾರ ಸಿದ್ದಲಿಂಗಪ್ಪಗೌಡ ಪಾಟೀಲ ಇವರ ನೇತ್ರತ್ವದಲ್ಲಿ ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ಸಿಪಿಐ ರಂಗಪ್ಪ ಹೆಚ್ ದೊಡ್ಡಮನಿ ಹಾಗೂ ಸಿಬ್ಬಂದಿಗಳು ಸೇರಿಕೊಂಡು ಪೆಟ್ರೋಲ್ ಬಂಕ್ ನಲ್ಲಿದ್ದ ಸಿಸಿ ಕ್ಯಾಮರಾ ವಿಡಿಯೋಗಳ ಮೂಲಕ ಆರೋಪಿಗಳನ್ನು ಪೊಲೀಸರು ಪತ್ತೆ ಮಾಡಿದ್ದಾರೆ. ಇವರಲ್ಲಿ ಮೂರು ಜನ ಆರೋಪಿಗಳ ಪೈಕಿ ನಾಗರಾಜ (21) ಎಚ್ ಆರ್ ಎಸ್ ಕಾಲೋನಿ ಹಾಗೂ ಆಸಿಫ್ (19)ಎಚ್ ಆರ್ ಎಸ್ ಕಾಲೋನಿ ಗಂಗಾವತಿ ಇವರನ್ನು ಬಂಧನ ಮಾಡಿದ್ದು, ಕೃತ್ಯಕ್ಕೆ ಉಪಯೋಗಿಸಿದ ಬೈಕನ್ನು ಜಪ್ತಿ ಮಾಡಲಾಗಿದೆ. ಕೃತ್ಯದಲ್ಲಿ ಪಾಲ್ಗೊಂಡಿದ್ದ ಎಚ್ ಆರ್ ಎಸ್ ಕಾಲೋನಿಯ ಮೈನು (21) ನಾಪತ್ತೆಯಾಗಿದ್ದಾನೆ.

ಇದೇ ಗುಂಪು ಕೆಎಸ್ಆರ್ ಟಿಸಿ ಡಿಪೋ ರಸ್ತೆಯಲ್ಲಿಯೂ ಈಶಾನ್ಯ ಸಾರಿಗೆ ಸಂಸ್ಥೆಯ ಕಂಡಕ್ಟರ್ ಮತ್ತು ಚಾಲಕರ ಮೇಲೆ ಕ್ಷುಲ್ಲಕ ವಿಷಯಕ್ಕೆ ಜಗಳವಾಡಿ ಹಲ್ಲೆ ನಡೆಸಿದ್ದಾರೆ. ಗ್ರಾಮೀಣ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

## ಸಮಾಜದಲ್ಲಿ ಜಾತ್ರೆಗಳಿಂದ ಸಾಮರಸ್ಯ ಮೂಡುತ್ತದೆ : ಮುದ್ನಾಳ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗ್ರಾಮೀಣ ಭಾಗದಲ್ಲಿ ನಡೆಯುವ ಶರಣರ ಜಾತ್ರೆಗಳಿಂದ ಸಮಾಜದಲ್ಲಿ ಸಾಮರಸ್ಯ ಮೂಡಿ, ಬದಲಾವಣೆಗೆ ಪ್ರೇರಣೆ ಸಿಗುತ್ತದೆ ಎಂದು ಬಿಜೆಪಿ ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಹೇಳಿದರು.

ತಾಲ್ಲೂಕಿನ ವಡ್ನಳ್ಳಿ ಗ್ರಾಮದಲ್ಲಿ ಭಾವೈಕ್ಯತೆಯ ಭಗವಂತ ಶ್ರೀ ಸಿದ್ದಲಿಂಗೇಶ್ವರ ಮಹಾರಾಜರ 7ನೇ ವರ್ಷದ ಜಾತ್ರಾ ಮಹೋತ್ಸವದ ರಥೋತ್ಸವದ ನಂತರ ನಡೆದ ಧರ್ಮಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಾಚೀನ ಕಾಲದಿಂದಲೂ ನಮ್ಮ ದೇಶದಲ್ಲಿ ಮಠ-ಮಾನ್ಯಗಳ ಮೂಲಕ ಗುರುಗಳು ಸದಾ ಸಮಾಜಮುಖಿ ಕಾರ್ಯಗಳನ್ನು ಮಾಡಿಕೊಂಡು ಬರುವ ಮೂಲಕ ದೇಶದ ಐಕ್ಯತೆಗೆ, ಪ್ರಗತಿಗೆ ಕೊಡುಗೆ ನೀಡುವ ಜೊತೆಗೆ ಜನರಿಗೆ ಆಧ್ಯಾತ್ಮಿಕ ಚಿಂತನೆಗಳನ್ನು ನೀಡಿ, ಸಧೃಢ ಸಮಾಜ ನಿರ್ಮಾಣಕ್ಕೆ ಶ್ರಮಿಸಿವೆ, ಅದು ಇಂದಿಗೂ ಮುಂದುವರೆದಿದೆ ಎಂದು ಅಭಿಪ್ರಾಯಪಟ್ಟರು.

ಇಂದು ನಾವೇಲ್ಲರೂ ಸ್ವಲ್ಪ ಸಮಯ ಆಧ್ಯಾತ್ಮಿಕ ಚಟುವಟಿಕೆಗಳತ್ತ ಮೀಸಲಿಡುವುದು ಅಗತ್ಯವಾಗಿದೆ, ಅದರಿಂದ ನಮ್ಮೆಲ್ಲರ ಮನಸ್ಸಿಗೆ ಶಾಂತಿ, ನೆಮ್ಮದಿ ಸಿಗುವ ಜೊತೆಗೆ ಹೊಸ ಸಕರಾತ್ಮಕ ಆಲೋಚನೆಗಳು ಮೂಡಿ, ಸನ್ಮಾರ್ಗದಲ್ಲಿ ಬದುಕು ಸಾಗಿಸಲು ಸಹಕಾರಿಯಾಗುತ್ತದೆ ಎಂದರು,

ಬಿಜೆಪಿ ಹಿರಿಯ ಮುಖಂಡೆ ನಾಗರತ್ನ ಕುಪ್ಪಿ ಮಾತನಾಡಿ, ಈ ಹಿಂದೆ ಶರಣರು ಕೂಡ ಮಹಿಳೆಯರಿಗೆ ಸಮಾಜದಲ್ಲಿ ಸಮಾನವಾದ ಅವಕಾಶಗಳನ್ನು ನೀಡಿದ ಪರಿಣಾಮ ಅವರು ಕೂಡ ಎಲ್ಲಾ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಗಳನ್ನು ಪ್ರದರ್ಶಿಸುವ ಮೂಲಕ ಸಾಮರ್ಥ್ಯವನ್ನು ಪರಿಚಯಿಸುತ್ತಿದ್ದಾರೆ ಎಂದು ಹೇಳಿದರು.

ಶ್ರೀ ಮಠದ ಪೀಠಾಧಿಪತಿ ಅಭಿನವಮುನೀಂದ್ರಶಿವಾಚಾರ್ಯ ಮಹಾಸ್ವಾಮಿಗಳು ಹಲಕರ್ಟಿ, ವಡ್ನಳ್ಳಿ ದಿವ್ಯ ಸಾನಿಧ್ಯ ವಹಿಸಿ, ಆಶೀರ್ವಚನ ನೀಡಿದ ಅವರು, ಮಠಗಳಿಗೆ ಭಕ್ತರೇ ನಿಜವಾದ ಆಸ್ತಿಯಾಗಿದ್ದಾರೆ, ಅವರೆಲ್ಲರ ಸಹಕಾರದಿಂದ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಸಾಮಾಜಿಕ ಚಟುವಟಿಕೆಗಳನ್ನು ನಡೆಸಿಕೊಂಡು ಬರುವ ಮೂಲಕ ಸಮಾಜದಲ್ಲಿ ಬದಲಾವಣೆಗೆ ಪ್ರಯತ್ನಿಸಲಾಗುತ್ತಿದೆ ಎಂದು ನುಡಿದರು.

ವೇದಿಕೆ ಮೇಲೆ ಗಂಗಯ್ಯಸ್ವಾಮಿ ಹಿರೇಮಠ,ಸಿದ್ದರಾಮ ಶಿವಾಚಾರ್ಯ ಸ್ವಾಮಿಜಿ ಕಲ್ಕೇರಿ, ಹಣಮಂತ ಖಾನಳ್ಳಿ, ಹಾಸ್ಯ ಕಲಾವಿದ ಗುಂಡಣ್ಣ ದಿಗ್ಗಿ,ಸಿದ್ರಾಮಯ್ಯಸ್ವಾಮಿ ಚಾಮನಳ್ಳಿ,ಹಣಮಂತ ಅಚ್ಚೋಲಾ, ಸುಭಾಷರಡ್ಡಿ ಮದ್ನಿ ಯಡ್ಡಳ್ಳಿ, ವೈಜನಾಥರಡ್ಡಿ ಪಾಟೀಲ್ ಹತ್ತಿಕುಣಿ, ಸೋಮನಾಥ ರಾಠೋಡ,ಗೋಪಾಲ ರಾಠೋಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸುತ್ತ-ಮುತ್ತಲಿನ ಗ್ರಾಮದ ಜನರು ಭಾಗವಹಿಸಿದ್ದರು.

## ಅನಾಥರನ್ನು ಪೋಷಿಸುವುದು ವಕ್ಫ್ ನ ಮೂಲ ಉದ್ದೇಶವಾಗಿತ್ತು

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ: ಭ್ರಷ್ಟಾಚಾರವನ್ನು ತಡೆಗಟ್ಟುವಲ್ಲಿ ಮತ್ತು ವಕ್ಫ್ ಸಂಪನ್ಮೂಲ ಉದ್ದೇಶಿತ ಕೆಲಸಗಳಿಗೆ ಬಳಕೆಯಾಗುವುದನ್ನು ಖಚಿತಪಡಿಸಿಕೊಳ್ಳುವಲ್ಲಿ ಉಮಿದ್ ಬಿಲ್ ನಿರ್ಣಾಯಕ ಹೆಜ್ಜೆಯಾಗಲಿದೆ ಎಂದು ಜಿಲ್ಲಾ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರಗೌಡ ಮಾಗನೂರ ಹೇಳಿದ್ದಾರೆ

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಲೋಕಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಅಂಗೀಕರಿಸಿರುವುದನ್ನು ಹಾಗೂ ಮಸೂದೆ ಪರವಾಗಿ ಮತ ಹಾಕಿರುವ ಎಲ್ಲ ಸಂಸದರಿಗೆ ಮತ್ತು ಇಂತಹ ದಿಟ್ಟ ಕ್ರಮವನ್ನು ತೆಗೆದುಕೊಂಡಿರುವ ಮೋದಿ ಹಾಗೂ ಅಮಿತ್ ಶಾ ಅವರಿಗೆ ನನ್ನ ನಮನಗಳು ಎಂದು ಅವರು ಹೇಳಿದ್ದಾರೆ

ವಕ್ಫ್ ಹೆಸರಿನಲ್ಲಿ ಸಾವಿರ ವರ್ಷಗಳ ಇತಿಹಾಸದ ದೇವಾಲಯ ಹಾಗೂ ರೈತರ ಜಮೀನನ್ನು ಕಿತ್ತುಕೊಳ್ಳುವ ಕೆಲಸ ಆಗಿತ್ತು. ಬಡವರು, ದುರ್ಬಲರು ಮತ್ತು ಅನಾಥರನ್ನು ಪೋಷಿಸುವುದು ವಕ್ಫ್ ನ ಮೂಲ ಉದ್ದೇಶವಾಗಿತ್ತು. ಆದರೆ, ಅದರ ಉದ್ದೇಶವನ್ನು ಮರೆತು ಕೆಲವರಷ್ಟೇ ಅದ-ರಿಂದ ಬರುವ ಆದಾಯವನ್ನು ಜೇಬಿಗಿಳಿಸಿಕೊಳ್ಳುತ್ತಿದ್ದರು. ಹೀಗಾಗಿ ಅದಕ್ಕೆ ಬ್ರೇಕ್ ಹಾಕಲು ಕೇಂದ್ರ ಸರಕಾರ ದಿಟ್ಟ ಹೆಜ್ಜೆಯನ್ನು ತೆ-ಗೆದುಕೊಂಡಿದ್ದು ವಕ್ಫ್ ಕಾಯ್ದೆಗೆ ತಿದ್ದುಪಡಿ. ಮಧ್ಯರಾತ್ರಿ ವಿಧೇಯಕ ಅಂಗೀಕಾರ ಆಗಿದೆ. ಇದು ಐತಿಹಾಸಿಕ ಕ್ಷಣ ಹಾಗೂ ಪ್ರತಿಯೊಬ್ಬರೂ ಸಂಭ್ರಮಿಸುವ ಕ್ಷಣವಾಗಿದೆ ಎಂದಿದ್ದಾರೆ.

ಮಸೂದೆಯು 1995ರ ಕಾಯಿದೆಯನ್ನು ತಿದ್ದುಪಡಿ ಮಾಡಲು ಪ್ರಯತ್ನಿಸುತ್ತದೆ. ಭಾರತದಲ್ಲಿ ವಕ್ಫ್ ಆಸ್ತಿಗಳ ಆಡಳಿತ ಮತ್ತು ನಿರ್ವಹಣೆಯನ್ನು ಸುಧಾರಿಸಲು ಮಸೂದೆಯು ಸಹಕಾರಿಯಾಗಲಿದೆ. ಹಿಂದಿನ ಕಾಯಿದೆಯ ನ್ಯೂನತೆಗಳನ್ನು ನಿವಾರಿಸುವುದು ಮತ್ತು ವಕ್ಫ್ ಮಂಡಳಿಗಳ ದಕ್ಷತೆಯನ್ನು ಹೆಚ್ಚಿಸುವುದು, ನೋಂದಣಿ ಪ್ರಕ್ರಿಯೆಯನ್ನು ಸುಧಾರಿಸುವುದು ಮತ್ತು ವಕ್ಫ್ ದಾಖಲೆಗಳನ್ನು ನಿರ್ವಹಿಸುವಲ್ಲಿ ತಂತ್ರಜ್ಞಾನದ ಪಾತ್ರವನ್ನು ಹೆಚ್ಚಿಸುವುದು ಇದರ ಗುರಿಯಾಗಿದೆ.

ಮಸೂದೆ ಅಂಗೀಕಾರವಾದ ಹಿನ್ನೆಲೆಯಲ್ಲಿ ಕೋಟ್ಯಂತರ ಬಡ ಮುಸ್ಲಿಮರು ಪ್ರಧಾನಿ ಮೋದಿ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ. ಆದರೆ, ಕಾಂಗ್ರೆಸ್ ಇದನ್ನು ವಿರೋಧ ಮಾಡುತ್ತಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದರು ಇವರು ವಕ್ಫ್ ಹೆಸರಿನಲ್ಲಿರುವ ಜಮೀನನ್ನು ಕಾಂಗ್ರೆಸ್ ನಾಯಕರು ಕಬಳಿಸಿದ್ದಾರೆ. ಹಾಗಾಗಿ ವಿಧೇಯಕಕ್ಕೆ ವಿರೋಧ ಮಾಡ್ತಿದ್ದಾರೆ ಎಂದು ಕಿಡಿ-ಕಾರಿದರು

ವಿರೋಧ ಪಕ್ಷಗಳು ಹೇಳಿಕೊಂಡಂತೆ ಮಸೂದೆಯು ಸಂವಿಧಾನಕ್ಕೆ ವಿರುದ್ಧವಾಗಿಲ್ಲ, ವಕ್ಫ್ ತಿದ್ದುಪಡಿ ಮಸೂದೆ ಮುಸ್ಲಿಂ ಧರ್ಮದ ದತ್ತಿ ಆಸ್ತಿಗಳನ್ನ ಹೇಗೆ ನಿರ್ವಹಿಸಬೇಕು ಎಂಬುದನ್ನ ಮಸೂದೆ ನಿರ್ಧರಿಸಲಿದೆ. ಹೊಸ ಮಸೂದೆಯು ಆರ್ಥಿಕವಾಗಿ ಹಿಂದುಳಿದಿರುವ ಮುಸ್ಲಿಮರ ಉನ್ನತಿಗೆ ಸಹಕಾರಿಯಾಗಲಿದೆ ಎಂದರು.

## ಇ ಖಾತಾ ಅಭಿಯಾನಕ್ಕೆ ಕೊಪ್ಪಳ ನಗರಸಭೆ ಅಧ್ಯಕ್ಷರಿಂದ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಸಾರ್ವಜನಿಕರು ತಮ್ಮ ಆಸ್ತಿಯ ಎ ಖಾತ ಮತ್ತು ಬಿ ಖಾತವನ್ನು ಸುಲಭವಾಗಿ ಪಡೆದುಕೊಳ್ಳುವಂತೆ ಕೊಪ್ಪಳ ನಗರಸಭೆಯ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹೇಳಿದರು.

ಅವರು ಗುರುವಾರ ನಗರದ ಮೂರನೇ ವಾರ್ಡಿನಲ್ಲಿ ಕೊಪ್ಪಳ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಕೊಪ್ಪಳ ನಗರಸಭೆ ಕಾರ್ಯಾಲಯದ ವತಿಯಿಂದ ಇ-ಖಾತಾ ಅಭಿಯಾನ ಮತ್ತು ಎ ಖಾತ ಮತ್ತು ಬಿ ಖಾತ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸುಮಾರು ವರ್ಷಗಳಿಂದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ ಖಾತಾ ಮತ್ತು ಬಿ ಖಾತ, ಎಂಬಿ ನಂಬರ್ ನಮೂನೆ 3 ನ್ನು ಪಡೆಯಲು ಸಾರ್ವಜನಿಕರು ಪರದಾಡುವಂತ ಸ್ಥಿತಿ ಗಮನಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಸಾರ್ವಜನಿಕರ ಅನುಕೂಲಕ್ಕಾಗಿ ಮನೆಬಾಗಿಲಿಗೆ ಎ ಖಾತ ಮತ್ತು ಬಿ ಖಾತ ಫಾರಂ ನಂಬರ್ 3ರ ವಿತರಣೆ ಅಭಿಯಾನವನ್ನು ಹಮ್ಮಿಕೊಂಡಿದ್ದು, ಇದರಿಂದಾಗಿ ತುಂಬಾ ಅನುಕೂಲವಾಗಿದೆ. ನಮ್ಮ ಸರ್ಕಾರವು ಹಮ್ಮಿಕೊಂಡಿರುವ ಈ ಅಭಿಯಾನದಡಿ ಮೂರು ತಿಂಗಳ ಒಳಗಾಗಿ ಕೊಪ್ಪಳ ನಗರದ ಸಾರ್ವಜನಿಕರು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಎ ಖಾತ ಬಿ ಖಾತದಿಂದ ಜನರಿಗೆ ಸರ್ಕಾರದಿಂದ ವಿವಿಧ ಗೃಹ ಯೋಜನೆಗಳಡಿ ಸಹಾಯಧನ, ಸಾಲ ಸೌಲಭ್ಯಗಳು ಅತ್ಯಂತ ಸುಲಭವಾಗಿ ಸಿಗಲಿವೆ. ಇಂತಹ ನೂತನ ಯೋಜನೆಯನ್ನು ಕರ್ನಾಟಕ ಸರ್ಕಾರ ಹಮ್ಮಿಕೊಂಡಿದ್ದು, ಇದರಿಂದ ಕೊಪ್ಪಳ ನಗರಸಭೆ ವ್ಯಾಪ್ತಿಯ ಸುಮಾರು 8 ಸಾವಿರಕ್ಕೂ ಅಧಿಕ ನಿವೇಶನಗಳು, ಆಶ್ರಯ ಮನೆಗಳಿಗೆ ಅನುಕೂಲವಾಗಲಿದೆ. ಕೊಪ್ಪಳ ನಗರದ ಪ್ರತಿಯೊಬ್ಬರು ತಮ್ಮ ಮನೆಯ ಆಸ್ತಿ ದಾಖಲೆಯ ಪತ್ರಗಳನ್ನು ನೀಡಿ, ಎ ಖಾತ ಮತ್ತು ಬಿ ಖಾತ ಪಡೆದು-ಕೊಂಡು ಈ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಸಾರ್ವಜನಿಕರಿಗೆ ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ನಗರಸಭೆಯ ಉಪಾಧ್ಯಕ್ಷರಾದ ಅಶ್ವಿನಿ ಗದುಗಿನಮಠ್, ಪೌರಾಯುಕ್ತರಾದ ಗಣಪತಿ ಪಾಟೀಲ್, ಓಣಿಯ ಹಿರಿಯರಾದ ಖಾಜಾ ಹುಸೇನ್ ರೆವಡಿ, ಸಲೀಂ ಅಳವಂಡಿ, ಹಜರತ್ ಮುಜಾವರ್ ಸೇರಿದಂತೆ ನಗರಸಭೆಯ ಕಂದಾಯ ವಿಭಾಗದ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಮತ್ತಿತರರು ಉಪಸ್ಥಿತರಿದ್ದರು.

## ಭ್ರಷ್ಟ ಅರಣ್ಯ ಇಲಾಖೆಅಧಿಕಾರಿಗಳು ವಿರುದ್ಧ ಪ್ರತಿಭಟನೆ ಕೊಡಲಿ ಅಂತ ಅಧಿಕಾರಿಗಳನ್ನು ಅಮಾನತು ಮಾಡುವಂತೆ ಪ್ರದೀಪ್ ಅಣಬೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ



ಶಹಾಪೂರ ತಾಲೂಕಿನ ಅರಣ್ಯ ಇಲಾಖೆಯಲ್ಲಿ ಈ ಹಿಂದೆ ಕಾರ್ಯ ನಿರ್ವಹಿಸಿದ ವಲಯ ಅರಣ್ಯಾಧಿಕಾರಿ ಜಯಶ್ರೀ, ಉಪಳಪ್ಪ ಮತ್ತು ಪ್ರಸ್ತುತ ಕಾರ್ಯ

ನಿರ್ವಹಿಸುತ್ತಿರುವ ಸಂಜೀವ ಪವಾರ ಅವರನ್ನು ಅಮಾನತುಗೊಳಿಸಬೇಕೆಂದು

ಸರ್.ಎಂ ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು. ವತಿಯಿಂದ

2022 ರಿಂದ 25 ರವರೆಗೆ ನರೇಗಾ, ಆರ್ಎಸ್‌ಪಿ, ಎಸ್ಎಫ್‌ಪಿ, ಎಸ್ಎಫ್ ಯೋಜನೆಯಡಿಯಲ್ಲಿ ರಸ್ತೆ ಬದಿ ನೆಡುತೋಪು ಕಾಮಗಾರಿಯ ಸ್ಥಳದಲ್ಲಿ ಅಳವಡಿಸಲಾದ ನಾಮಫಲಕದಲ್ಲಿ ಕಾಮಗಾರಿ ಅಂದಾಜು ಮೊತ್ತ ಹಾಕದೆ, ಇಲಾಖೆ ಯೋಜನೆಗಳನ್ನು ಗೌಪ್ಯವಾಗಿಟ್ಟು, ಸಾರ್ವಜನಿಕರಿಗೆ ಇದರ ಮಾಹಿತಿ ಸಿಗದಂತೆ ಮಾಡಿ, ಭ್ರಷ್ಟಚಾರ ಮಾಡಿದ್ದಾರೆ.

ಇವರುಗಳು ಮಾಡಿದ ಕಾಮಗಾರಿಗಳಲ್ಲಿ ನಕಲಿ ಕಾವಲುಗಾರರನ್ನು ಸೃಷ್ಠಿಸಿ ಅವರ ಹೆಸರಿನಲ್ಲಿ ಲಕ್ಷಾಂತರ ರೂ, ಅನುದಾನ ದುರ್ಬಳಕೆ ಮಾಡಿಕೊಂಡಿದ್ದಾರೆ. ಕೆಲ ಗಸ್ತು ಅರಣ್ಯ ಪಾಲಕರು ಸುಮಾರು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಸೇವಾ ನಿಯಮ ಉಲ್ಲಂಘನೆ ಮಾಡಿದ್ದಾರೆ. ಕೂಡಲೇ ಅವರನ್ನು ಅಮಾನತುಗೊಳಿಸಬೇಕು ಹಾಗೂ ಇವುರುಗಳು ನಿರ್ವಹಿಸಿದ ಕಾಮಗಾರಿಗಳ ಸ್ಥಳ ಪರಿಶೀಲನೆ ಮಾಡಿ, ಕೂಡಲೇ ಇವರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿ, ಸೇವೆಯಿಂದ ಅಮಾನತುಗೊಳಿಸಿ ಶಿಸ್ತು ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮೌನೇಶ ಬಿರನೂರ, ಭೋಜಪ್ಪ ಮುಂಡಾಸ, ಪ್ರದೀಪ ಅಣಬಿ, ಸಿದ್ದು ಮುಂಡಾಸ, ಮಹಮ್ಮದ ಇಸ್ಮಾಯಿಲ್, ಅಂಬ್ರೇಶ ಉಪಸ್ಥಿತರಿದ್ದರು.

## ಕೊಪ್ಪಳ:ನಮ್ಮ ಭಕ್ತಿ ಡಾಂಬಿಕವಾಗಿರಬಾರದು

ಮಲ್ಲಮ್ಮ ನುಡಿ ವಾರ್ತೆ




ಕೊಪ್ಪಳ : ನಮ್ಮ ಭಕ್ತಿ ಡಾಂಬಿಕವಾಗಿದ್ದರೆ ನಾವು ಮಾಡುವ ಕೆಲಸ ಕಾರ್ಯಗಳು ಅಪೂರ್ಣವಾಗುತ್ತವೆ ಎಂದು ದೇವಾಂಗ ಸಮಾಜದ ಜಿಲ್ಲಾಧ್ಯಕ್ಷರಾದ ಶಿವಶಂಕರಪ್ಪ ಚನ್ನಿ ಹೇಳಿದರು.

ಅವರು ಬುಧವಾರ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಪ್ಪಳ ಇವರ ಸಹಯೋಗದಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶ್ರೀ ದೇವರ ದಾಸಿಮಯ್ಯ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ದೇವರ ದಾಸಿಮಯ್ಯ ಜಯಂತಿ ಪ್ರತಿ ವರ್ಷ ಆಚರಿಸುತ್ತಿರುವ ಸರ್ಕಾರಕ್ಕೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ದೇವರ ದಾಸಿಮಯ್ಯನವರು ಶ್ರೇಷ್ಠ ವಚನಕಾರರಾಗಿದ್ದು, ಅವರು ನೇಕಾರ ಸಮಾಜದಲ್ಲಿ ಹುಟ್ಟಿದ್ದು ನಮ್ಮ ನಿಮ್ಮ ಪುಣ್ಯ. ಶ್ರೀ ಶೈಲ ಮಲ್ಲಿಕಾರ್ಜುನ ಜಾತ್ರೆ ಪ್ರತಿ ವರ್ಷ ನಡೆಯುವ ಸಂದರ್ಭದಲ್ಲಿ ಅವರ ಶಿಖರಕ್ಕೆ ದೇವರ ದಾಸಿಮಯ್ಯನವರು ಬಂದು ಬಟ್ಟೆ ಸುತ್ತುತ್ತಾರೆ ಎಂಬ ನಂಬಿಕೆ ಇಂದಿಗೂ ಜನರಲ್ಲಿ ಇದೆ. ಅದು ಎಲ್ಲರಿಗೂ ಕಾಣುವದಿಲ್ಲ ಕೆಲವು ಜನರಿಗೆ ಮಾತ್ರ ಕಾಣುತ್ತದೆ ಎಂದು ಹೇಳುತ್ತಾರೆ ಎಂದರು.

ದೇವಾಂಗ ಸಮಾಜ ನೌಕರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಾನಂದ ತಿಮ್ಮಾಪೂರ ಅವರು ಮಾತನಾಡಿ, ದೇವರ ದಾಸಿಮಯ್ಯ ಅವರು ಯಾದಗಿರಿ ಜಿಲ್ಲೆಯ ಮುದನೂರ ಗ್ರಾಮದಲ್ಲಿ ಜನಿಸಿದರೆಂದು ಇತಿಹಾಸಗಳಿಂದ ತಿಳಿದು ಬರುತ್ತದೆ. ಚಾಲುಕ್ಯ ಅರಸ 2ನೇ ಜಯಸಿಂಹ ಶಾಸನ ಆಧಾರದ ಮೇಲೆ ಅವರ ಇತಿಹಾಸ ತಿಳಿಯುತ್ತದೆ. ಕನ್ನಡ ಸಾಹಿತ್ಯದಲ್ಲಿ ಅವರು ವಚನ ಸಾಹಿತ್ಯದ ಹರಿಕಾರರಾಗಿದ್ದಾರೆ ಎಂದರು.

ಅವರ 164 ವಚನಗಳು ನಮಗೆ ಇಲ್ಲಿಯವರೆಗೆ ದೊರೆತಿವೆ. ಇನ್ನೂ ಅವರ ಮೇಲೆ ಸಂಶೋಧನೆ ಆಗಬೇಕಿದೆ. 2015 ರಲ್ಲಿ ಸರ್ಕಾರದ ವತಿಯಿಂದ ದೇವರ ದಾಸಿಮಯ್ಯ ಜಯಂತಿ ಆಚರಣೆ ಮಾಡುತ್ತಾ ಬರಲಾಗುತ್ತಿದೆ. ಇಳೆ ನಿಮ್ಮದಾನ ಬೆಳೆ ನಿಮ್ಮದಾನ. ಗಡ್ಡಮೀಸೆ ಬಂದರೆ ಗಂಡೆಂಬರು. ಮೊಲೆ ಮೂಡಿ ಬಂದರೆ ಹೆಣ್ಣೆಂಬರು ನಡುವೆ ಸುಳಿವ ಆತ್ಮ ಹೆಣ್ಣು ಅಲ್ಲ ಗಂಡು ಅಲ್ಲ ಹೀಗೆ ಹಲವಾರು ವಚನಗಳನ್ನು ಅವರು ರಚಿಸಿದ್ದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ, ದೇವಾಂಗ ಸಮಾಜದ ಮುಖಂಡರಾದ ನಾರಾಯಣಪ್ಪ ಕೊಳ್ಳಿ, ಚಂದ್ರಕಾಂತ ಬೆಟಗೇರಿ, ಪ್ರಹ್ಲಾದ ಅಗಳಿ, ಪಂಪಾಪತಿ ಅರಳಿಕಟ್ಟಿ, ನಾರಾಯಣಪ್ಪ ಹಾಗೂ ಪರಶುರಾಮ ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

## ಪ್ರತ್ಯೇಕ ಅಪಘಾತ: ಇಬ್ಬರು ಮಹಿಳೆಯರ ಸಾವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.2-ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯ ಹಸನಾಪೂರ ಕ್ರಾಸ್ ಹತ್ತಿರ ಮತ್ತು ಫರಹತಾಬಾದ ಹಳ್ಳದ ಹತ್ತಿರ ನಡೆದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮಹಿಳೆಯರು ಮೃತಪಟ್ಟಿದ್ದಾರೆ.

ಜೇವರ್ಗಿ-ಕಲಬುರಗಿ ರಸ್ತೆಯ ಹಸನಾಪೂರ ಕ್ರಾಸ್ ಹತ್ತಿರ ರಸ್ತೆ ದಾಟುವಾಗ ಅಪರಿಚಿತ ವಾಹನ ಡಿಕ್ಕಿ ಹೊಡೆದು ಸಿದ್ದಲಿಂಗಮ್ಮ ಎಂಬುವವರು ಮೃತಪಟ್ಟಿದ್ದು, ಕಡಣಿ ಗ್ರಾಮಕ್ಕೆ ಬೈಕ್ ಮೇಲೆ ಹೋಗುತ್ತಿದ್ದಾಗ ಫರಹತಾಬಾದ ಹಳ್ಳದ ಬಳಿ ಬೈಕ್ ಮೇಲಿಂದ ಬಿದ್ದು ಗುಂಡಮ್ಮ ಎಂಬುವವರು ಮೃತಪಟ್ಟಿದ್ದಾರೆ.

ಈ ಬಗ್ಗೆ ಸಂಚಾರಿ ಪೊಲೀಸ್ ಠಾಣೆ-1ರಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಏ.05 ರಂದು ಡಾ.ಬಾಬು ಜಗಜೀವನ್‌ರಾಮ್ ಅವರ 118ನೇ ಜನ್ಮ ದಿನೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.03–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ.ಬಾಬು ಜಗಜೀವನ್‌ರಾಮ್ ಅವರ 118 ನೇ ಜನ್ಮ ದಿನೋತ್ಸವ ಕಾರ್ಯಕ್ರಮವನ್ನು ಏ.05 ರಂದು ಮಧ್ಯಾಹ್ನ 01 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ವಸತಿ,ವಕ್ಫ್‌ಮತ್ತುಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝುಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪ ಅವರು ಘನಉಪಸ್ಥಿತಿ ಇರುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ರಾಜ್ಯ ಡಾ.ಬಾಬು ಜಗಜೀವನ್‌ರಾಮ್ ಜನಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಪಂಪಾಪತಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಬಳ್ಳಾರಿ ತಾಲ್ಲೂಕಿನ ಸಂಗನಕಲ್ಲು ಗ್ರಾಮದ ಚಿಂತಕರು ಹಾಗೂ ಲೇಖಕರಾದ ಡಾ.ಬಿ.ಶ್ರೀನಿವಾಸ ಮೂರ್ತಿ ಅವರು ಭಾಷಣಕಾರರಾಗಿ ಭಾಗವಹಿಸುವರು.

ಏ.05 ರಂದು ಬೆಳಿಗ್ಗೆ 09 ಗಂಟೆಗೆ ಡಾ.ಬಾಬು ಜಗಜೀವನ್ ರಾಮ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು.

ಮೆರವಣಿಗೆ:

ಬಳಿಕ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಿಂದ ಗಡಿಗಿ ಚೆನ್ನಪ್ಪ ವೃತ್ತ–ಬ್ರೂಸ್ ಪೇಟೆ ಪೊಲೀಸ್ ಠಾಣೆ–ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ಮೆರವಣಿಗೆ ನಡೆಯಲಿದೆ.

ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕರಾದ ಬಿ.ಎಸ್ ಲೋಕೇಶ್ ಕುಮಾರ್, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಬಳ್ಳಾರಿ ಮಹಾನಗರ ಪಾಲಿಕೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ.ಬಿ ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಗ್ರಾಮ ಒನ್ ಸೇವಾ ಕೇಂದ್ರಗಳಿಗೆ ಫ್ರಾಂಚೈಸಿಗಳ ನೇಮಕ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.03–ಸರ್ಕಾರದ ಇಡಿಸಿಎಸ್ ನಿರ್ದೇಶನಾಲಯದ ಇ–ಆಡಳಿತ ಇಲಾಖೆಯ ನಿರ್ದೇಶನದಂತೆ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಒನ್ ಸೇವಾ ಕೇಂದ್ರಗಳಿಗೆ ಫ್ರಾಂಚೈಸಿಗಳನ್ನು ನೇಮಕ ಮಾಡಲು ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

ಜಿಲ್ಲೆಯ 02 ಗ್ರಾಮ – ಒನ್ ಕೇಂದ್ರಗಳಿಗೆ ಫ್ರಾಂಚೈಸಿಯನ್ನು ನೇಮಕಮಾಡಲು ಉದ್ದೇಶಿಸಲಾಗಿದೆ. ಬಳ್ಳಾರಿ ತಾಲ್ಲೂಕಿನ ಶಿಡಗಿನಮೊಳ ಮತ್ತು ಸಂಡೂರು ತಾಲ್ಲೂಕಿನ ಭುಜಂಗನಗರ ಗ್ರಾಮ ಪಂಚಾಯತಿ. ಖಾಲಿಯಿರುವ ಗ್ರಾಮ ಒನ್ ಕೇಂದ್ರಗಳ ವಿವರ ಮತ್ತು ಅರ್ಜಿ ಸಲ್ಲಿಸಲು https://kal-mys.gramaone.karnataka.gov.in/ ಗೆ ಭೇಟಿ ನೀಡಬಹುದು.

ನಾಗರೀಕ ಸೇವಾ ಕೇಂದ್ರ ಗ್ರಾಮ ಒನ್ ಫ್ರಾಂಚೈಸಿಯನ್ನು ಬಯಸುವವರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಏಪ್ರಿಲ್ 15 ಕೊನೆಯ ದಿನ ಆಗಿರುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.03–ಬಳ್ಳಾರಿಯ ಗಾಂಧಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಶೇಕ್ಷಾವಲಿ ಎನ್ನುವ 35 ವರ್ಷದ ವ್ಯಕ್ತಿಯು ಮಾ.29 ರಂದು ಕಾಣೆಯಾಗಿದ್ದು, ಈ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಸಬ್ ಇನ್ಸ್‌ಪೆಕ್ಟರ್ ಅವರು ತಿಳಿಸಿದ್ದಾರೆ.

ಚಹರೆ ಗುರುತು: ಅಂದಾಜು 5.2 ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ, ಸದೃಢ ಮೈಕಟ್ಟು ಹೊಂದಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ತುಂಬು ತೋಳಿನ ಅಂಗಿ ಹಾಗೂ ಕ್ರೀಂ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು, ಹಿಂದಿ ಮತ್ತು ಆಂಗ್ಲ ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಗಾಂಧಿನಗರ ಪೊಲೀಸ್ ಠಾಣೆಯ ದೂ.08392–272192 ಅಥವಾ ಪಿಎಸ್‌ಐ ಮೊ.9480803082, ಪಿಐ ಮೊ.9480803046 ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.05 ರಂದು ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.03–ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯ ಅಲ್ಲಿಪುರ ಮತ್ತು ಮೋಕಾ ನೀರು ಸರಬರಾಜು ಘಟಕಗಳಲ್ಲಿ ಹೊಸ ಪೊಟೆನ್ಷಿಯಲ್ ಟ್ರಾನ್ಸಾರ್ಮರ್ ಅಳವಡಿಕೆ, ಲೈನ್ ಬದಲಾವಣೆ ಹಾಗೂ ವಿದ್ಯುತ್ ದುರಸ್ತಿ ಕಾರ್ಯ ಕೈಗೊಳ್ಳುಕೊಳ್ಳುತ್ತಿರುವುದರಿಂದ ಏ.05 ರಂದು ಬೆಳಿಗ್ಗೆ 09 ರಿಂದ ಸಂಜೆ 6 ಗಂಟೆಯವರೆಗೆ ಮಹಾನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ವಾರ್ಡ್‌ಗಳಲ್ಲಿ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮದ ಕರಪತ್ರ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆಯ ಶಹಾಪೂರ ತಾಲೂಕಿನ ಹಳ್ಳೆ ಪ್ರವಾಸಿ ಮಂದಿರದಲ್ಲಿ ಇಂದು ಡಾ|ಬಾಬಾ ಸಾಹೇಬ ಅಂಬೇಡ್ಕರ್ ರವರ ಪರಿಶ್ರಮದ ಕಾರಣದಿಂದಾಗಿ ಹಲವು ಸಂವಿಧಾನದ ಹಕ್ಕುಗಳನ್ನು ಪಡೆದು ಆರಾಮವಾಗಿ ಬದುಕುತ್ತಿರುವ ನಾವು ಬಾಬಾ ಸಾಹೇಬ ಅಂಬೇಡ್ಕರ್ ರವರ ಪ್ರಬುದ್ಧ ಭಾರತದ ಕನಸನ್ನು ಸಕಾರಗೊಳಿಸಲು ಮುನ್ನಡೆಯಬೇಕಿದೆ

ಬೌದ್ಧ ಧರ್ಮದ ಜ್ಞಾನ ಮತ್ತು ಸಂಸ್ಕಾರಗಳನ್ನು ನಮ್ಮ ಬದುಕಿನಲ್ಲಿ ರೂಪಿಸಿಕೊಳ್ಳಬೇಕಾಗಿದೆ

12 ಮೇ 2025 ರಂದು ಸರಳ ಸಾಮೂಹಿಕ ವಿವಾಹ ಸಮಾರಂಭವನ್ನು ಹಮ್ಮಿಕೊಂಡಿದೆ

ಈ ಸಂದರ್ಭದಲ್ಲಿ ಮದುವೆಗೆ ಆಸಕ್ತಿ ಇರುವ ವಧು–ವರ ಜೋಡಿಗಳು ತಮ್ಮ ಹೆಸರನ್ನು ಅಗತ್ಯ ದಾಖಲೆಗಳ ಸಮೇತ ಸಂಘಟನೆಯ ಮುಖಂಡರಲ್ಲಿ ನೊಂದಾಯಿಸಲು ಸೂಚಿಸಲಾಗಿದೆ

ಹಾಗೂ ಈ ಕಾರ್ಯಕ್ರಮಕ್ಕೆ ಎಲ್ಲಾ ಅಂಬೇಡ್ಕರ್ ಅನುಯಾಯಿಗಳು ದಲಿತ ಸಮಾಜದ ಬಾಂಧವರು, ಪ್ರಗತಿಪರ ಚಿಂತಕರು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ವಿನಂತಿ

ದಲಿತ ಸಂಘರ್ಷ ಸಮಿತಿ (ಸಂಯೋಜಕ ಬಣ) ಯಾದಗಿರ ಜೀಲ್ಲಾ ಸಮಿತಿ ವತಿಯಿಂದ ರಾಯಪ್ಪ ಸಾಲಿಮನಿ ಜೀಲ್ಲಾಧ್ಯಕ್ಷರು ಸಭೇ ಅಧ್ಯಕ್ಷತೆ ವಹಿಸಿದ್ದರು ಈ ಕರಪತ್ರ ಬಿಡುಗಡೆ ಸಭೆಯಲ್ಲಿ ಶ್ರೀ ಶಿವಕುಮಾರ ತಳವಾರ ನಗರ ಸಭೆ ಸದಸ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು ಮತ್ತು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಕರಪತ್ರ ಬಿಡುಗಡೆ ಮಾಡಿದರು ಈ ಸಭೆಯಲ್ಲಿ ಬಸವರಾಜ ಗುಡಿಮನಿ ಮಹಾದೇವ ದಿಗ್ಗಿ ಸಾಯಿಬಾಬಾ ಅಣಬಿ ಮರೆಪ್ಪ ಜಾಲಿಮಂಚಿ ಅಶೋಕ ತಳವಾರ ರಾಯಪ್ಪ ಗಂಗನಾಳ ವೀರೆಶ ಕೋಳ್ಳುರು ದೇವಿಂದ್ರ ಛಲವಾದಿ ರವಿ ಬಿರನೂರು ಲಕ್ಷ್ಮಣ ಹಳಿಸಗರ ಮಾನಪ್ಪ ಜೆಗ್ರಿ ಚಂದ್ರಶೇಖರ ಹುಲಿಮನಿ ಸಂತೋಷ ಹೊಸ್ಮನಿ ಸಿದ್ದು ಮುಂಡಾಸ ಬಸ್ಸು ಚೆಪ್ಪರ ಚಂದ್ರಕಾಂತ ಬಜೇರಿ ಪರಶುರಾಮ ರೋಜಾ ಅಯ್ಯಪ್ಪ ಗೊಂದೆನೂರು ಅಮ್ಮಜಾದ ಹುಸೆನ್ ಮಲ್ಲಿಕಾರ್ಜುನ ರಸ್ತಾಪೂರ ಅನೇಕ ಸಂಘಟನೆಯ ಪದಾಧಿಕಾರಿಗಳು ಕಾರ್ಯಕರ್ತರು ಭಾಗವಹಿಸಿದ್ದರು.

# 19.38 ಲಕ್ಷ ರೂ ವಶ


ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ನಗರದ ಗೋಲ್ಡ್ ಸ್ಮಿತ್ ರಸ್ತೆಯ ಕುಂಬಾರ ಓಷಿ ಬಳಿ ವಾಸವಿ ಸ್ವಗೃಹ ಹೋಮ್ ನೀಡ್ ಎಂಬ ಅಂಗಡಿ ತೆರೆದು ಅಲ್ಲಿಗೆ ಬಂದ ಗ್ರಾಹಕರಿಂದ ಚೀಟಿ ರೂಪದಲ್ಲಿ ಹಣ ಪಡೆದು ಮಾಸಿಕ ಶೇ 25 ರಷ್ಟು ಲಾಭ ನೀಡುವುದಾಗೊ ವಂಚಿಸುತ್ತದ್ದ ವ್ಯಕ್ತಿಯನ್ನು ಬ್ರೂಸ್ ಪೇಟೆ ಪೊಲೀಸರು ಬಂಧಿಸಿದ್ದಾರೆ.

# ಏ.10 ರಂದು ಭಗವಾನ್ ಮಹಾವೀರ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.02–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಭಗವಾನ್ ಮಹಾವೀರ ಜಯಂತಿ ಕಾರ್ಯಕ್ರಮವನ್ನು ಏ.10 ರಂದು ಬೆಳಿಗ್ಗೆ 11 ಗಂಟೆಗೆ ನಗರದ ತೇರುಬೀದಿಯ ಶ್ರೀ ಪಾರ್ಶ್ವನಾಥ್ ಭವನದಲ್ಲಿ ಆಯೋಜಿಸಲಾಗಿದೆ.



ವಸತಿ,ವಕ್ಫ್‌ಮತ್ತುಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝುಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಸಾಧ್ವಿಜಿ ಶ್ರೀ ಸೂರ್ಯಪ್ರಭ ಶ್ರೀಜಿ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಕೆ.ಸುಧಾ ಅವರ ತಂಡದಿಂದ ಭಕ್ತಿ ಸಂಗೀತ ಇರಲಿದೆ.

ಮೆರವಣಿಗೆ:

ಜಯಂತಿ ಅಂಗವಾಗಿ ಅಂ–ದು ಬೆಳಿಗ್ಗೆ 09 ಗಂಟೆಗೆ ಶ್ರೀ ಪಾರ್ಶ್ವನಾಥ್ ಜೈನ್ ಮಂದಿರ–ತೇರು ಬೀದಿ–ಕಾಳಮ್ಮ ಬೀದಿ–ಬೆಂಗಳೂರು ರಸ್ತೆ–ಹಳೆ ಬ್ರೂಸ್ ಪೇಟೆ ಪೊಲೀಸ್ ಠಾಣೆ ರಸ್ತೆ–ಶ್ರೀ ಪಾರ್ಶ್ವನಾಥ್ ಜೈನ್ ಮಂದಿರವರೆಗೆ ಮೆರವಣಿಗೆ ನಡೆಯಲಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಸಮಸ್ತ ಜೈನ ಸಮುದಾಯದವರು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಪುಣ್ಯಾನಂದಪುರಿ ಶ್ರೀಗಳ 18 ನೇ ಪುಣ್ಯತಿಥಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ:ಏ,3–ರಾಜ್ಯದ ಹರಿಹರ ತಾಲೂಕಿನ ರಾಜನಹಳ್ಳಿಯ ಶ್ರೀ ವಾಲ್ಮೀಕಿ ಗುರುಪೀಠದ ಪ್ರಥಮ ಪೀಠಾಧ್ಯಕ್ಷ ಪುಣ್ಯಾನಂದಪುರಿ ಸ್ವಾಮಿಗಳ 18 ನೇ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ನಗರದಲ್ಲಿನ ಅಖಂಡ ಕರ್ನಾಟಕ ವಾಲ್ಮೀಕಿ ನಾಯಕರ ಒಕ್ಕೂಟ ಕಚೇರಿಯಲ್ಲಿ ಇಂದು ಆಚರಿಸಲಾಯಿತು.

ಸ್ವಾಮೀಜಿಗಳು ವಾಲ್ಮೀಕಿ ಸಮುದಾಯದಲ್ಲಿ ಚೇತನವನ್ನು ಮೂಡಿಸಿ ಸಮಾಜದ ಅಭಿವೃದ್ಧಿಗೆ ಹಗಲು–ರಾತ್ರಿ ಶ್ರಮಿಸಿದರು. ಯಾವುದೇ ಒತ್ತಡಗಳಿಗೆ ಮಣಿಯದೆ ಸಮಾಜವನ್ನು ಕಟ್ಟುವಲ್ಲಿ ರಾಜ್ಯಾದ್ಯಂತ ಪ್ರವಾಸ ಮಾಡಿ ಯಶಸ್ವಿಯಾಗಿದ್ದರು, ಆದರೆ ಅಕಾಲಿಕ ಮರಣ ಹೊಂದಿರುವುದರಿಂದ ಸಮಾಜ ತುಂಬಲಾರದ ನಷ್ಟವನ್ನು ಅನುಭವಿಸುತ್ತಿದೆ. ಅವರು ಸಮಾಜದಲ್ಲಿ ಬಿತ್ತಿದ ಶಿಕ್ಷಣ ಸಂಘಟನೆ ಅಭಿವೃದ್ಧಿ ಮತ್ತು ರಾಜಕೀಯದ ಶಕ್ತಿಯನ್ನು ಸಮಾಜವು ಪಡೆದುಕೊಳ್ಳಬೇಕು ಸ್ವಾಮೀಜಿಗಳ ಆಶಯವು ಇದಾಗಿತ್ತು. ಈಗ ನಾವೆಲ್ಲರೂ ಇದನ್ನು ಮುಂದುವರೆಸಿಕೊಂಡು ಹೋಗಬೇಕಾಗಿರುವುದು ಎಲ್ಲರ ಜವಾಬ್ದಾರಿಯಾಗಿದೆಂದು ಕಾರ್ಯಕ್ರಮದಲ್ಲಿ ಪಾಲ್ಗೊಂಡವರು ನುಡಿದರು.

ಎಸ್ಪಿ ಸರ್ಕಲ್ ಮಲ್ಲಿಕಾರ್ಜುನ, ಕುರಿಹಟ್ಟಿ ಭಾಸ್ಕರ್, ಪುರಂದಾಮ, ಗೋವಿಂದ, ರಾಜು, ವಾಲ್ಮೀಕಿ ಮತ್ತು ಚಂದ್ರು ಯಾಳ್ಪಿ, ಸಂಗನಕಲ್ಲು ವಿಜಯಕುಮಾರ್, ಹಿ ರವಿಕುಮಾರ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು

# ರಾಜ್ಯದಲ್ಲಿ ಮೂರು ದಿನ ವ್ಯಾಪಕ ಮಳೆ ಸಾಧ್ಯತೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.3–ಮಾರ್ಚ್ ಕೊನೆಯ ವಾರದಿಂದ ರಾಜ್ಯದಲ್ಲಿ ಚದುರಿದಂತೆ ಮಳೆಯಾಗುತ್ತಿದ್ದು, ಮಳೆ ಪ್ರಮಾಣ ಹೆಚ್ಚಾಗಲಿದೆ. ಹವಾಮಾನ ಮುನ್ಸೂಚನೆ ಪ್ರಕಾರ ಮೂರು ದಿನಗಳ ಕಾಲ ಮಳೆಯಾಗುವ ಸಾಧ್ಯತೆಗಳಿವೆ.

ಬಂಗಾಳಕೊಲ್ಲಿಯ ನೈರುತ್ಯ ಭಾಗದಲ್ಲಿ ಮೇಲೆ., ಸುಳಿಗಾಳಿ ಉಂಟಾಗಿದ್ದು, ರಾಜ್ಯದ ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಭಾಗಶಃ ಮೋಡ ಕವಿದ ವಾತಾವರಣ ಕಂಡು ರುತ್ತಿದೆ. ಮಲೆನಾಡು ಸೇರಿದಂತೆ ರಾಜ್ಯದ ಕೆಲವೆಡೆ ಚದುರಿದಂತೆ ಮಳೆಯಾಗುತ್ತಿದೆ. ನಾಳೆಯಿಂದ ಮೂರು ದಿನಗಳ ಕಾಲ ರಾಜ್ಯದ ಕೆಲವೆಡೆ ವ್ಯಾಪಕ ಹಾಗೂ ಭಾಗಶಃ ವ್ಯಾಪಕ ಮಳೆಯಾಗುವ ಲಕ್ಷಣಗಳಿವೆ.


ಹವಾಮಾನ ಮುನ್ಸೂಚನೆ ಪ್ರಕಾರ ರಾಜ್ಯದ ಕರಾವಳಿ, ಮಲೆನಾಡು, ದಕ್ಷಿಣ ಹಾಗೂ ಉತ್ತರ ಒಳನಾಡಿನಲ್ಲಿ ಇಂದಿನಿಂದ ಮಳೆ ಹೆಚ್ಚಾಗುವ ಸಾಧ್ಯತೆಗಳಿವೆ. ಹೀಗಾಗಿ ಭಾರತೀಯ ಹವಾಮಾನ ಇಲಾಖೆ ಕರಾವಳಿ ಮತ್ತು ಮಲೆನಾಡಿನ ಜಿಲ್ಲೆಗಳಿಗೆ ಭಾರಿ ಮಳೆ ಮುನ್ಸೂಚನೆ ನೀಡಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ನಿನ್ನೆ ರಾಜ್ಯದ 12 ಜಿಲ್ಲೆಗಳಲ್ಲಿ ಚದುರಿದಂತೆ ಮಳೆಯಾಗಿದ್ದರೆ, 19 ಜಿಲ್ಲೆಗಳಲ್ಲಿ ಅತ್ಯಲ್ಪ ಪ್ರಮಾಣದ ಮಳೆಯಾಗಿದೆ. ಮೈಸೂರು, ಮಂಡ್ಯ, ಹಾಸನ, ಉಡುಪಿ, ಬೆಳಗಾವಿ, ತುಮಕೂರು, ಶಿವಮೊಗ್ಗ, ಕೊಡಗು, ಯಾದಗಿರಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಮತ್ತು ಧಾರವಾಡ ಜಿಲ್ಲೆಗಳಲ್ಲಿ ಅಲ್ಲಲ್ಲಿ ಮಳೆಯಾಗಿದೆ.

ಹವಾಮಾನ ಮುನ್ಸೂಚನೆ ಪ್ರಕಾರ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ದಕ್ಷಿಣ ಒಳನಾಡು, ಮಲೆನಾಡು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಸಂಜೆ ಹಾಗೂ ರಾತ್ರಿ ಮಳೆಯಾಗುವ ಸಾಧ್ಯತೆಗಳಿವೆ. ಕೆಲವೆಡೆ ಬಿರುಗಾಳಿ, ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ನಿರೀಕ್ಷೆ ಇದೆ.

ಏ.4ರಿಂದ ಏ.6ರವರೆಗೆ ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಮೈಸೂರು, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಗಳು ಇದ್ದು, ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ.

# ಶೇ.78ರಷ್ಟು ಬೆಳವಣಿಗೆ ಕಂಡ ಆಧಾರ್ ಮುಖ ದೃಢೀಕರಣ




ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ, ಏ.2–ಆಧಾರ್ ಮುಖ ದೃಢೀಕರಣ ಪರಿಹಾರಗಳು ಪ್ರಸಕ್ತ ಹಣಕಾಸು ವರ್ಷದಲ್ಲಿ ಒಟ್ಟು ವಹಿವಾಟಿನ ಶೇ 78 ಕ್ಕಿಂತ ಹೆಚ್ಚು ಬೆಳವಣಿಗೆಯನ್ನು ಕಂಡಿವೆ ಎಂದು ಸರ್ಕಾರ ತಿಳಿಸಿದೆ.

ಅಕ್ಟೋಬರ್ 2022 ರಲ್ಲಿ ಮುಖ ದೃಢೀಕರಣ ಪರಿಹಾರವನ್ನು ಪರಿಚಯಿಸಿದಾಗಿನಿಂದ, ಯುಐಡಿಎಐ 130.5 ಕೋಟಿಗೂ ಹೆಚ್ಚು ಸಂಚಿತ ವಹಿವಾಟು ಸಂಖ್ಯೆಯನ್ನು ದಾಖಲಿಸಿದೆ, ಅದರಲ್ಲಿ 102 ಕೋಟಿ 2024–25ರ ಹಣಕಾಸು ವರ್ಷದಲ್ಲಿ ದಾಖಲಾಗಿದೆ.

ಇದು ಹೆಚ್ಚುತ್ತಿರುವ ಬಳಕೆ, ಈ ಪರಿಹಾರದ ಅಳವಡಿಕೆ ಮತ್ತು ಆಧಾರ್ ಸಂಖ್ಯೆ ಹೊಂದಿರುವವರಿಗೆ ಹೇಗೆ ಪ್ರಯೋಜನಕಾರಿಯಾಗಿದೆ ಎಂಬುದನ್ನು ಸೂಚಿಸುತ್ತದೆ ಎಂದು ಐಟಿ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

ಈ ವರ್ಷದ ಜನವರಿ–ಮಾರ್ಚ್ ಅವಧಿಯಲ್ಲಿ ಸುಮಾರು 39.5 ಕೋಟಿ ಮುಖ ದೃಢೀಕರಣ ವಹಿವಾಟುಗಳು ದಾಖಲಾಗಿವೆ. ಮಾರ್ಚ್ ತಿಂಗಳೊಂದರಲ್ಲೇ ಫೇಸ್ ಆಥ್ ಸೊಲ್ಯೂಷನ್ಸ್ 15.25 ಕೋಟಿಗೂ ಹೆಚ್ಚು ವಹಿವಾಟುಗಳನ್ನು ದಾಖಲಿಸಿದೆ. ಇದು ಹಿಂದಿನ ತಿಂಗಳಿಗೆ ಹೋಲಿಸಿದರೆ ಶೇಕಡಾ 21.6 ರಷ್ಟು ಹೆಚ್ಚಾಗಿದೆ.

"ಈ ಸಾಧನೆಯು ವೈವಿಧ್ಯಮಯವಾಗಿ ಈ ಹೊಸ ಬಯೋಮೆಟ್ರಿಕ್ ದೃಢೀಕರಣ ವಿಧಾನದ ನಂಬಿಕೆ ಮತ್ತು ಅಳವಡಿಕೆಯನ್ನು ಒತ್ತಿಹೇಳುತ್ತದೆ ಎನ್ನಲಾಗಿದೆ.

# ಬೆಂಗಳೂರು :ಬೆಲೆ ಏರಿಕೆ ಖಂಡಿಸಿ ಬಿಜೆಪಿಯಿಂದ ಅಹೋರಾತ್ರಿ ಧರಣಿ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.2–ಸರ್ಕಾರದ ನಿರಂತರ ಬೆಲೆ ಏರಿಕೆ ವಿರೋಧಿಸಿ ಅಧಿಕೃತ ಪ್ರತಿಪಕ್ಷ ಬಿಜೆಪಿ ಇಂದಿನಿಂದ ನಗರದ ಫ್ರೀಡಂಪಾರ್ಕ್‌ನಲ್ಲಿ ಅಹೋರಾತ್ರಿ ಧರಣಿಯನ್ನು ಆರಂಭಿಸಿದೆ. ಫ್ರೀಡಂಪಾರ್ಕ್‌ನಲ್ಲಿ ಆರಂಭವಾದ ಧರಣಿಗೆ ಮಾಜಿ ಸಿಎಂ ಯಡಿಯೂರಪ್ಪ, ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ, ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವರಾದ ಆರಗ ಜ್ಞಾನೇಂದ್ರ, ವಿ.ಸುನೀಲ್‌ಕುಮಾರ್, ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಪಕ್ಷದ ಪದಾಧಿಕಾರಿಗಳು ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಇಂದಿನಿಂದ ಆರಂಭವಾಗಿರುವ ಅಹೋರಾತ್ರಿ ಧರಣಿ ಶುಕ್ರವಾರ ಬೆಳಗ್ಗೆವರೆಗೂ ಮುಂದುವರೆಯಲಿದ್ದು, ಸರ್ಕಾರದ ಬೆಲೆ ಏರಿಕೆಯನ್ನು ಹಿಂತೆಗೆದುಕೊಳ್ಳಬೇಕೆಂದು ಬಿಜೆಪಿ ಆಗ್ರಹಿಸಿದೆ. ಪ್ರತಿಭಟನಾನಿರತರು ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಷಣೆಗಳನ್ನು ಕೂಗಿ ಗ್ಯಾರಂಟಿ ಹೆಸರಿನಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ. ತಮ ಗ್ಯಾರಂಟಿಗಳನ್ನು ಪೂರ್ಣಗೊಳಿಸಲು ನಿರಂತರವಾಗಿ ಬೆಲೆ ಏರಿಕೆ ಮಾಡುತ್ತಿದೆ.

ಹಾಲು, ವಿದ್ಯುತ್, ಕಸ, ಡೀಸೆಲ್ ಹೀಗೆ ಪ್ರತಿಯೊಂದರ ಮೇಲೂ ತೆರಿಗೆ ಹೆಚ್ಚಳ ಮಾಡಲಾಗಿದೆ. ಜನರ ಪಾಲಿಗೆ ಈ ಸರ್ಕಾರ ಶಾಪವಾಗಿದೆ. ಹೆಚ್ಚಳ ಮಾಡಿರುವುದನ್ನು ಕೂಡಲೇ ಹಿಂಪಡೆಯಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಲಾಗುವುದು ಎಂದು ಹೋರಾಟಗಾರರು ಸರ್ಕಾರಕ್ಕೆ ಎಚ್ಚರಿಕೆ ಕೊಟ್ಟರು.

ಪ್ರತಿಭಟನೆಯಲ್ಲಿ ಮಾತನಾಡಿದ ಮಾಜಿ ಸಿಎಂ ಯಡಿಯೂರಪ್ಪ, ಈ ಸರ್ಕಾರಕ್ಕೆ ಜನಹಿತ ಮುಖ್ಯವಲ್ಲ. ಈಗಾಗಲೇ ಎಲ್ಲಾ ವಸ್ತುಗಳ ಬೆಲೆ ಏರಿಕೆ ಮಾಡಿದ್ದಾರೆ. ನಿನ್ನೆ ತಡರಾತ್ರಿ ಡಿಸೇಲ್ ಬೆಲೆಯನ್ನು ಏರಿಕೆ ಮಾಡಿದ್ದಾರೆ. ಇವರಿಗೆ ಜನರ ಹಿತಕ್ಕಿಂತ ತಮ ಖುರ್ಚಿ ಉಳಿಸಿಕೊಳ್ಳುವುದೇ ಮುಖ್ಯವಾಗಿದೆ ಎಂದು ಗುಡುಗಿದರು.

ಬೆಲೆ ಏರಿಕೆ ಖಂಡಿಸಿ ಬಿಜೆಪಿ ಇಂದು ಅಹೋರಾತ್ರಿ ಧರಣಿ ನಡೆಸಲಿದೆ. ನಾನು ಕೂಡ ಧರಣಿಯಲ್ಲಿ ಭಾಗಿಯಾಗಲಿದ್ದೇನೆ. ತಕ್ಷಣವೇ ಸರ್ಕಾರ ಬೆಲೆ ಏರಿಕೆಯನ್ನು ಹಿಂಪಡೆಯಬೇಕು. ಅಲ್ಲಿಯವೆಗೂ ನಮ ಹೋರಾಟ ಮುಂದುವರೆಯಲಿದೆ ಎಂದು ಹೇಳಿದರು.

ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಸ್ಪಿಕರ್ ನಮ ಶಾಸಕರನ್ನ ಅಮಾನತು ಮಾಡಿ ಕೆಲವು ಷರತ್ತುಗಳನ್ನು ವಿಧಿಸಿದ್ದರು. ಶಾಸಕರು ಕಮಿಟಿ ಸಭೆಗೆ ಹೋಗಬಾರದ್ದು, ಮೊಗಸಾಲೆಗೆ ಬರಬಾರದ್ದು ಅಂತ ಆದೇಶಿದ್ದರು. ಕಾನೂನು ಬಾಹಿರ ವಿರೋಧಿ ಆದೇಶವನ್ನ ವಿರೋಧಿಸಿ ಪ್ರತಿಭಟನೆ ನಡೆಸಿದ್ದೇವೆ ಎಂದರು.

ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ಜನರನ್ನು ಲೂಟಿ ಮಾಡುತ್ತಿದೆ. ಆಲಿಬಾಬಾ ಮತ್ತು ಕಳ್ಳರ ಕಥೆ ಕೇಳಿದ್ದೊ, ಈಗ ಆಲಿಬಾಬ ಮತ್ತು 135 ಜನ ಕಳ್ಳರಿದ್ದಾರೆ. ನಾವು ಅಣೇಕಟ್ಟು ಕಟ್ಟುತ್ತಿವಿ, ಡ್ಯಾಮ್ ಕಟ್ಟುತ್ತಿವೆ ಅಂತಾ–ರೆ, ಮತ್ತೊಂದು ಕಡೆ ಎಷ್ಟು ಟ್ಯಾಕ್ಸ್ ಹಾಕುತ್ತೆವೆ ಎಂಬುದನ್ನು ಹೇಳುವುದಿಲ್ಲ. ಬಜೆಟ್‌ನಲ್ಲಿ ಟ್ಯಾಕ್ ಬಗ್ಗೆ ಹೇಳಿಲ್ಲ, ಆದರೆ ಪ್ರತಿ ದಿನ ಬೆಲೆ ಏರಿಕೆ ಮಾಡಿ ಬರೆ ಎಳಿತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಇದನ್ನು ಪ್ರತಿ ಮನೆ ಮನೆಗೂ ತೆರಳಿ ಮನವರಿಕೆ ಮಾಡಿಕೊಡುತ್ತೆವೆ. ಜನರಿಗೆ ಆಗುತ್ತಿರುವ ಅನ್ಯಾಯವನ್ನು ತಡಬೇಕಿದೆ ಎಂದು ಕರೆ ನೀಡಿದರು.

# ಬಾಗಲಕೋಟೆ–ಎ.5 ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.3–ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ದಿನಾಂಕ ಏಪ್ರಿಲ್ 5 ರಂದು ಬೆಳಿಗ್ಗೆ 10:30 ರಿಂದ ಸಂಜೆ 3 ಗಂಟೆಯವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ರೂಂ ನಂ–135, ಜಿಲ್ಲಾಡಳಿತ ಭವನ ನವನಗರ ಬಾಗಲಕೋಟೆಯಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ಈ ನೇರ ಸಂದರ್ಶನದಲ್ಲಿ ಂಣಾಟಚಿಟಟ ಜುಟಿಚಿಟಿಛಿಜ ಃಚಿಟಿಞ ಃಚಿಂಚಿಟಞಂಣಜ & ಕಿಣಾಞ ಛಿಂಡಿರಿ ಖಿಟಿಣ– ಜಜ ಬೆಂಗಳೂರು ಕಂಪನಿಗಳು ಭಾಗವಹಿಸಿ ಹಲವಾರು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಸಂದರ್ಶನದಲ್ಲಿ 19 ರಿಂದ 35 ವಯೋಮಿತಿಯಲ್ಲಿರುವ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವೀಧರರು ಭಾಗವಹಿಸಬಹುದಾಗಿದೆ.

ಸಂದರ್ಶನದಲ್ಲಿ ಭಾಗವಹಿಸಲು ಇಚ್ಛಿಸುವ ಅಭ್ಯರ್ಥಿಗಳು ತಮ್ಮ ಬಯೋಡೆಟಾ ಮತ್ತು ಮೂಲ ಅಂಕ ಪಟ್ಟಿಗಳ ಝರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಉದ್ಯೋಗ ವಿನಿಮಯ ಕಛೇರಿ ದೂರವಾಣಿ ಸಂಖ್ಯೆ 08354–235337, 91767663418 4ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಜೋಳ ಹಾಗೂ ಭತ್ತ

## ಖರೀದಿಗಾಗಿ ನೋಂದಣಿ ಪ್ರಕ್ರಿಯೆ ಆರಂಭ: ಜಿಲ್ಲೆಯಲ್ಲಿ 07 ಜೋಳ ಹಾಗೂ 08 ಭತ್ತ ಖರೀದಿ ಕೇಂದ್ರಗಳ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.03–2024–25ನೇ ಸಾಲಿನ ಹಿಂಗಾರು (ರಬಿ) ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಜೋಳ ಮತ್ತು ಭತ್ತ ಖರೀದಿಸಲು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ತೀರ್ಮಾನದಂತೆ ಜಿಲ್ಲೆಯಲ್ಲಿ ಜೋಳ ಮತ್ತು ಭತ್ತ ಖರೀದಿಯ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ವತಿಯಿಂದ ಜಿಲ್ಲೆಯಲ್ಲಿ ಒಟ್ಟು 07 ಜೋಳ ಖರೀದಿ ಕೇಂದ್ರ ಹಾಗೂ 08 ಭತ್ತ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ಜಿಲ್ಲೆಯ ರೈತರಿಂದ ಜೋಳ ಮತ್ತು ಭತ್ತ ನೊಂದಣಿ ಮತ್ತು ಖರೀದಿಗೆ ಸಂಗ್ರಹಣಾ ಏಜೆನ್ಸಿಯನ್ನಾಗಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತವನ್ನು ಸರ್ಕಾರವು ನೇಮಿಸಿದ್ದು, ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ– ಹೈಬ್ರಿಡ್ ಪ್ರತಿ ಕ್ವಿಂಟಾಲ್‌ಗೆ ದರ 3371 ರೂ. ಹಾಗೂ ಬಿಳಿಜೋಳ ಪ್ರತಿ ಕ್ವಿಂಟಾಲ್‌ಗೆ ದರ 3421 ರೂ. ಇರುತ್ತದೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೆರೆಯಲಾದ ಜೋಳ ಖರೀದಿ ಕೇಂದ್ರಗಳ ವಿವರ, ಖರೀದಿ ಕೇಂದ್ರದ ಅಧಿಕಾರಿಗಳ ಹೆಸರು ಮತ್ತು ಮೊಬೈಲ್ ಸಂಖ್ಯೆಗಳ ವಿವರ ಕೆಳಕಂಡಂತೆ ಇರುತ್ತದೆ.

ಅಫಜಲಪೂರ: ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಅಫಜಲಪೂರ (ಖರೀದಿ ಕೇಂದ್ರದ ಅಧಿಕಾರಿ–ಕು. ದೀಪಾ ಚಿಕಮೆಟ್ಟಿ–ಮೊಬೈಲ್ ಸಂ–ಖ್ಯೆ 8861258207). ಆಳಂದ: ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಆಳಂದ (ಖರೀದಿ ಕೇಂದ್ರದ ಅಧಿಕಾರಿ– ರಾಜಕುಮಾರ–8880659915). ಚಿಂಚೋಳಿ: ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಚಿಂಚೋಳಿ (ಖರೀದಿ ಕೇಂದ್ರದ ಅಧಿಕಾರಿ–ಚಂದ್ರಕಾಂತ ಬೆಣ್ಣಿಸಿರೂರು–9448133987). ಚಿತ್ತಾಪೂರ: ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಚಿತ್ತಾಪೂರ (ಖರೀದಿ ಕೇಂದ್ರದ ಅಧಿಕಾರಿ–ಪ್ರಕಾಶ ಪವಾರ–9845359642). ಕಲಬುರಗಿ: ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಕಲಬುರಗಿ (ಖರೀದಿ ಕೇಂದ್ರದ ಅಧಿಕಾರಿ–ಪ್ರಕಾಶ ಪವಾರ–9845359642). ಜೇವರ್ಗಿ: ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಜೇವರ್ಗಿ (ಖರೀದಿ ಕೇಂದ್ರದ ಅಧಿಕಾರಿ– ರಾಜಕುಮಾರ–8880659915). ಸೇಡಂ: ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಸೇಡಂ (ಖರೀದಿ ಕೇಂದ್ರದ ಅಧಿಕಾರಿ– ಚಂದ್ರಕಾಂತ ಬೆಣ್ಣಿಸಿರೂರು–9448133987).

ಬೆಂಬಲ ಬೆಲೆ ಯೋಜನೆಯಡಿ ಭತ್ತ–ಸಾಮಾನ್ಯ ಪ್ರತಿ ಕ್ವಿಂಟಲ್‌ಗೆ ದರ 2300 ರೂ. ಹಾಗೂ ಭತ್ತ–ಗ್ರೇಡ್–ಎ ಪ್ರತಿ ಕ್ವಿಂಟಲ್‌ಗೆ ದರ 2320 ರೂ. ಇರುತ್ತದೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೆರೆಯಲಾದ ಭತ್ತ ಖರೀದಿ ಕೇಂದ್ರಗಳ ವಿವರ ಕೆಳಕಂಡಂತೆ ಇರುತ್ತದೆ.

ಚಿತ್ತಾಪೂರ: ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಸನ್ನತಿ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಕಲ್ಲೂರ. ಸೇಡಂ: ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮುಧೋಳ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಾಡೇಪಲ್ಲಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮದನಾ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಕೊಲಕುಂದಾ. ಜೇವರ್ಗಿ: ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಬಳಬಟ್ಟಿ ಹಾಗೂ ಯಡ್ರಾಮಿ: ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮಳ್ಳಿ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರು ತಾವು ಬೆಳೆದ ಭತ್ತ ಮತ್ತು ಜೋಳವನ್ನು ಮಾರಾಟ ಮಾಡಲು ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ಕೃಷಿ ಇಲಾಖೆಯಿಂದ ನೀಡಲಾಗುವ ಫ್ರೂಟ್ಸ್ ಐಡಿ ಮತ್ತು ಆಧಾರ ಕಾರ್ಡಿನ ಪ್ರತಿಯನ್ನು ತೆಗೆದು–ಕೊಂಡು ಹೋಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ದಿನಾಂಕ: 29–03–2025ರಿಂದ ಜೋಳ ಖರೀದಿಗೆ ಸಂಬಂಧಿಸಿದಂತೆ ರೈತರ ನೊಂದಣಿ ಕಾರ್ಯ ಪ್ರಾರಂಭಿಸಲಾಗಿದೆ. ದಿನಾಂಕ: 01–04–2025 ರಿಂದ ದಿನಾಂಕ: 31–05–2025 ರವರೆಗೆ ನೊಂದಾಯಿತ ರೈತರಿಂದ ಜೋಳ ಖರೀದಿಸಲಾಗುತ್ತದೆ. ಅದೇ ರೀತಿಯಾಗಿ ದಿನಾಂಕ: 29–03–2025ರಿಂದ 25–04–2025ರ ವರೆಗೆ ಭತ್ತ ಖರೀದಿಗೆ ಸಂಬಂಧಿಸಿದಂತೆ ರೈತರ ನೋಂದಣಿ ಮಾಡಿಕೊಳ್ಳಲಾಗುತ್ತದೆ. ದಿನಾಂಕ: 01–04–2025 ರಿಂದ ದಿನಾಂಕ:31–05–2025 ರವರೆಗೆ ನೊಂದಾಯಿತ ರೈತರಿಂದ ಭತ್ತವನ್ನು ಖರೀದಿಸಲಾಗುತ್ತದೆ.

ಕಲಬುರಗಿ ಜಿಲ್ಲೆಯ ರೈತರು ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಕಚೇರಿಯ ಜಿಲ್ಲಾ ವ್ಯವಸ್ಥಾಪಕರನ್ನು ಹಾಗೂ ಕಚೇರಿಯ ದೂರವಾಣಿ ಸಂಖ್ಯೆ 08472–254984 ಹಾಗೂ ಮೊಬೈಲ್ ಸಂಖ್ಯೆ 9448496023 ಕರೆ ಮಾಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಶೇ.50ರ ರಿಯಾಯಿತಿ ದರದಲ್ಲಿ ಪುಸ್ತಕ ಮಾರಾಟ ಲಭ್ಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್.03– ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಪ್ರಯುಕ್ತ ಏಪ್ರಿಲ್ 30ರವರೆಗೆ ಶೇಕಡ 50ರ ರಿಯಾಯಿತಿಯ ದರದಲ್ಲಿ ಪುಸ್ತಕಗಳನ್ನು ಮಾರಾಟ ಲಭ್ಯವಿವೆ. ಆನ್‌ಲೈನ್ ಮೂಲಕವೂ ಶೇ.50ರ ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದೆ.

ಓದುಗರು ವೆಬ್‌ಸೈಟ್ ವಿಳಾಸ: www.kuvempubhashab-harathi,kamataka.gov.in ಭೇಟಿ ನೀಡಿ ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

# ಏ.5 ಜಗಜೀವನರಾಂ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.3–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 5 ರಂದು ನವನಗರದ ಸೆಕ್ಟರ್ ನಂ–22ರಲ್ಲಿರುವ ಡಾ॥ಬಾಬು ಜಗಜೀವನರಾಂ ಭವನದಲ್ಲಿ ಬೆಳಿಗ್ಗೆ 10 ಗಂಟೆಗೆ ಡಾ॥ಬಾಬು ಜಗಜೀವನರಾಂರವರ 118ನೇ ಜಯಂತಿ ಆಚರಿಸಲಾಗುವುದು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನವನಗರದ ಸೆಕ್ಟರ್ ನಂ.12ರಲ್ಲಿರುವ ಶ್ರೀ ದುರ್ಗಾದೇವಿ ದೇವಸ್ಥಾನದಿಂದ ಡಾ॥ಬಾಬು



ಜಗಜೀವನರಾಂ ಭಾವಚಿತ್ರ ಮೆರವಣಿಗೆ ಬೆಳಿಗ್ಗೆ 8–00 ಗಂಟೆಗೆ ಪ್ರಾರಂಭವಾಗಿ ಜಿಲ್ಲಾ ಆಸ್ಪತ್ರೆ, ಎಲ್.ಐ.ಸಿ. ಕಛೇರಿ ವೃತ್ತದ ಮುಖಾಂತರದ ಜಗಜೀವನರಾಂ ಭವನ ತಲುಪಲಿದೆ.

ಅಬಕಾರಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್.ಬಿ.ತಿಮ್ಮಾಪುರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಬಾಗಲಕೋಟೆ ಶಾಸಕ ಹೆಚ್ ವಾಯ್ ಮೇಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಶಿವಮೊಗ್ಗ ಕುವೆಂಪು ವಿಶ್ವವಿದ್ಯಾನಿಲಯದ ಕನ್ನಡ ಭಾರತಿ ವಿಭಾಗದ ಪ್ರಾಧ್ಯಾಪಕ ಡಾ. ಶಿವಾನಂದ ಕೆಳಗಿನಮನಿ ಅತಿಥಿ ಉಪನ್ಯಾಸಕರಾಗಿ ಆಗಮಿಸಲಿದ್ದು, ಜಿಲ್ಲೆಯ ಎಲ್ಲ ಶಾಸಕರು, ಸಂಸದರು ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

# ಶಿಕ್ಷಕ ವೃತ್ತಿ ಸಾರ್ವಕಾಲಿಕ: ಬಿಇಓ ಬಡದಾನಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.3–ಸಾರ್ವಕಾಲಿಕವಾಗಿ ಗೌರವಿಸಲ್ಪಡುವ ವೃತ್ತಿಯೆಂದರೆ ಅದು ಶಿಕ್ಷಕ ವೃತ್ತಿ. ಸೇವೆಯಲ್ಲಿದ್ದಾಗಲೂ ಶಿಕ್ಷಕ, ನಿವೃತ್ತಿಯಾದಗಲೂ ಶಿಕ್ಷಕ. ಅಷ್ಟೇ ಅಲ್ಲದೇ ಬದುಕಿನ ಪಯನ ಕಂಡಿದ್ದರೂ ಕೂಡ ಶಿಕ್ಷಕ ಎಂದು ಸ್ಮರಿಸುವ ವೃತ್ತಿ ಶಿಕ್ಷಕ ಕ್ಷೇತ್ರ ಶಿಕ್ಷಣಾಧಿಕಾರಿ ಎಮ್. ಎಸ್.ಬಡದಾನಿ ಹೇಳಿದರು.

ತಾಲೂಕಿನ ಮಲ್ಲಾಪೂರ (ಪು.ಕೇ) ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಎಚ್.ಎಸ್.ಪೂಜಾರಿ ಅವರ ಸೇವಾನಿವೃತ್ತಿಯ ಬೀಳ್ಕೊಡುವ ಸಮಾರಂಭದಲ್ಲಿ ಮಾತನಾಡಿದ ಅವರು, ಪೂಜಾರಿ ಅವರ ಸೇವೆ ಬೇರೆ ಶಿಕ್ಷಕರಿಗೆ ಮಾದರಿಯಾಗಿತ್ತು. ಅವರ ಕ್ರಿಯಾಶೀಲ ಕಲಿಕೆಯಿಂದ ಸಾಕಷ್ಟು ವಿದ್ಯಾರ್ಥಿಗಳು ಉದ್ಯೋಗ ಪಡೆದು ಭವಿಷ್ಯ ರೂಪಿಸಿಕೊಂಡಿದ್ದಾರೆ ಎಂದರು.

ಸುದೀರ್ಘ 24 ವರ್ಷಗಳ ಕಾಲ ಪಾಠ ಮಾಡುತ್ತ ಮಕ್ಕಳೊಂದಿಗೆ ಮಕ್ಕಳಾಗಿ ಬೆರೆಯುತ್ತಿದ್ದ ಪೂಜಾರಿ ಅವರಿಗೆ ನಿವೃತ್ತಿ ಜೀವನ ಬೇಸರವೆನಿಸಬಹುದು. ಹಾಗಾಗಿ ಅವರು ಈಗಲೂ ಶಾಲೆಗೆ ಬರುವುದಾದರೆ ಅವರಿಗೆ ಶಾಲಾ ಬಾಗಿಲು ಸದಾ ತೆರೆದಿರುತ್ತದೆ ಎಂದು ಬಡದಾನಿ ಹೇಳಿದರು.

ಶಾಲೆಯ ಮುಖ್ಯಗುರು ವಾಯ್.ಡಿ.ಕಿರಸೂರ, ಎಸ್.ಡಿ.ಎಂ.ಸಿ. ಅಧ್ಯಕ್ಷ ಗಣಪತಿ ಲಾಗಲೋಟಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕ ಬೀರಣ್ಣವರ, ಬಾಗಲಕೋಟ ತಾಲೂಕ ಶಿಕ್ಷಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರವಿ ಪದರಾ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಶಿಕ್ಷಕರು, ಸಹಶಿಕ್ಷಕರು, ಎಸ್.ಡಿ.ಎಂ.ಸಿ ಸದಸ್ಯರು ಹಾಗೂ ಗ್ರಾಮದ ಹಿರಿಯರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಸರ್ಕಾರಿ ವೀಕ್ಷಣಾಲಯ/ ಬಾಲಮಂದಿರಗಳಲ್ಲಿ ವಿವಿಧ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.03–ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಬರುವ ಸರ್ಕಾರಿ ವೀಕ್ಷಣಾಲಯ/ಬಾಲಮಂದಿರಗಳಲ್ಲಿ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಾಗಿ ಎಜ್ಯುಕೇಟರ್, ಆರ್ಟ ಆಂಡ್ ಕ್ರಾಫ್ಟ್ ಶಿಕ್ಷಕರು/ಸಂಗೀತ ಶಿಕ್ಷಕರು, ದೈಹಿಕ/ ಯೋಗಾ ಶಿಕ್ಷಕರ ಹುದ್ದೆಗಳನ್ನು ತಾತ್ಕಾಲಿಕವಾಗಿ (1 ವರ್ಷಕ್ಕೆ ಮಾತ್ರ ಅನ್ವಯವಾಗುವಂತೆ) ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

ಯೋಗಾ/ದೈಹಿಕ ಶಿಕ್ಷಕರು–03 ಹುದ್ದೆಗೆ, ಎಜುಕೇಟರ್–04 ಹುದ್ದೆಗೆ, ಗಣಿತ/ವಿಜ್ಞಾನ ಶಿಕ್ಷಕರು (ಮಹಿಳಾ ಅಭ್ಯರ್ಥಿ)–01 ಹುದ್ದೆಗೆ ಹಾಗೂ ಇಂಗ್ಲೀಷ ಶಿಕ್ಷಕರು (ಮಹಿಳಾ ಅಭ್ಯರ್ಥಿ)–01 ಹುದ್ದೆಗೆ ಬಿ.ಎಡ್. ಹಾಗೂ 2 ವರ್ಷಗಳ ಅನುಭವ ಹೊಂದಿರಬೇಕು. ಸಂಗೀತ/ ಕ್ರಾಫ್ಟ್/ ಆರ್ಟ ಶಿಕ್ಷಕರು–03 ಹುದ್ದೆಗೆ ಸಂಗೀತ/ವಾದ್ಯ ಹಾಗೂ ಕಲೆ ವಿಷಯದಲ್ಲಿ ಅಂಗೀಕೃತ ಸಂಸ್ಥೆಯಿಂದ ಸರ್ಟಿಫೈಡ್ ಕೋರ್ಸ ಪಾಸಾಗಿರಬೇಕು. ಮಿಷನ್ ವಾತ್ಸಲ್ಯ ಮಾರ್ಗಸೂಚಿಯನ್ವಯ ತಿಂಗಳಿಗೆ ನಿಗದಿಪಡಿಸಿದ 10,000 ರೂ. ಗಳ ಗೌರವಧನ ನೀಡಲಾಗುತ್ತದೆ. ಈ ಮೇಲ್ಕಂಡ ಹುದ್ದೆಗಳು ಯಾವುದೇ ಸಂದರ್ಭದಲ್ಲಿ ಖಾಯಂಗೊಳಿಸಲಾಗುವುದಿಲ್ಲ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಏಪ್ರಿಲ್ 29ರ ಸಂಜೆ 5.30 ಗಂಟೆಯೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರಿ ವೀಕ್ಷಣಾಲಯ ಕಟ್ಟಡ, 1ನೇ ಮಹಡಿ, ಚಂದ್ರಶೇಖರ ಪಾಟೀಲ ಕ್ರೀಡಾಂಗಣ ಎದುರುಗಡೆ, ಕಲಬುರಗಿ ಇವರ ವಿಳಾಸಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472–243219ಗೆ ಸಂಪರ್ಕಿಸಲು ಕೋರಲಾಗಿದೆ.

# ಜಿಲ್ಲಾ ವಿಜ್ಞಾನ ಕೇಂದ್ರದಿಂದ ಸಮಗ್ರ ಬೇಸಿಗೆ ವಿಜ್ಞಾನ ಶಿಬಿರ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.03–ಗುಲಬರ್ಗಾ ಜಿಲ್ಲಾ ವಿಜ್ಞಾನ ಕೇಂದ್ರದಿಂದ (4,5,6 ಹಾಗೂ 7ನೇ ತರಗತಿಯಲ್ಲಿ ಹಾಗೂ 8,9 ಹಾಗೂ 10ನೇ ತರಗತಿಗಳಿಗೆ ಹೋಗುವ ವಿದ್ಯಾರ್ಥಿಗಳಿಗೆ) ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಏಪ್ರಿಲ್ 14 ರಿಂದ ಮೇ 10ರವರೆಗೆ ಪ್ರತಿದಿನ ಬೆಳಿಗ್ಗೆ 10 ರಿಂದ ಸಂಜೆ 4.30 ರವರೆಗೆ ಸಮಗ್ರ ಬೇಸಿಗೆ ವಿಜ್ಞಾನ ಶಿಬಿರವನ್ನು ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ಜಿಲ್ಲಾ ವಿಜ್ಞಾನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


8,9 ಮತ್ತು 10 ನೇ ತರಗತಿಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಭೌತಶಾಸ್ತ್ರದ ಸಂತಸ, ಜೀವಶಾಸ್ತ್ರ, ಸೃಜನಾತ್ಮಕ ಗಣಿತದ ಕಾರ್ಯಾಗಾರ, ವರ್ಣರಂಜಿತ ರಸಾಯನಶಾಸ್ತ್ರ, ಎಲೆಕ್ಟ್ರಾನಿಕ್ಸ್ ಹಾಗೂ ರೊಬೊಟಿಕ್ಸ್ ಕೋರ್ಸ್‌ಗಳ ಶಿಬಿರವನ್ನು ಹಾಗೂ 4ನೇ, 5ನೇ, 6ನೇ ಮತ್ತು 7ನೇ ತರಗತಿಗಳಿಗೆ ಹೋಗುವ ವಿದ್ಯಾರ್ಥಿಗಳಿಗೆ ಸೃಜನಶೀಲತೆಯೊಂದಿಗೆ ವಿಜ್ಞಾನವನ್ನು ಅನ್ವೇಷಿಸುವುದು ಕೋರ್ಸ್‌ಗಳ ವಿಜ್ಞಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಶಿಬಿರದ ಶುಲ್ಕ 1000 ರೂ. ಇರುತ್ತದೆ. ಯಾವುದೇ ಮೂರು ಕೋರ್ಸ್‌ಗಳಿಗೆ ಒಟ್ಟಿಗೆ ಶುಲ್ಕ 2500 ರೂ. ಮಾತ್ರ ಪಾವತಿಸಬಹುದಾಗಿದೆ.

ಈ ಶಿಬಿರದಲ್ಲಿ ವಿದ್ಯಾರ್ಥಿಗಳಿಗೆ ಸಂವಾದಾತ್ಮಕ ಪ್ರಯೋಗಗಳೊಂದಿಗೆ ಪ್ರಾಯೋಗಿಕ ತರಬೇತಿಯನ್ನು ನೀಡಲಾಗುತ್ತದೆ. ವಿದ್ಯಾರ್ಥಿಗಳು ತಾವು ತಯಾರಿಸಿರಿಯುವ ಕೆಲವು ಮಾದರಿಗಳು / ಕಿಟ್‌ಗಳನ್ನು ತಮ್ಮೊಂದಿಗೆ ತೆಗೆದುಕೊಂಡು ಹೋಗಬಹುದು. ಪ್ರತಿ ಬ್ಯಾಚ್‌ನಲ್ಲಿ ಕೇವಲ 30 ವಿದ್ಯಾರ್ಥಿಗಳಿಗೆ ಮಾತ್ರ ನೋಂದಣಿ ಸೀಮಿತವಾಗಿದ್ದು, ಮೊದಲು ಬಂದವರ ಆದ್ಯತೆ ಮೇರೆಗೆ ಅವಕಾಶ ನೀಡಲಾಗುತ್ತದೆ. ಏಪ್ರಿಲ್ 4 ಏಪ್ರಿಲ್ ರಿಂದ ಶನಿವಾರ ಮತ್ತು ಭಾನುವಾರ ಸೇರಿದಂತೆ ಎಲ್ಲಾ ಕೆಲಸದ ದಿನಗಳಲ್ಲಿ ಬೆಳಿಗ್ಗೆ 10.30 ರಿಂದ ಸಂಜೆ 05 ಗಂಟೆಯವರೆಗೆ ಶುಲ್ಕವನ್ನು ಪಾವತಿಸಬೇಕು. ಶಿಬಿರವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದವರಿಗೆ ಪ್ರಮಾಣಪತ್ರಗಳನ್ನು ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08472–270608 ದೂರವಾಣಿ ಸಂಖ್ಯೆ ಅಥವಾ ಮೊಬೈಲ್ ಸಂಖ್ಯೆ 9788078048 /9447541616 ಮೊಬೈಲ್ ಸಂಖ್ಯೆಗೆ ಸಂಪರ್ಕಿಸಲು ಕೋರಲಾಗಿದೆ.

### ಗ್ಯಾರಂಟಿ ಯೋಜನೆ ಪ್ರಗತಿಯ ಕಿರುಹೊತ್ತಿಗೆ ಬಿಡುಗಡೆ

# ಜಿಲ್ಲೆಯ 4 ಲಕ್ಷ ಕುಟುಂಬಗಳಿಗೆ ಅನುಕೂಲ–ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.3–ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊರತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಬಾಗಲಕೋಟೆ ಜಿಲ್ಲಾ ಪ್ರಗತಿ ನೋಟದ ಕಿರುಹೊತ್ತಿಗೆಯನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಜಮಖಂಡಿಯ ನಿರೀಕ್ಷಣಾ ಮಂದಿದಲ್ಲಿ ಬುಧವಾರ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಯಾವುದೇ ಜಾತಿ–ಧರ್ಮದ ಬೇಧವಿಲ್ಲದೇ ಜಾರಿಗೆ ತರಲಾಗಿರುವ ಗ್ಯಾರಂಟಿ ಯೋಜನೆಗಳ ಲಾಭ ಯಾವುದೇ ಮಧ್ಯವರ್ತಿಗಳ ಹಾವಳಿಯಿಲ್ಲದೇ ನೇರವಾಗಿ ಫಲಾನುಭವಿಗಳಿಗೆ ತಲುಪುತ್ತಿದೆ. ಇದರಿಂದ ಜಿಲ್ಲೆಯ 4 ಲಕ್ಷ ಕುಟುಂಬಗಳಿಗೆ ವಾರ್ಷಿಕ 60 ಸಾವಿರ ರೂ.ಗಳವರೆಗೆ ಅನುಕೂಲವಾಗುತ್ತಿದೆ. ಗೃಹಲಕ್ಷ್ಮೀ ಹಾಗೂ ಶಕ್ತಿ ಯೋಜನೆಗಳು ಮಹಿಳೆಯರ ಆರ್ಥಿಕ ಸ್ವಾವಲಂಬನೆ, ಶಿಕ್ಷಣ, ಉದ್ಯೋಗ ಅವಕಾಶ ಹೆಚ್ಚಳಕ್ಕೆ ಪೂರಕವಾಗಿದ್ದು, ಅವರ ಆರ್ಥಿಕ, ಸಾಮಾಜಿಕ ಉನ್ನತಿಗೆ ಬುನಾದಿಯಾಗಿವೆ ಎಂದರು.

ಮಹಿಳಾ ಸಬಲೀಕರಣಕ್ಕೆ ಅರ್ಥತಂದ ಶಕ್ತಿಯೋಜನೆಯಡಿ ಜಿಲ್ಲೆಯಲ್ಲಿ ಪ್ರತಿ ದಿನ ಸಂಚರಿಸುವ ಒಟ್ಟು 3.4 ಲಕ್ಷ ಪ್ರಯಾಣಿಕರ ಪೈಕಿ 1.87 ಲಕ್ಷ ಮಹಿಳಾ ಇದರ ಪ್ರಯೋಜ ಪಡೆಯುತ್ತಿದ್ದಾರೆ. ಹಸಿದವರ ಹೊಟ್ಟೆ ತನಿಸುತ್ತಿರುವ ಅನ್ನಭಾಗ್ಯ ಯೋಜನೆಯಡಿ 2,99,293 ಪಡಿತರ ಚೀಟಿದಾರರು ಪ್ರಯೋಜನೆ ಪಡೆದರೆ, ಆರ್ಥಿಕ ಸಬಲತೆಯ ಜೊತೆಗೆ ಹರುಷ ತರುವ ಮೂಲಕ ಸಾರ್ಥಕತೆ ಪಡೆದುಕೊಂಡ ಗೃಹಲಕ್ಷ್ಮೀ ಯೋಜನೆಯಿಂದ 419360 ಮಹಿಳೆಯರು ಲಾಭ ಪಡೆಯುತ್ತಿದ್ದಾರೆ. ಅಲ್ಲದೇ ಯುವ ಸಮುದಾಯವನ್ನು ಮುಖ್ಯವಾಹಿನಿಗೆ ತರುವ ಮೂಲಕ ಅವರಿಗೆ ಉದ್ಯೋಗ ದೊರಕಿಸುವ ಯುವನಿಧಿ ಯೋಜನೆಯಡಿ 8084 ಪದವೀಧರರು, 105 ಡಿಪ್ಲೋಮಾ ಪದವೀಧರರು ಪ್ರಯೋಜನ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಸರ್ಕಾರ ಜಾರಿಗೊಳಿಸುವ ಯೋಜನೆಗಳು ನೇರವಾಗಿ ಫಲಾನುಭವಿಗೆ ತಲುಪುವಂತಾಗಬೇಕು ಎಂಬುದು ನಮ್ಮ ಆಶಯ. ಜನಸಾಮಾನ್ಯರಿಗೆ ಸರ್ಕಾರ ಜಾರಿಗೆ ತಂದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಮಾಹಿತಿಯುಳ್ಳ ಪುಸ್ತಕವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊರತಂದಿರುವುದು ಜನರ ಜೀವನ ಮಟ್ಟ ಸುಧಾರಿಸುವಲ್ಲಿ ಬೆಳಕು ಚೆಲ್ಲಲಿ ಎಂದು ಹಾರೈಸುವುದಾಗಿ ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಜಿಲ್ಲಾ ವಾರ್ತಾಧಿಕಾರಿ ಕಸ್ತೂರಿ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪಂಚ ಗ್ಯಾರಂಟಿಗಳು ಸಕಾಲಕ್ಕೆ ಮುಟ್ಟುತ್ತಿವೆ ಅಧ್ಯಕ್ಷ ಶ್ರೇಣಿಕಕುಮಾರ ಧೋಕಾ ಹೇಳಿಕೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ:3–ರಾಜ್ಯ ಸರ್ಕಾರದ ಮಹತ್ವದ ಐದು ಗ್ಯಾರಂಟಿಗಳು ಸಕಾಲಕ್ಕೆ ಜನರಿಗೆ ತಲುಪುತ್ತಿವೆ. ಸಂಬಂಧಪಟ್ಟ ಐದು ಇಲಾಖೆ ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆ ನೊಡೆಲ್ ಅಧಿಕಾರಿಗಳು ಉತ್ತಮ ರೀತಿಯಲ್ಲಿ ಕೆಲಸ ಮಾಡುತ್ತಿದ್ದಾರೆಂದು ಗ್ಯಾರಂಟಿ ಯೋಜನೆ ಜಿಲ್ಲಾ ಸಮಿತಿ ಅಧ್ಯಕ್ಷ ಶ್ರೇಣಿಕಕುಮಾರ ಧೋಕಾ ಹೇಳಿದ್ದಾರೆ.

ಗುರುವಾರ ಇಲ್ಲಿನ ಜಿಪಂ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನಿಷ್ಠಾನ ಸಮಿತಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಕ್ತಿ ಯೋಜನೆಯಡಿ ಕಳೆದ 2023 ಜೂನ್ ತಿಂಗಳಿಂದ ಪ್ರಸ್ತಕ ಸಾಲಿನ ಫೆ.16 ರವರೆಗೂ ಕೆಕೆಆರ್ ಟಿಸಿ ಯಾದಗಿರಿ ವಿಭಾಗದಿಂದ ಸಂಚರಿಸಿದ ಬಸ್ ಗಳಲ್ಲಿ ಒಟ್ಟು 4,30,54001 ಕೋಟಿ ಮಹಿಳೆಯರು ಪ್ರಯಾಣ ಮಾಡಲಾಗಿದ್ದು, ಇಲ್ಲಿಯವರೆಗೂ 145.04 ಕೋಟಿ ರೂ. ಆದಾಯವಾಗಿದೆ ಎಂದು ಧೋಖಾ ಹೇಳಿದ್ದಾರೆ.

ಅನ್ನಭಾಗ್ಯ ಯೋಜನೆಯಡಿ ಐದು ಕೆಜಿ ಆಹಾರಧ್ಯಾನದ ಜೊತೆಗೆ ಜಿಲ್ಲೆಯಲ್ಲಿರುವ ಎಎವೈ, ಬಿಪಿಎಲ್ ಪಡಿತರ ಕಾರ್ಡಿನ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ 5 ಕೆಜಿ ಅಕ್ಕಿಯ ಮೊತ್ತವನ್ನು ನಗದು ರೂಪದಲ್ಲಿ ಪಾವತಿಸಲಾಗುತ್ತಿದೆ. ಎಎವೈ, ಬಿಪಿಎಲ್ ಪಡಿತರ ಚೀಟಿಗಳ ಸಂಖ್ಯೆ 2,62,111 ಮತ್ತು ಫಲಾನುಭವಿಗಳ ಸಂಖ್ಯೆ 9,94,908 ಹೊಂದಿದ್ದು, ವಿವಿಧ ಕಾರಣದಿಂದ ಹಣ ವರ್ಗಾವಣೆ ಆಗದೆ ಬಾಕಿ ಇರುವ ಪಡಿತರ ಚೀಟಿಗಳ ಸಂಖ್ಯೆ 25460 ಇಷ್ಟು ಇದೆ ಎಂದ ಅವರು, 2024 ಅಕ್ಟೋಬರ್ ತಿಂಗಳಿಂದ ಇಲ್ಲಿಯವರೆಗೂ ಈ ಯೋಜನೆ ಫಲಾನುಭವಿಗಳಿಗೆ ಸಹಾಯಧನ ಬಂದಿಲ್ಲ ಎಂದು ಹೇಳಿದರು.

ಗೃಹ ಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ನೊಂದಣಿಯಾಗಿರುವ ಒಟ್ಟು 2,04,825 ಫಲಾನುಭವಿಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ ಎಂದರು. ಗೃಹಲಕ್ಷ್ಮೀ ಯೋಜನೆಯಡಿ ಕಳೆದ ಅಕ್ಟೋಬರ್ ತಿಂಗಳವರೆಗೂ 2,55,982 ಫಲಾನುಭವಿಗಳು ನೊಂದಣಿ ಮಾಡಿಸಿದ್ದು, ಈಗಾಗಲೇ 2,49,104 ಫಲಾನುಭವಿಗಳ ಖಾತೆಗೆ ಹಣ ವರ್ಗಾವಣೆ ಮಾಡಲಾಗಿದೆ ಎಂದು ಅಧ್ಯಕ್ಷ ಶ್ರೇಣಿಕಕುಮಾರ ಧೋಕಾ ತಿಳಿಸಿದರು.

ಅದರಂತೆಯೇ ಯುವನಿಧಿ ಯೋಜನೆಯಡಿ ಕಳೆದ 2024 ಡಿಸೆಂಬರ ದಿಂದ 2025 ಫೆ 18ರವರೆಗೆ 7378 ಫಲಾನುಭವಿಗಳು ನೊಂದಣಿ ಮಾಡಿದ್ದು, ಪದವಿ ಮುಗಿಸಿದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಸುವ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪ್ರಚಾರ ಮಾಡುತ್ತಿದ್ದಾರೆಂದು ಅವರು ಹೇಳಿದರು.

ಸಭೆಯಲ್ಲಿ ಸಮಿತಿ ಉಪಾಧ್ಯಕ್ಷರಾದ ಹಣಮಂತ ಕಾನಳ್ಳಿ, ರಮೇಶ ದೊರಿ, ಬಸವರಾಜ ಬಿಳ್ಹಾರ್, ಹಳ್ಳಪ್ಪ ಹವಲ್ದಾರ್, ನೊಡೆಲ್ ಅಧಿಕಾರಿ ವಿಜಯಕುಮಾರ ಸೇರಿದಂತೆ–ಯೇ ಈ ಐದು ಯೋಜನೆಗಳ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

## ಮೊಬೈಲ್ ಕ್ಯಾಂಟಿನ್ ನಡೆಸಲು ಸಹಾಯಧನ: ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.03–2024–25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ದಿಮೆದಾರರನ್ನು ಉತ್ತೇಜಿಸಲು ಉದ್ಯಮಶೀಲತೆ (Enterprenu-ership) ಕುರಿತು ಒಂದು ತಿಂಗಳ ತರಬೇತಿ ನೀಡಲು ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು 5 ಲಕ್ಷ ರೂ.ಗಳ ಸಹಾಯಧನಕ್ಕೆ ಸಂಬಂಧಿಸಿದಂತೆ 09 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಸಿದ್ದಪಡಿಸಿ ಕಲಬುರಗಿ ವಿಭಾಗದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಕಲಬುರಗಿ ವಿಭಾಗದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಈ ಅಭ್ಯರ್ಥಿಗಳ ಅರ್ಹತಾ ಪಟ್ಟಿಗೆ ಈಗಾಗಲೇ ದಿನಾಂಕ:25–03–2025 ರಿಂದ ದಿನಾಂಕ:02–04–2025 ವರೆಗೆ ಆಕ್ಷೇಪಣೆ ಆಹ್ವಾನಿಸಿ, ಈ ಸದರಿ ಕಚೇರಿಯಲ್ಲಿ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗದ ಹಿನ್ನೆಲೆಯಲ್ಲಿ ಅರ್ಹಗೊಂಡಿರುವ ಪರಿಶಿಷ್ಟ ಜಾತಿಯ 39 ಅಭ್ಯರ್ಥಿಗಳಲ್ಲಿ ಅಭ್ಯರ್ಥಿಯ ವಯಸ್ಸು ಹಾಗೂ ಎಸ್.ಎಸ್.ಎಲ್.ಸಿ.ಯಲ್ಲಿ ಪಡೆದ ಅಂಕದ ಶೇಕಡಾ ಎರಡರ ಆಧಾರದ ಮೇಲೆ ಕ್ರಮವಾಗಿ 60 ಮತ್ತು 40 ಆದ್ಯತೆಯನ್ನು ನೀಡಿ 09 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಸಿದ್ದಪಡಿಸಿ ಸದರಿ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಬೀದರ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಪಣ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಏ.3:ಬೀದರ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಪಣತೋಡೋಣ, ಸಾರ್ವಜನಿಕರು ಬಾಲ್ಯವಿವಾಹವೆಂಬ ಅನಿಷ್ಠ ಪದ್ಧತಿಯನ್ನು ನಿರ್ಮೂಲನೆ ಮಾಡಲು ಸಹಕಾರಿಯಾಗಿ ಮಕ್ಕಳಿಗೆ ಬಾಲ್ಯವನ್ನು ಸಂಪೂರ್ಣವಾಗಿ ಅನುಭವಿಸಲು ಅವಕಾಶ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

ಬಾಲ್ಯ ವಿವಾಹವು ಒಂದು ಅಭಿವೃದ್ಧಿಗೆ ಮಾರಕವಾಗಿರುವ ಸಮಸ್ಯೆಯಾಗಿದೆ. ಬಾಲ್ಯ ವಿವಾಹವನ್ನು ತಡೆಗಟ್ಟುವುದು ನಮ್ಮೆಲ್ಲರ ಕರ್ತವ್ಯ. ಬಾಲ್ಯ ವಿವಾಹವು ಕಾನೂನು ಪ್ರಕಾರ ಶಿಕ್ಷಾರ್ಹ ಅಪರಾಧ. ಜಿಲ್ಲೆಯಲ್ಲಿ ಬಾಲ್ಯವಿವಾಹ ನಡೆಯುತ್ತಿರುವುದು ಗಮನಕ್ಕೆ ಬಂದರೆ ಸಾರ್ವಜನಿಕರು ತುರ್ತಾಗಿ ಮಕ್ಕಳ ಸಹಾಯವಾಣಿ-1098,ಪೊಲೀಸಸಹಾಯವಾಣಿ-112, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ದೂರವಾಣಿ ಸಂಖ್ಯೆ: 08482-234003 ಗೆ ಕರೆ ಮಾಡಿ ಅವರ ಗಮನಕ್ಕೆ ತರಬೇಕೆಂದರು.

ಬಾಲ್ಯ ವಿವಾಹ ಕಾಯ್ದೆಯ ಕುರಿತು ಜನರಲ್ಲಿ ಜಾಗೃತಿ ಇಲ್ಲದಿರುವುದರಿಂದ ಅಧಿಕ ಸಂಖ್ಯೆಯಲ್ಲಿ ಬಾಲ್ಯ ವಿವಾಹಗಳು ಇಂದಿಗೂ ಜರುಗುತ್ತಿದೆ. ಈ ಬಾಲ್ಯವಿವಾಹ ಎಂಬ ಅನಿಷ್ಠ ಪದ್ಧತಿಯನ್ನು ತೊಲಗಿಸಲು ಅಭಿಯಾನ ಮಾಡಬೇಕಾಗಿರುತ್ತದೆ. ಆದ್ದರಿಂದ ಎಲ್ಲಾ ಸರಕಾರಿ/ಸರಕಾರೇತರ ಶಾಲೆಗಳಲ್ಲಿ ರಾಷ್ಟ್ರಗೀತೆಯ ನಂತರ ಬಾಲ್ಯ ವಿವಾಹದ ದುಷ್ಪ ??ರಿಣಾಮ ಮತ್ತು ಶಿಕ್ಷೆಯ ಬಗ್ಗೆ ಮಾಹಿತಿ ನೀಡುವುದರ ಜೊತೆಗೆ ಮಕ್ಕಳಿಗೆ ಬಾಲ್ಯ ವಿವಾಹ ಮಾಡುವುದಿಲ್ಲವೆಂದು ಪ್ರಮಾಣ ವಚನ ಬೋಧನೆಯನ್ನು ಕಡ್ಡಾಯವಾಗಿ ಮಾಡಿಸಬೇಕು. ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಬಾಲ್ಯವಿವಾಹಗಳನ್ನು ಜರುಗದಂತೆ ಮುನ್ನೆಚ್ಚರಿಕೆ ಕ್ರಮವಾಗಿಗ್ರಾಮಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಡಂಗುರುವನ್ನು ಸಾರಬೇಕು.



ಮದುವೆಯ ಆಮಂತ್ರಣ ಪತ್ರಿಕೆ ಮುದ್ರಿಸುವವರು ಮತ್ತು ಪೂಜಾರಿಗಳು, ಪೌರೋಹಿತ್ಯ ನಡೆಸುವವರು, ಮದುವೆಗಳನ್ನು ನೆರವೇರಿಸುವ ಮಠ, ಚರ್ಚ್ ಹಾಗೂ ಮಸೀದಿಗಳ ಧಾರ್ಮಿಕ ಮುಖಂಡರು, ಸಾಮೂಹಿಕ ವಿವಾಹದ ಆಯೋಜಕರು ಹಾಗೂ ಕಲ್ಯಾಣ ಮಂಟಪ, ಫಂಕ್ಷನ್ ಹಾಲ್‌ಗಳ ವ್ಯವಸ್ಥಾಪಕರುಗಳು ಇನ್ಮುಂದೆ ಕಡ್ಡಾಯವಾಗಿ ವಧು-ವರರ ವಯಸ್ಸಿನ ದೃಢೀಕರಣ ಪತ್ರವನ್ನು ಕುಟುಂಬದವರಿಂದ ಪಡೆದು ಹುಡುಗನಿಗೆ 21 ವರ್ಷ ಹಾಗೂ ಹುಡುಗಿಗೆ 18 ವರ್ಷ ಪೂರ್ಣವಾಗಿದೆ ಎಂದು ಖಾತ್ರಿ ಪಡಿಸಿಕೊಂಡ ನಂತರವಷ್ಟೇ ಮದುವೆ ಲಗ್ನ ಪತ್ರಿಕೆಯನ್ನು ಮುದ್ರಿಸಬೇಕು. ಹಾಗೂ ಮದುವೆ ಕಾರ್ಯ ನಡೆಸಲು ಒಪ್ಪಿಕೊಳ್ಳಬೇಕು. ವಧು ವರರ ವಯಸ್ಸಿನ ದೃಢೀಕರಣ ಪತ್ರಗಳಲ್ಲಿ ಜನನ ಪ್ರಮಾಣ ಪತ್ರ, ಶಾಲಾ ವಯಸ್ಸಿನ ದೃಢೀಕರಣ ಪತ್ರ ಎಸ್.ಎಸ್.ಎಲ್.ಸಿ ಅಂಕ ಪಟ್ಟಿ ಅಥವಾ ಸರಕಾರಿ ವೈದ್ಯರು ರೇಡಿಯೋಲಜಿ ಪರೀಕ್ಷೆ ನಡೆಸಿ, ನೀಡಿ ದೃಢೀಕರಿಸಿದ ವಯಸ್ಸಿನ ಪ್ರಮಾಣ ಪತ್ರ ಹೊಂದಿದವರು ಮಾತ್ರ ಮದುವೆಗೆ ಅರ್ಹರಾಗಿರುತ್ತಾರೆ. ಬೇರೆ ಯಾವುದೇ ವಯಸ್ಸಿನ ದೃಢೀಕರಣ ಪತ್ರಗಳು ಮದುವೆಗೆ ಅರ್ಹವಲ್ಲ ಎಂಬುದನ್ನು ಅರಿತು ಕುಟುಂಬದವರಿಂದ ಮೇಲೆ ತಿಳಿಸಿದ ನಿಗದಿತ ವಯಸ್ಸಿನ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ಪಡೆಯಬೇಕೆಂದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ-2006 ರ ಪ್ರಕಾರ 18 ವರ್ಷದೊಳಗಿನ ಯಾವುದೇ ಹೆಣ್ಣು ಮಗುವಿಗೆ ಹಾಗೂ 21 ವರ್ಷದೊಳಗಿನ ಯಾವುದೇ ಗಂಡು ಮಗುವಿಗೆ ಮದುವೆಯಾದಲ್ಲಿ ಅದನ್ನು "ಬಾಲ್ಯ ವಿವಾಹ" ಎಂದು ಪರಿಗಣಿಸಲಾಗಿದೆ. ಈ ಕಾಯ್ದೆಯ ಪ್ರಕಾರ ಬಾಲ್ಯ ವಿವಾಹ ಆದಲ್ಲಿ ಕೇವಲ ಮದುವೆಯಾಗುವ ವಯಸ್ಕನಿಗೆ ಹಾಗೂ ಹುಡುಗಿಯ ತಂದೆ ತಾಯಿಗಳಿಗಲ್ಲದೇ, ಪೂಜಾರಿಗಳು, ಸಂಬಂಧಿಕರು, ಪ್ರೇರೇಪಿಸಿದವರು, ಉತ್ತೇಜನ ನೀಡಿದವರು, ಬಾಲ್ಯ ವಿವಾಹ ತಡೆಯಲು ವಿಫಲರಾದವರು ಮತ್ತು ಭಾಗವಹಿಸಿದವರು ಎಲ್ಲರೂ ಅಪರಾಧಿಗಳೇ ಆಗುತ್ತಾರೆ. ಅವರ ಮೇಲೆ ಪ್ರಕರಣ ದಾಖಲಿಸಲು ಅವಕಾಶವಿರುತ್ತದೆ. ಬಾಲ್ಯ ವಿವಾಹ ನಿಷೇಧ(ಕರ್ನಾಟಕ ತಿದ್ದುಪಡಿ) ಅಧಿನಿಯಮ 2016ರ ಪ್ರಕಾರ ತಪ್ಪಿತಸ್ಥರಿಗೆ ಕನಿಷ್ಠ 1 ವರ್ಷದಿಂದ ಗರಿಷ್ಠ 2 ವರ್ಷಗಳವರೆಗೆ ಕಾರಾಗೃಹವಾಸ ಮತ್ತು ರೂ. 1.00 ಲಕ್ಷಗಳ ವರೆಗೆ ದಂಡ ಅಥವಾ ಎರಡನ್ನು ವಿಧಿಸಬಹುದಾಗಿದೆ ಎಂದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ, ಜಿಲ್ಲಾ, ತಾಲ್ಲೂಕಾ, ಗ್ರಾಮ ಪಂಚಾಯತಿ, ಗ್ರಾಮ/ನಗರಸಭೆ/ಪುರಸಭೆ ಮಟ್ಟದಲ್ಲಿ ಬಾಲ್ಯವಿವಾಹ ನಿಷೇಧಾಧಿಕಾರಿಗಳನ್ನು ನೇಮಿಸಲಾಗಿರುತ್ತದೆ. ಈ ಅಧಿಕಾರಿಗಳು ಬಾಲ್ಯ ವಿವಾಹ ತಡೆಗಟ್ಟಲು ಸಕ್ರಿಯವಾಗಿ ಕಾರ್ಯೋನ್ಮುಖರಾಗಬೇಕು. ಒಂದು ವೇಳೆ ಸದರಿ ಕಾರ್ಯದಲ್ಲಿ ಉದಾಸೀನತೆ ತೋರಿ ಬಾಲ್ಯವಿವಾಹ ತಡೆಯುವಲ್ಲಿ ವಿಫಲರಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ಹಿಡಕಲ್‌ದಿಂದ ಘಟಪ್ರಭಾ ನದಿಗೆ ನೀರು



ಮಲ್ಲಮ್ಮನುಡಿವಾರ್ತೆಬಾಗಲಕೋಟೆ,ಎ.3-ಘಟಪ್ರಭಾ ನದಿಗೆ ಹಿಡಕಲ್ ಜಲಾಶಯದಿಂದ 2 ಟಿಎಂಸಿ ನೀರು ಹರಿಬಿಡಲಾಗಿದ್ದು, ಬತ್ತಿ ಬರಿದಾಗಿದ್ದ ಘಟಪ್ರಭಾ ನದಿಗೆ ಜೀವಕಳೆ ಬಂದಂತಾಗಿದೆ.ಜನ, ಜಾನುವಾರಗಳಿಗೆ ಕುಡಿಯುವುದಕ್ಕೆ ಹಿಡಕಲ್ ಜಲಾಶಯದಿಂದ ಮಾ.27ರಂದು ಘಟಪ್ರಭಾ ನದಿಗೆ ಎರಡು ಟಿಎಂಸಿ ನೀರು ಹರಿಬಿಡಲಾಗಿತ್ತು. ಅದು ಈಗ ತಾಲೂಕಿನ ಕಲಾದಗಿ ಬಳಿಯ ಕಾತರಕಿ ಬ್ಯಾರೇಜಿಗೆ ಹರಿದು ಬಂದಿದ್ದು, ರೈತರಿಗೆ ಸಂತಸ ತಂದಿದೆ. ಘಟಪ್ರಭಾ ನದಿಗೆ ನೀರು ಹರಿಸಿದ್ದರಿಂದ ಆನದಿನ್ನಿ ಬ್ಯಾರೇಜ್‌ಗೂ ನೀರು ತಲುಪಲಿದೆ.

ಬತ್ತಿ ಬರಿದಾಗಿದ್ದ ಘಟಪ್ರಭಾ ನದಿಗೆ ನೀರು ಬಂದಿರುವುದು ಜನ, ಜಾನುವಾರು, ಹಕ್ಕಿ ಪಕ್ಷಿಗಳಿಗೆ ಅನುಕೂಲವಾಗಿದೆ ಎನ್ನುತ್ತಾರೆ ರೈತ ಅಮಿತ ಗೌಡರ. ಘಟಪ್ರಭಾ ನದಿಗೆ ನೀರು ಹರಿಸಲು ಕ್ರಮವಹಿಸಿದ ಶಾಸಕ ಜೆ. ಟಿ.ಪಾಟೀಲರಿಗೆ ರೈತರು ಅಭಿನಂದನೆ ಸಲ್ಲಿಸಿದ್ದಾರೆ.

## ಗೃಹಲಕ್ಷ್ಮಿ ಯೋಜನೆಯಿಂದ ಸಂತೃಪ್ತಗೊಂಡ ನಾರಿಯರು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏ.3 :ರಾಜ್ಯದ ಮಹಿಳೆಯರ ಸಬಲೀಕರಣಕ್ಕಾಗಿ ಕರ್ನಾಟಕ ರಾಜ್ಯ ಸರ್ಕಾರವು ಗೃಹಲಕ್ಷ್ಮಿ ಯೋಜನೆಯನ್ನು ರೂಪಿಸಿದೆ. ಸರ್ಕಾರದ ಗ್ಯಾರಂಟಿ ಯೋಜನೆಗಳ ಪೈಕಿ ಗೃಹಲಕ್ಷ್ಮಿ ಯೋಜನೆಯು ಅತ್ಯಂತ ಮಹತ್ವಕಾಂಕ್ಷಿ ಯೋಜನೆಯಾಗಿದೆ.

ಮಹಿಳೆಯರ ಆರ್ಥಿಕ ಸಬಲೀಕರಣದ ದೃಷ್ಟಿಯಿಂದ ಈ ಯೋಜನೆಯನ್ನು ಜಾರಿಗೆ ತರಲಾಗಿದೆ. ಕುಟುಂಬದ ನಿರ್ವಹಣೆಯಲ್ಲಿ ಯಜಮಾನಿಯ ಪಾತ್ರ ಬಹುದೊಡ್ಡದು. ಆದ್ದ-ರಿಂದ ಮನೆಯ ನಿರ್ವಹಣೆಗೆ ಅನುಕೂಲವಾಗಲೆಂದು ಸರ್ಕಾರವು ಕುಟುಂಬದ ಯಜಮಾನಿಯ ಖಾತೆಗೆ ಪ್ರತಿ ತಿಂಗಳು ರೂ.2,000 ಜಮಾ ಮಾಡಲು ಯೋಜನೆ ಅನುಷ್ಠಾನ ಮಾಡಿದೆ.

ನೋಂದಣಿಯಾದ ಅರ್ಹ ಫಲಾನುಭವಿಯ ಖಾತೆಗೆ ರೂ.2000 ಗಳನ್ನು ಡಿ.ಬಿ.ಟಿ ಮೂಲಕ ಪ್ರತಿ ತಿಂಗಳು ವರ್ಗಾವಣೆ ಮಾಡುವ ಪ್ರಕ್ರಿಯೆಯನ್ನು ಚಾಲನೆಗೊಳಿಸಲಾಗಿದ್ದು, ನೋಂದಣಿ ಪ್ರಕ್ರಿಯೆಗೆ ಕೊನೆಯ ದಿನಾಂಕವಿರುವುದಿಲ್ಲ.

ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯರು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ.

ಈ ಯೋಜನೆಗೆ ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಸೇವಾಸಿಂಧು ಪೋರ್ಟಲ್ ಮೂಲಕ ಉಚಿತವಾಗಿ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. 2023-2024ನೇ ಗೃಹಲಕ್ಷ್ಮೀ ಯೋಜನೆಯಡಿ ರೂ. 17000 ಕೋಟಿ ಅನುದಾನ ಬಿಡುಗಡೆಗೊಳಿಸಲಾಗಿದ್ದು, ಪೂರ್ತಿ ವೆಚ್ಚ ಭರಿಸಲಾಗಿದೆ.

2024-25ನೇ ಸಾಲಿನಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಒಟ್ಟು ರೂ.28608.40 ಕೋಟಿಗಳ ಅನುದಾನ ನಿಗದಿಪಡಿಸಲಾಗಿದೆ.

ಅಕ್ಟೋಬರ್ 2024ರ ಅಂತ್ಯಕ್ಕೆ 1,26,24,547 ಫಲಾನುಭವಿಗಳು ಯಶಸ್ವಿಯಾಗಿ ನೋಂದಣಿ ಮಾಡಿಕೊಂಡಿರುತ್ತಾರೆ. ಈ ಪೈಕಿ ಇತರೆ 94,47,575 ಫಲಾನುಭವಿಗಳು, ಪರಿಶಿಷ್ಟ ಜಾತಿಯ 22,84,807 ಫಲಾನುಭವಿಗಳು ಹಾಗೂ ಪರಿಶಿಷ್ಟ ಪಂಗಡದ 8,92,165 ಫಲಾನುಭವಿಗಳು ನೋಂದಣಿ ಮಾಡಿಕೊಂಡಿರುತ್ತಾರೆ.

ಗೃಹಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಲಿಂಗತ್ವ ಅಲ್ಪ ಸಂಖ್ಯಾತರಿಗೂ ಸಹ ವಿಸ್ತರಿಸಿ ಆಗಸ್ಟ್ 2024 ರ ಮಾಹೆಯಲ್ಲಿ 1,307, ಸೆಪ್ಟಂಬರ್ 2024ರ ಮಾಹೆಯಲ್ಲಿ 1,610 ಹಾಗೂ ಅಕ್ಟೋಬರ್ 2024ರ ಮಾಹೆಯಲ್ಲಿ 1719 ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಮೂರು ತಿಂಗಳ ಧನಸಹಾಯ ಪಾವತಿಗಾಗಿ ಕ್ರಮಕೈಗೊಳ್ಳಲಾಗಿದೆ.

ಗದಗ ಜಿಲ್ಲೆಯ ಗಜೇಂದ್ರಗಢ ಪಟ್ಟಣದ ಮಾಲಾಧಾರ ಓಣಿಯ ನಿವಾಸಿಯಾಗಿರುವ ಅತ್ತೆ ಶ್ರೀಮತಿ ಮಾಬುಬೀ ಮಾಲಧಾರ್, ಸೊಸೆ ಶ್ರೀಮತಿ ರೋಷನ್ ಬೇಗಂ ಮಾಲಧಾರ್ ಸೇರಿಕೊಂಡು ಗೃಹಲಕ್ಷ್ಮಿ ಯೋಜನೆಯಡಿ ಪ್ರತಿ ತಿಂಗಳು ಬರುವ ಹಣವನ್ನು ಕೂಡಿಟ್ಟು ತಮ್ಮ ಜಮೀನಿನಲ್ಲಿ ಬೋ???ವೆಲ್ ಕೊರೆಸಿರುತ್ತಾರೆ.

ಬೆಳಗಾವಿ ತಾಲ್ಲೂಕಿನ ಕುಕಡೊಳ್ಳಿಯಲ್ಲಿ ಶ್ರೀಮತಿ ತಾಯವ್ವ, ಲಕಮೋಜಿ ಎಂಬ ಮಹಿಳೆಯು ಗೃಹಲಕ್ಷ್ಮಿ ಯೋಜನೆಯ ಧನಸಹಾಯದಿಂದ ಬಂದ 11 ಕಂತು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಪಡೆದ ಸಾಲ ಸೇರಿದಂತೆ ರೂ.45,000/- ಹಣದಲ್ಲಿ ಅವರು ಖಾರ ಕುಟ್ಟುವ ಯಂತ್ರ ಖರೀದಿಸಿ ಸ್ವಾವಲಂಬಿ ಬದುಕಿಗೆ ನಾಂದಿ ಹಾಡಿರುತ್ತಾರೆ.

ಹಾವೇರಿ ಜಿಲ್ಲೆಯ ಶಿಗ್ಗಾಂವಿ ತಾಲ್ಲೂಕಿನ ನೀರಲಗಿ ಗ್ರಾಮದ ಶ್ರೀಮತಿ ದಾಕ್ಷಾಯಿಣಿ ಪಾಟೀಲರವರು ಗೃಹಲಕ್ಷ್ಮಿ ಯೋಜನೆಯಡಿ 10 ಕಂತಿನಲ್ಲಿ ಬಂದಿದ್ದ ರೂ.20,000 ಧನಸಹಾಯವನ್ನು ಬ್ಯಾಂಕ್ ಖಾತೆಯಲ್ಲಿ ಕೂಡಿಟ್ಟು, ಸ್ವಂತ ಉದ್ಯೋಗ ಆರಂಭಿಸಲು ಯೋಚಿಸಿದ್ದ ಸೊಸೆಗೆ ವ್ಯಾಪಾರ ಮಾಡಲು ಮನೆಯಲ್ಲಿಯೇ ಸ್ನೇಹಾ ಜನರಲ್ ಬ್ಯಾಂಗಲ್ ಸ್ಟೋರ್ಸ್ ಮಳಿಗೆ ತೆರೆದಿದ್ದಾರೆ.ಗೃಹಲಕ್ಷ್ಮಿ ಯೋಜನೆಯ ಧನಸಹಾಯವನ್ನು ವಿವಿಧ ಚಟುವಟಿಕೆಗಳಿಗೆ ಬಳಸಿಕೊಳ್ಳುವ ಮೂಲಕ ಮಹಿಳೆಯರು ಸ್ವಾವಲಂಭಿಗಳಾಗಿ ವಿವಿಧ ಆದಾಯ ಬರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

## ಯುವತಿಯ ಅಪಹರಿಸಿ ಸಾಮೂಹಿಕ ಅತ್ಯಾಚಾರ:ಇಬ್ಬರ ಬಂಧನ


ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.3:ರಾಜ್ಯರಾಜಧಾನಿ ಬೆಂಗಳೂರಿನಲ್ಲಿ ಮತ್ತೊಂದು ಅತ್ಯಾಚಾರ ನಡೆದಿದೆ. ಬುಧವಾರ ಮಧ್ಯರಾತ್ರಿ ಕೆಆರ್ ಪುರಂ ರೈಲ್ವೆ ಸ್ಟೇಷನ್‌ನಿಂದ ಅಣ್ಣನೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದ ಬಿಹಾರದ ಯುವತಿಯನ್ನು ಅಪಹರಿಸಿದ ದುಷ್ಕರ್ಮಿಗಳು ಅತ್ಯಾಚಾರ ಎಸಗಿದ್ದಾರೆ.ಯುವತಿಯ ಅಣ್ಣನ ಮೇಲೂ ಹಲ್ಲೆ ನಡೆದಿದೆ. ಘಟನೆ ಸಂಬಂಧ ಮಹದೇವಪುರ ಪೊಲೀಸರು ಇಬ್ಬರನ್ನು ಬಂಧಿಸಿದ್ದಾರೆ. ಪೊಲೀಸ್ ಮೂಲಗಳ ಪ್ರಕಾರ, ಬಿಹಾರ ಮೂಲದ ಯುವತಿ ಕೇರಳದ ಎರ್ನಾಕುಲಂನಿಂದ ಬೆಂಗಳೂರಿನ ಕೆ.ಆರ್.ಪುರಂ ರೈಲ್ವೆ ನಿಲ್ದಾಣಕ್ಕೆ ಬಂದಿದ್ದಳು. ಇದಕ್ಕೂ ಮುನ್ನ, ತನ್ನ ದೊಡ್ಡಮ್ಮನ ಮಗನಿಗೆ ಕರೆ ಮಾಡಿ, ಬೆಂಗಳೂರಿಗೆ ಬರುತ್ತಿದ್ದೇನೆ ಎಂದು ಮಾಹಿತಿ ನೀಡಿದ್ದಳು.

ಅಣ್ಣನ ಸೂಚನೆಯಂತೆ ಕೆ.ಆರ್.ಪುರಂ ರೈಲ್ವೆ ನಿಲ್ದಾಣದಲ್ಲಿ ಇಳಿದಿದ್ದಳು. ಬಳಿಕ, ಊಟಕ್ಕಾಗಿ ಮಹದೇವಪುರ ಕಡೆಗೆ ತನ್ನ ಅಣ್ಣನೊಂದಿಗೆ ತೆರಳುತ್ತಿದ್ದಾಗ ಇಬ್ಬರು ಅಪರಿಚಿತರು ಬೈಕ್ ಅಡ್ಡಗಟ್ಟಿದ್ದಾರೆ. ಅಪರಿಚಿತರು ಯುವತಿಯ ಅಣ್ಣನ ಮೇಲೆ ಹಲ್ಲೆ ನಡೆಸಿ, ಯುವತಿಯನ್ನು ಅಪಹರಿಸಿದ್ದಾರೆ. ನಂತರ ಆಕೆಯನ್ನು ನಿರ್ಜನ ಪ್ರದೇಶಕ್ಕೆ ಎಳೆದುಕೊಂಡು ಹೋಗಿ ಅತ್ಯಾಚಾರ ಎಸಗಿದ್ದಾರೆ.

ದುಷ್ಕೃತ್ಯದ ವೇಳೆ ಯುವತಿಯ ಕಿರುಚಾಟ ಕೇಳಿದ ಸ್ಥಳೀಯರು ಕೂಡಲೇ ಸ್ಥಳಕ್ಕೆ ಧಾವಿಸಿದ್ದು, ಒಬ್ಬ ಆರೋಪಿಯನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಮಹದೇವಪುರ ಪೊಲೀಸರು ಘಟನೆ ಸಂಬಂಧ ದೂರು ದಾಖಲಿಸಿಕೊಂಡಿದ್ದು, ಆಶಿಫ್ ಎಂಬಾತ ಸೇರಿದಂತೆ ಇಬ್ಬರನ್ನು ಬಂಧಿಸಿದ್ದಾರೆ. ಘಟನೆ ಸಂಬಂಧ ಮಹದೇವಪುರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

## ರೈಲ್ವೆಯಲ್ಲಿ 209 ಮೆಗಾವ್ಯಾಟ್ ಸೌರ ಸ್ಥಾವರ ಸ್ಥಾಪನೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.3: ಭಾರತೀಯ ರೈಲ್ವೆ ಕಳೆದೊಂದು ದಶಕದಿಂದ ಸೌರ ಶಕ್ತಿ ಉತ್ಪಾದನೆ ಮತ್ತು ಬಳಕೆಗೆ ಪ್ರಾಧಾನ್ಯತೆ ನೀಡುತ್ತಿದ್ದು, ದೇಶಾದ್ಯಂತ ಈವರೆಗೆ 2,249 ರೈಲು ನಿಲ್ದಾಣಗಳು ಮತ್ತು ಸೇವಾ ಕಟ್ಟಡಗಳಲ್ಲಿ 209 ಮೆಗಾವ್ಯಾಟ್ ಸೌರ ಸ್ಥಾವರಗಳನ್ನು ಸ್ಥಾಪಿಸಿದೆ.

ಕಳೆದ ಹತ್ತು ವರ್ಷಗಳ ಹಿಂದೆ ಕೇವಲ 628 ಸೌರ ಘಟಕಗಳನ್ನು ಹೊಂದಿದ್ದ ಭಾರತೀಯ ರೈಲ್ವೆ ಇತ್ತೀಚಿನ ಐದು ವರ್ಷಗಳಲ್ಲಿ ಅದರ ಮೂರುಪಟ್ಟು ಸೌರ ಘಟಕಗಳನ್ನು ಸ್ಥಾಪಿಸಿ ಸೌರಶಕ್ತಿ ಬಳಕೆಯಲ್ಲಿ ಮುನ್ನಡೆಯಲ್ಲಿದೆ. ಕರ್ನಾಟಕ ಸೇರಿದಂತೆ ರಾಜಸ್ಥಾನ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಉತ್ತರಪ್ರದೇಶ, ಆಂಧ್ರಪ್ರದೇಶ, ಮಧ್ಯಪ್ರದೇಶ, ಒಡಿಶಾ, ಗುಜರಾತ್ ರಾಜ್ಯಗಳಲ್ಲಿನ ಅತಿ ಹೆಚ್ಚು ರೈಲ್ವೆ ನಿಲ್ದಾಣಗಳು ಸೌರ ಸ್ಥಾವರ ಅವಳಡಿಕೆಯಲ್ಲಿ ಮುಂದಿವೆ.

ನವೀಕರಿಸಬಹುದಾದ ಇಂಧನ ಉತ್ಪಾದನೆ, ಪರಿಸರ ಸುಸ್ಥಿರತೆ ಮತ್ತು ದೀರ್ಘಾವಧಿ ಆರ್ಥಿಕ ಉಳಿತಾಯವನ್ನು ಸಾಧಿಸಲು ಸರ್ಕಾರದ ನೀತಿಗಳಿಗೆ ಅನುಗುಣವಾಗಿ ಸೌರ ಶಕ್ತಿಯನ್ನು ಉತ್ತೇಜಿಸಲು ಭಾರತೀಯ ರೈಲ್ವೆ ಸರ್ವ ಪ್ರಯತ್ನಗಳನ್ನು ಮಾಡುತ್ತಿದೆ. ನವೀಕರಿಸಬಹುದಾದ ಇಂಧನಕ್ಕೆ ಪರಿವರ್ತನೆ ನಿರಂತರ ಪ್ರಕ್ರಿಯೆಯಾಗಿದೆ.

ಕಳೆದ ಐದು ವರ್ಷಗಳಲ್ಲಿ ದೇಶಾದ್ಯಂತ 1,489 ರೈಲ್ವೆ ನಿಲ್ದಾಣಗಳಲ್ಲಿ ಸೌರ ಘಟಕಗಳನ್ನು ವಿಸ್ತರಿಸಲಾಗಿದೆ. ರಾಜಸ್ಥಾನವು ದೇಶದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗಿಂತ ಅತಿ ಹೆಚ್ಚು ಅಂದರೆ 275 ಸೌರ ಘಟಕಗಳ ಸ್ಥಾಪನೆಯೊಂದಿಗೆ ಮುಂಚೂಣಿಯಲಿದೆ.ನವೀಕರಿಸಬಹುದಾದ ಇಂಧನದತ್ತ ಯೋಜನೆ: ಭಾರತೀಯ ರೈಲ್ವೆ ಹಂತಹಂತವಾಗಿ ನವೀಕರಿಸಬಹುದಾದ ಇಂಧನ ಬಳಕೆಗೆ ಯೋಜಿಸಿದೆ. ಅದರಂತೆ ಸೌರ ಮತ್ತು ಪವನ ವಿದ್ಯುತ್ ಇತ್ಯಾದಿ ಒಳಗೊಂಡಿರುವ ನವೀಕರಿಸಬಹುದಾದ ವಿದ್ಯುತ್‌ಗೆ ಪರಿಹಾರವಾದ ರೌಂಡ್ ದಿ ಕ್ಲಾಕ್ ವಿದ್ಯುತ್‌ಗಾಗಿ ಖರೀದಿ ವಿಧಾನ ಅನುಸರಿಸುತ್ತಿದೆ. ಹಂತಹಂತವಾಗಿ ನವೀಕರಿಸಬಹುದಾದ ಇಂಧನ ಸಂಗ್ರಹಿಸಲು ಯೋಜಿಸಿದೆ. ಅಲ್ಲದೇ, ರೈಲ್ವೆ ನಿಲ್ದಾಣಗಳಲ್ಲಿ ಸೌರ ಸ್ಥಾವರಗಳ ಸ್ಥಾಪನೆಗೆ ಕ್ರಮ ಕೈಗೊಂಡಿದೆ. ರೈಲ್ವೆಯು ಡೆವಲಪರ್ ಮೋಡ್ ಅಡಿಯಲ್ಲಿ ವಿದ್ಯುತ್ ಖರೀದಿ ಒಪ್ಪಂದ ಸಹ ಮಾಡಿಕೊಳ್ಳುತ್ತಿದೆ.

ದೇಶಾದ್ಯಂತ ಈವರೆಗೆ ಒಟ್ಟು 2249 ರೈಲು ನಿಲ್ದಾಣಗಳು ಮತ್ತು ಸೇವಾ ಕಟ್ಟಡಗಳಲ್ಲಿ ಸುಮಾರು 209 ಮೆಗಾವ್ಯಾಟ್ ಸೌರ ಸ್ಥಾವರಗಳನ್ನು ಒದಗಿಸಲಾಗಿದೆ ಎಂದು ಕೇಂದ್ರ ರೈಲ್ವೆ, ಮಾಹಿತಿ ಮತ್ತು ಪ್ರಸಾರ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವರಾದ ಅಶ್ವಿನಿ ವೈಷ್ಣವ್ ಸಂಸತ್ ಅಧಿವೇಶನದಲ್ಲಿ ನಡೆದ ಚರ್ಚೆ ವೇಳೆ ಈ ಬಗ್ಗೆ ಲಿಖಿತ ಮಾಹಿತಿ ನೀಡಿದ್ದಾರೆ.

ರಾಜ್ಯವಾರು ವಿವರ: ರಾಜಸ್ಥಾನ 275, ಮಹಾರಾಷ್ಟ್ರ 270, ಪಶ್ಚಿಮ ಬಂಗಾಳ 237, ಉತ್ತರ ಪ್ರದೇಶ 204, ಆಂಧ್ರಪ್ರದೇಶ 198, ಕರ್ನಾಟಕ 146, ಮಧ್ಯಪ್ರದೇಶ 134, ಒಡಿಶಾ 133, ಗುಜರಾತ್ 112, ತೆಲಂಗಾಣ 95, ಬಿಹಾರ 81, ಅಸ್ಸಾಂ 78, ತಮಿಳುನಾಡು 73, ಜಾರ್ಖಂಡ್ 47, ಹರಿಯಾಣ 36, ಪಂಜಾಬ್ 30, ಉತ್ತರಾಖಂಡ 18, ಹಿಮಾಚಲ ಪ್ರದೇಶ 17, ತ್ರಿಪುರ 16, ಛತ್ತೀಸ್‌ಗಢ 16, ಕೇರಳ 13, ದೆಹಲಿ 8, ಜಮ್ಮುಕಾಶ್ಮೀರ 6, ನಾಗಾಲ್ಯಾಂಡ್ 2, ಮೇಘಾಲಯ 1, ಮಣಿಪುರ 1, ಚಂಡೀಗಢ 1 ಮತ್ತು ಪುದುಚೇರಿಯ 1 ಸೇರಿದಂತೆ ದೇಶದಲ್ಲಿ ಒಟ್ಟು 2249 ರೈಲು ನಿಲ್ದಾಣಗಳಲ್ಲಿ ಸೌರ ಸ್ಥಾವರ ಕಲ್ಪಿಸಲಾಗಿದೆ ಎಂದು ವಿವರಿಸಿದ್ದಾರೆ.

## 25 ಸಾವಿರ ಶಿಕ್ಷಕರನ್ನು ವಜಾಗೊಳಿಸಿದ ಸುಪ್ರೀಂ: ದೀದಿ ಸರ್ಕಾರಕ್ಕೆ ಮುಖಭಂಗ

ಮಲ್ಲಮ್ಮ ನುಡಿ ವಾರ್ತೆ

ಕೋಲ್ಕತ್ತಾ:ಏ.3: ಪಶ್ಚಿಮ ಬಂಗಾಳದಲ್ಲಿ ಅಕ್ರಮವಾಗಿ ನೇಮಕ ಮಾಡಲಾಗಿದ್ದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 25,753 ಶಿಕ್ಷಕರು ಮತ್ತು ಬೋಧಕೇತರ ಸಿಬ್ಬಂದಿಯನ್ನು ಅಮಾನ್ಯಗೊಳಿಸಿದ್ದ ಕೋಲ್ಕತ್ತಾ ಹೈಕೋರ್ಟ್ ತೀರ್ಪನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ.



ಮುಖ್ಯನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ಸಂಜಯ್ ಕುಮಾರ್ ನೇತೃತ್ವದ ಪೀಠವು, ನೇಮಕಾತಿ ಪ್ರಕ್ರಿಯೆಯು ಗಂಭೀರ ಅಕ್ರಮಗಳಿಂದ ಕೂಡಿದೆ. ಅಭ್ಯರ್ಥಿಗಳನ್ನು ಹುದ್ದೆಯಲ್ಲಿ ಉಳಿಸಿಕೊಳ್ಳಲು ಸಾಧ್ಯವಿಲ್ಲ. ಇಡೀ ಆಯ್ಕೆ ಪ್ರಕ್ರಿಯೆಯೇ ಕಳಂಕಿತವಾಗಿದ್ದು, ನೇಮಕಾತಿ ಅಮಾನ್ಯಗೊಳಿಸಲಾಗಿದೆ ಎಂದು ಹೇಳಿದೆ.

ಏಪ್ರಿಲ್ 2024ರಲ್ಲಿ ವಿವಿಧ ಶಾಲೆಗಳ 25,000 ಕ್ಕೂ ಹೆಚ್ಚು ಸಿಬ್ಬಂದಿ ನೇಮಕಾತಿಯನ್ನು ಹೈಕೋರ್ಟ್ ರದ್ದುಗೊಳಿಸಿತ್ತು. ಇನ್ನೂ ಅಭ್ಯರ್ಥಿಗಳು ಪರಿಹಾರವಾಗಿ, ಈಗಾಗಲೇ ಪಡೆದ ಯಾವುದೇ ಸಂಬಳ ಅಥವಾ ಪ್ರಯೋಜನಗಳನ್ನು ಮರುಪಾವತಿಸಬೇಕಾಗಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿತ್ತು.

ಏನಿದು ಪ್ರಕರಣ?

ಈ ಅಕ್ರಮ ಪಶ್ಚಿಮ ಬಂಗಾಳ ಶಾಲಾ ಸೇವಾ ಆಯೋಗ (ಎಸ್‌ಎಸ್‌ಸಿ) 2016 ರಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಶಿಕ್ಷಕರು ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕಾತಿಗೆ ಸಂಬಂಧಿಸಿದೆ. ಒಟ್ಟು 24,640 ಖಾಲಿ ಹುದ್ದೆಗಳಿಗೆ ಒಟ್ಟು 23 ಲಕ್ಷ ಅಭ್ಯರ್ಥಿಗಳು ಅರ್ಜಿ ಹಾಕಿ ಪರೀಕ್ಷೆ ಬರೆದಿದ್ದರು. ಇದರ ಹೊರತಾಗಿಯೂ, 25,753 ನೇಮಕಾತಿ ಪತ್ರಗಳನ್ನು ನೀಡಲಾಗಿತ್ತು. ನೇಮಕಾತಿ ಪ್ರಕ್ರಿಯೆಯಲ್ಲಿನ ಅಕ್ರಮಗಳು, ಒಎಂಆರ್ ಶೀಟ್‌ಗಳನ್ನು ತಿರುಚುವುದು ಮತ್ತು ರ್ಯಾಂಕ್-ಜಂಪಿಂಗ್ ವಿಚಾರಣೆ ವೇಳೆ ಬಯಲಾಗಿತ್ತು. ಇದು ನೇಮಕಾತಿ ರದ್ದಿಗೆ ಕಾರಣವಾಗಿತ್ತು.

ಪಶ್ಚಿಮ ಬಂಗಾಳ ಸರ್ಕಾರ ಸೇರಿದಂತೆ ಹಲವಾರು ಪಕ್ಷಗಳು ಹೈಕೋರ್ಟ್‌ನ ತೀರ್ಪನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಅರ್ಜಿಗಳನ್ನು ಸಲ್ಲಿಸಿದ್ದವು. ಡಿಸೆಂಬರ್ 19, 2024 ರಂದು, ಸುಪ್ರೀಂ ಕೋರ್ಟ್ ಈ ವಿಷಯದ ಕುರಿತು ವಿಚಾರಣೆಯನ್ನು ಪ್ರಾರಂಭಿಸಿತ್ತು. 2025ರ ಫೆಬ್ರವರಿ 10 ರಂದು ತೀರ್ಪನ್ನು ಕಾಯ್ದಿರಿಸಿತ್ತು. ಇಂದು ಅಂತಿಮ ತೀರ್ಪು ನೀಡಲಾಗಿದೆ.

ಸುಪ್ರೀಂ ಕೋರ್ಟ್ ನೇಮಕಾತಿ ರದ್ದುಗೊಳಿಸಿದರೂ, ನೇಮಕಾತಿ ಅಕ್ರಮಗಳ ಬಗ್ಗೆ ಕೇಂದ್ರ ತನಿಖಾ ದಳ (ಸಿಬಿಐ) ತನ್ನ ತನಿಖೆಯನ್ನು ಮುಂದುವರಿಸಲು ಅವಕಾಶ ಮಾಡಿಕೊಟ್ಟಿದೆ.

## ಸಿಎಂ ಸಿದ್ದರಾಮಯ್ಯ ನಿವಾಸಕ್ಕೆ ಮುತ್ತಿಗೆ ಯತ್ನ: ಬಿಜೆಪಿ ನಾಯಕರ ವಶಕ್ಕೆ ಪಡೆದ ಪೊಲೀಸರು

ಬೆಂಗಳೂರು:ಏ.3: ಸಿಎಂ ಸಿದ್ದರಾಮಯ್ಯ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಮತ್ತಿತರ ಹಿರಿಯ ಬಿಜೆಪಿ ನಾಯಕರು ಪೊಲೀಸರು ಗುರುವಾರ ವಶಕ್ಕೆ ಪಡೆದರು.



ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮತ್ತಿತರ ಬಿಜೆಪಿ ಶಾಸಕರನ್ನು ವಶಕ್ಕೆ ಪಡೆದರು. ಬೆಲೆ ಏರಿಕೆ ಮತ್ತಿತರ ವಿಷಯಗಳ ವಿರುದ್ಧ ಬುಧವಾರ ಫ್ರೀಡಂಪಾರ್ಕ್‌ನಲ್ಲಿ ಅಹೋರಾತ್ರಿ ಧರಣಿ ನಡೆಸಿದ ಬಿಜೆಪಿ ನಾಯಕರು ಗುರುವಾರ ಸಿಎಂ ನಿವಾಸಕ್ಕೆ ಮುತ್ತಿಗೆ ಹಾಕಲು ಮುಂದಾದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ಬೆಲೆ ಏರಿಕೆ, ಮುಸ್ಲಿಮರಿಗೆ ಸರ್ಕಾರಿ ಗುತ್ತಿಗೆಯಲ್ಲಿ ಶೇ. 4 ರಷ್ಟು ಮೀಸಲಾತಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಮೀಸಲಿಟ್ಟ ಹಣ ವರ್ಗಾವಣೆ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದೇವೆ.ಈ ಪ್ರಮುಖ ಮೂರು ವಿಚಾರಗಳನ್ನು ಜನರಿಗೆ ತಲುಪಿಸಲಾಗುವುದು, ರಾಜ್ಯದ ವಿವಿಧ ಕಡೆಗಳಲ್ಲಿ ಪ್ರತಿಭಟನೆ ನಡೆಯಲಿದೆ ಎಂದರು.

ಏ. 7 ರಿಂದ 'ಜನಾಕ್ರೋಶ ಯಾತ್ರೆ' ಆಯೋಜಿಸಲಾಗಿದೆ. ಈ ಯಾತ್ರೆಗೆ ಮೈಸೂರಿನಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ ನೀಡಲಿದ್ದಾರೆ.

ಏ. 7ರಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲೆ, ಏ. 8 ಮಂಡ್ಯ ಮತ್ತು ಹಾಸನ ಏ. 9 ರಂದು ಕೊಡಗು ಮತ್ತು ಮಂಗಳೂರು ಮತ್ತು ಏ. 10 ರಂದು ಉಡುಪಿ ಮತ್ತು ಚಿಕ್ಕಮಗಳೂರಿನಲ್ಲಿ ಮೊದಲ ಹಂತ ಮುಗಿಯಲಿದೆ ಎಂದು ಬಿಜೆಪಿ ಪದಾಧಿಕಾರಿಯೊಬ್ಬರು ತಿಳಿಸಿದ್ದಾರೆ.

ಏ.13ರಂದು ಎರಡನೇ ಹಂತದಲ್ಲಿ ಶಿವಮೊಗ್ಗ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಯಾತ್ರೆ ನಡೆಯಲಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಈ ಹೋರಾಟ ನಡೆಯಲಿದ್ದು, ಪ್ರತಿಜಿಲ್ಲೆಯಲ್ಲಿ ಎರಡರಿಂದ ಮೂರು ಕಿಲೋಮೀಟರ್ ಪಾದಯಾತ್ರೆ ಸಾಗಲಿದೆ ಎಂದು ಅವರು ತಿಳಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.